22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com


EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 22 | ಸಂಚಿಕೆ 135 | ನವದೆಹಲಿ | ಬೆಲೆ ₹ 10 | ನವೆಂಬರ್ 15, 2024 ಶುಕ್ರವಾರ

## ಒಳಪುಟಗಳಲ್ಲಿ

ಬಗರ್‌ಹುಕುಂ: ಅರ್ಜಿಗಳ ವಿಲೇವಾರಿಗೆ ನ.25 ಗಡುವು: ಕೃಷ್ಣ ಬೈರೇಗೌಡ ಎಚ್ಚರಿಕೆ - ಪು.5

ಆಧ್ಯಾತ್ಮಿಕ ಅನುಭೂತಿಯ ಪ್ರತ್ಯಕ್ಷಾನುಭವ ನೀಡಿದ ವಿಶಿಷ್ಟ ರಂಗರೂಪ - ಅದ್ವೈತ ಭಾಸ್ಕರ ಶಂಕರ - ಪು.6

# ನೆಹರೂ ಆಧುನಿಕ ಭಾರತದ ಶಿಲ್ಪಿ: ಮುಖ್ಯಮಂತ್ರಿ ಸಿದ್ದರಾಮಯ್ಯ






**ಬೆಂಗಳೂರು, ನ. 14:** ದೇಶಕ್ಕೆ ಸ್ವಾತಂತ್ರ್ಯ ಬಂದ ನಂತರ ಮೊದಲ ಪ್ರಧಾನಿಯಾದ ಜವಾಹರ್ ಲಾಲ್ ನೆಹರೂ ಅವರು ಆಧುನಿಕ ಭಾರತದ ಶಿಲ್ಪಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಅವರು ಇಂದು ವಿಧಾನಸೌಧದ ಪೂರ್ವದಿಕ್ಕಿನ ಬಳಿ ಮಾಜಿ ಪ್ರಧಾನ ಮಂತ್ರಿ ದಿವಂಗತ ಪಂಡಿತ್ ಜವಾಹರ್‌ಲಾಲ್ ನೆಹರೂರವರ 135ನೇ ವರ್ಷದ ಜನ್ಮ ದಿನಾಚರಣೆ ಅಂಗವಾಗಿ ಅವರ ಪ್ರತಿಮೆ ಬಳಿ ಅವರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ ಮಾತನಾಡಿದರು. ಜವಾಹರ್‌ಲಾಲ್ ನೆಹರು ಅವರ ಜನ್ಮದಿನವನ್ನು ಮಕ್ಕಳ ದಿನಾಚರಣೆಯಾಗಿ ಆಚರಿಸಲಾಗುತ್ತದೆ.ನೆಹರೂ ಅವರಿಗೆ ಮಕ್ಕಳ ಬಗ್ಗೆ ಬಹಳ ಪ್ರೀತಿಯಿದ್ದುದ್ದರಿಂದ ಅವರನ್ನು ಚಾಚಾ ನೆಹರೂ ಎಂದು ಕರೆಯಲಾಗುತ್ತಿತ್ತು ಎಂದರು. ಸುಮಾರು 17 ವರ್ಷಗಳ ಕಾಲ ದೇಶದ ಪ್ರಧಾನಿಯಾಗಿ ದೇಶದಲ್ಲಿ ಮಿಕ್ಸಡ್ ಎಕಾನಮಿ ಜಾರಿ ಮಾಡಿದರು. ಸಮಾಜವಾದಿಯಾಗಿದ್ದ ನೆಹರೂ ಕಾಂಗ್ರೆಸ್ ಪಕ್ಷವನ್ನು ಸಮಾಜವಾದಿಯಾಗಿಸಿದ ರೂವಾರಿ. ನೆಹರೂ, ಲೋಹಿಯಾ ಮೊದಲಾದವರು ಸೇರಿ ಸೋಷಿಯಲಿಸ್ಟ್ ಕಾಂಗ್ರೆಸ್ ಕಟ್ಟಿದರು. 17 ವರ್ಷಗಳಲ್ಲಿ ದೇಶದ ಅನೇಕ ಸಮಸ್ಯೆಗಳನ್ನು ಬಗೆಹರಿಸಿದರು. ಬೃಹತ್ ಕೈಗಾರಿಕೆ, ಅಣೆಕಟ್ಟು, ನೀರಾವರಿ, ಉದ್ಯೋಗ ಸೃಷ್ಟಿ ಮಾಡಿದರು. ವಿಜ್ಞಾನ ಮತ್ತು ವೈಚಾರಿಕತೆಯಲ್ಲಿ ನಂಬಿಕೆ ಇಟ್ಟುಕೊಂಡಿದ್ದ ನೆಹರೂ ಅವರು ಸುದೀರ್ಘ ಕಾಲ ದೇಶದ ಪ್ರಧಾನಿಯಾಗಿದ್ದರು. ಇಂದು ಆಧುನಿಕ ಭಾರತವನ್ನು ನಾವು ಕಾಣುತ್ತಿದ್ದರೆ ಅದಕ್ಕೆ ನೆಹರೂ ಅವರ ಕೊಡುಗೆ ಅಪಾರವಾಗಿದೆ. ಆಹಾರ ಸ್ವಾವಲಂಬನೆಗೆ ನೆಹರೂ, ಇಂದಿರಾ ಗಾಂಧಿ, ಜಗಜೀವನ್ ರಾಂ, ಲಾಲ್‌ಬಹದ್ದೂರ್ ಶಾಸ್ತ್ರಿ ಅವರೆಲ್ಲರೂ ಕಾರಣ. ಒಂದು ಕಾಲದಲ್ಲಿ ಆಹಾರಕ್ಕೆ ಬೇರೆ ದೇಶಗಳ ಮೇಲೆ ಅವಲಂಬಿಸಿದ್ದೆವು. ಇಂದು ನಾವು ಸ್ವಾವಲಂಬಿಯಾಗಿದ್ದರೆ ಅವರು ಕಾರಣ ಎಂದರು.

ಮೂರೂ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಗೆಲ್ಲಲಿದೆ ಉಪಚುನಾವಣೆಯಲ್ಲಿ ಕಾಂಗ್ರೆಸ್ ಮೂರೂ ಕಡೆ ಗೆಲ್ಲಲಿದ್ದೇವೆ ಎಂದು ಮುಖ್ಯಮಂತ್ರಿಗಳು ವಿಶ್ವಾಸ ವ್ಯಕ್ತಪಡಿಸಿದರು.

ಉತ್ತರ ನೀಡುವುದಿಲ್ಲ : ಆಪರೇಶನ್ ಕಮಲದ ಬಗ್ಗೆ ಮುಖ್ಯಮಂತ್ರಿಗಳು ದಾಖಲಾತಿ ಗಳಿದ್ದರೆ ತನಿಖೆ ಮಾಡಿಸಬೇಕೆಂದು ರಾಜ್ಯ ಬಿಜೆಪಿ ಅಧ್ಯಕ್ಷ ವಿಜಯೇಂದ್ರ ಅವರು ನೀಡಿರುವ ಹೇಳಿಕೆಗೆ ಪ್ರತಿಕ್ರಿಯೆ ನೀಡಿದ ಸಿಎಂ ವಿಜಯೇಂದ್ರ ಮೊನ್ನೆ ಮೊನ್ನೆ ಬಂದಿದ್ದಾರೆ. ಈ ಬಗ್ಗೆ ನಾನು ಉತ್ತರ ನೀಡುವುದಿಲ್ಲ ಎಂದರು.

## ಪ್ರಧಾನಿ ಮೋದಿಗೆ ಡೊಮಿನಿಕಾ ಅತ್ಯುನ್ನತ ಗೌರವ ಘೋಷಣೆ



**ನವದೆಹಲಿ, ನ.14:** ಪ್ರಧಾನಿ ನರೇಂದ್ರ ಮೋದಿ ಅವರನ್ನು ಗೌರವಿಸಲು ಡೊಮಿನಿಕಾ ಸರ್ಕಾರ ನಿರ್ಧರಿಸಿದ್ದು, ದೇಶದ ಅತ್ಯುನ್ನತ ರಾಷ್ಟ್ರೀಯ ಪ್ರಶಸ್ತಿಯಾದ ಡೊಮಿನಿಕಾ ಅವಾರ್ಡ್ ಆಫ್ ಆನರ್" ಅನ್ನು ನೀಡಲು ಸಜ್ಜಾಗಿದೆ.

ಕೋವಿಡ್ ಸಾಂಕ್ರಾಮಿಕ ಸಮಯದಲ್ಲಿ ಡೊಮಿನಿಕಾ ಪಡೆದ ಭಾರತೀಯ ಬೆಂಬಲಕ್ಕೆ ಕೃತಜ್ಞತೆಯ ಸಂಕೇತವಾಗಿ ಮತ್ತು ಉಭಯ ದೇಶಗಳ ನಡುವೆ ಬೆಳೆಯುತ್ತಿರುವ ಪಾಲುದಾರಿಕೆಯ ಸಂಕೇತವಾಗಿ ಈ ಪ್ರಶಸ್ತಿಯನ್ನು ನೀಡಲಾಗುವುದು ಎಂದು ಅಲ್ಲಿನ ಪ್ರಧಾನ ಮಂತ್ರಿ ಕಚೇರಿ ತನ್ನ ಹೇಳಿಕೆಯಲ್ಲಿ ತಿಳಿಸಿದೆ.

ಪ್ರಧಾನಿ ನರೇಂದ್ರ ಮೋದಿಯವರ ಸರ್ಕಾರವು ಫೆಬ್ರವರಿ 2021 ರಲ್ಲಿ COVID–19 ಸಾಂಕ್ರಾಮಿಕ ಸಮಯದಲ್ಲಿ ಡೊಮಿನಿಕಾಗೆ ಅಸ್ಟ್ರಾಜೆನೆಕಾ ಲಸಿಕೆಯ 70,000 ಡೋಸ್‌ಗಳನ್ನು ಒದಗಿಸಿತು. ಈ ಲಸಿಕೆ ಪೂರೈಕೆಯನ್ನು ಭಾರತದ ಲಸಿಕೆ ಮೈತ್ರಿ ನೀತಿಯ ಅಡಿಯಲ್ಲಿ ಮಾಡಲಾಗಿದೆ, ಇದು ಅಭಿವೃದ್ಧಿಶೀಲ ರಾಷ್ಟ್ರಗಳಿಗೆ ಸಾಂಕ್ರಾಮಿಕ ರೋಗದ ವಿರುದ್ಧ ಹೋರಾಡಲು ಸಹಾಯ ಮಾಡುವ ಗುರಿಯನ್ನು ಹೊಂದಿತ್ತು.

**ಪ್ರಶಸ್ತಿ ಪ್ರದಾನ:** ಮುಂಬರುವ ಭಾರತ–ಕ್ಯಾರಿಕಾಮ್ ಶೃಂಗಸಭೆಯಲ್ಲಿ ಪ್ರಧಾನಿ ಮೋದಿಯವರಿಗೆ ಡೊಮಿನಿಕನ್ ಅಧ್ಯಕ್ಷ ಸಿಲ್ವಾನಿ ಬರ್ಟನ್ ಈ ಗೌರವವನ್ನು ಪ್ರದಾನ ಮಾಡಲಿದ್ದಾರೆ. ಈ ಶೃಂಗಸಭೆಯು ಗಯಾನಾದ ಜಾರ್ಜ್‌ಟೌನ್‌ನಲ್ಲಿ ನವೆಂಬರ್ 19 ಮತ್ತು 21 ರ ನಡುವೆ ನಡೆಯಲಿದೆ.

## ವಸತಿ ಕಟ್ಟಡ ನಿರ್ಮಾಣಕ್ಕೆ ಸಿಎಂ ಚಾಲನೆ



**ಮೈಸೂರು, ನ.14:** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 170 ಕೋಟಿ ವೆಚ್ಚದ ಮೈಸೂರಿನ ಮಹಾರಾಣಿ ಮಹಿಳಾ ವಿಜ್ಞಾನ ಮತ್ತು ಕಲಾ ಕಾಲೇಜಿನ ನೂತನ ವಸತಿ ನಿಲಯ ಕಟ್ಟಡ ಹಾಗೂ ವಿಜ್ಞಾನ ಕಾಲೇಜಿನ ನೂತನ ಕಟ್ಟಡ ನಿರ್ಮಾಣ ಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿಸಿದರು. ಹಾಗೆಯೇ 49 ಕೋಟಿ ರೂ ವೆಚ್ಚದ ಮಹಾರಾಣಿ ಮಹಿಳಾ ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜಿನ 3,4 ನೇ ಅಂತಸ್ತಿನ ಕಟ್ಟಡ ಹಾಗೂ ವಸತಿ ನಿಲಯದ 3ನೇ ಅಂತಸ್ತಿನ ಕಟ್ಟಡ ನಿರ್ಮಾಣ ಕಾಮಗಾರಿಯ ಶಂಕುಸ್ಥಾಪನೆಯನ್ನೂ ನೆರವೇರಿಸಿದರು.

ಜಿಲ್ಲಾ ಉಸ್ತುವಾರಿ ಸಚಿವರಾದ ಹೆಚ್.ಸಿ.ಮಹದೇವಪ್ಪ, ಉನ್ನತ ಶಿಕ್ಷಣ ಸಚಿವ ಎಂ.ಸಿ.ಸುಧಾಕರ್, ಪಶು ಸಂಗೋಪನಾ ಸಚಿವ ಕೆ.ವೆಂಕಟೇಶ್, ಶಾಸಕರಾದ ತನ್ವೀರ್ ಸೇಠ್, ಹರೀಶ್‌ಗೌಡ, ಡಾ.ತಿಮ್ಮಯ್ಯ, ಯತೀಂದ್ರ ಸಿದ್ದರಾಮಯ್ಯ, ಗ್ಯಾರಂಟಿ ಅನುಷ್ಠಾನ ಸಮಿತಿಯ ಉಪಾಧ್ಯಕ್ಷೆ ಪುಷ್ಪಾ ಅಮರನಾಥ್ ಸೇರಿ ಹಲವು ಗಣ್ಯರು ಹಾಜರಿದ್ದರು.

### ಕಂಠೀರವ ಕ್ರೀಡಾಂಗಣದಲ್ಲಿ ಮಿನಿ ಒಲಿಂಪಿಕ್ಸ್‌ಗೆ ಚಾಲನೆ

## ರಾಜ್ಯಮಟ್ಟದ ಕ್ರೀಡಾಪಟುಗಳಿಗೆ ವಾರ್ಷಿಕ ಪರೀಕ್ಷೆಯಲ್ಲಿ ಗ್ರೇಸ್ ಮಾರ್ಕ್ಸ್: ಸಿಎಂ




**ಬೆಂಗಳೂರು, ನ.14:** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ರಾಜ್ಯದ ಕ್ರೀಡಾಪಟುಗಳಿಗೆ ಸಿಹಿ ಸುದ್ದಿ ನೀಡಿದ್ದು, ವಾರ್ಷಿಕ ಪರೀಕ್ಷೆಯಲ್ಲಿ ಕೃಪಾಂಕ ನೀಡುವ ಚಿಂತನೆ ಇದೆ ಎಂದು ಗುರುವಾರ ಹೇಳಿದ್ದಾರೆ.

ಇಂದು ಕಂಠೀರವ ಒಳಾಂಗಣ ಕ್ರೀಡಾಂಗಣದಲ್ಲಿ ಮಿನಿ ಒಲಿಂಪಿಕ್ಸ್ ಕ್ರೀಡಾಕೂಟಕ್ಕೆ ಚಾಲನೆ ನೀಡಿ ಮಾತನಾಡಿದ ಸಿಎಂ, ರಾಜ್ಯಮಟ್ಟದ ಕ್ರೀಡಾಪಟುಗಳಿಗೆ ವಾರ್ಷಿಕ ಪರೀಕ್ಷೆಯಲ್ಲಿ ಗ್ರೇಸ್ ಮಾರ್ಕ್ಸ್ ನೀಡಲು ಚಿಂತನೆ ನಡೆದಿದೆ.

ಶೀಘ್ರವೇ ಇದರ ಬಗ್ಗೆ ಪರಿಶೀಲಿಸಿ ನಿರ್ಧಾರ ಪ್ರಕಟಿಸುತ್ತೇವೆ ಎಂದರು.

ಕ್ರೀಡಾಪಟುಗಳಿಗೆ ಪೊಲೀಸ್ ಇಲಾಖೆಯಲ್ಲಿ ಶೇ..3ರಷ್ಟು ಮೀಸಲಾತಿ ಇದೆ. ಇತರೆ ಇಲಾಖೆಯಲ್ಲಿ ಶೇ. 2 ರಷ್ಟು ಮೀಸಲಾತಿ ಇದೆ. ರಾಜ್ಯದ ಕ್ರೀಡಾಪಟುಗಳು ಕಾಮನ್ವೆಲ್ತ್, ಒಲಿಂಪಿಕ್ಸ್ ನಲ್ಲಿ ಭಾಗವಹಿಸಿ. ಒಲಿಂಪಿಕ್ಸ್ ಪದಕ ಗೆದ್ದ ರಾಜ್ಯದ ಕೀಡಾಪಟುಗಳಿಗೆ ಬಹುಮಾನ ನೀಡಲಾಗುತ್ತದೆ. ಚಿನ್ನ ಗೆದ್ದರೆ 5 ಕೋಟಿ, ಬೆಳ್ಳಿ ಗೆದ್ದರೆ 3 ಕೋಟಿ ಬಹುಮಾನ ನೀಡುತ್ತೇವೆ ಎಂದರು.

ಮಿನಿ ಒಲಿಂಪಿಕ್ ಕ್ರೀಡಾಕೂಟ ಇಂದಿನಿಂದ ಆರಂಭ ಆಗ್ತಿದೆ. ಈ ಕ್ರೀಡಾಕೂಟ ಕ್ರೀಡಾ ಇಲಾಖೆಯ ವತಿಯಿಂದ ಆಯೋಜನೆ ಮಾಡಲಾಗಿದೆ.

ಈ ಕ್ರೀಡಾಕೂಟವನ್ನು ಅತ್ಯಂತ ಸಂತೋಷದಿಂದ ಉದ್ಘಾಟನೆ ಮಾಡಿದ್ದೇನೆ. ರಾಜ್ಯದ ಮೂಲೆಮೂಲೆಗಳಿಂದ ಕ್ರೀಡಾಪಟುಗಳು ಭಾಗವಹಿಸಿದ್ದಾರೆ. ಐದು ಸಾವಿರಕ್ಕೂ ಹೆಚ್ಚು ಜನ ಭಾಗವಹಿಸುತ್ತಿದ್ದಾರೆ. ನಿಮ್ಮೆಲ್ಲರಿಗೂ ಶುಭಾಶಯ ಹೇಳುತ್ತೇನೆ. ಕ್ರೀಡಾಂಗಣದಲ್ಲಿ ಭಾಗಿಯಾದ ಎಲ್ಲರೂ ಗೆಲ್ಲೋದಕ್ಕೆ ಸಾಧ್ಯವಿಲ್ಲ. ಆದರೆ ಕ್ರೀಡಾಕೂಟದಲ್ಲಿ ಭಾಗಿಯಾಗೋದು ಮುಖ್ಯ ಎಂದರು.

ಒಲಿಂಪಿಕ್ಸ್ ನಲ್ಲಿ ಚಿನ್ನ ಗೆದ್ರೆ ಐದು ಕೋಟಿ, ಬೆಳ್ಳಿ ಗೆದ್ರೆ ಮೂರು ಕೋಟಿ ಕೊಡ್ತಿದ್ದೇವೆ. ನೀವು ಅಂತಾರಾಷ್ಟ್ರೀಯ ಕ್ರೀಡಾಕೂಟದಲ್ಲಿ ಭಾಗಿಯಾಗುವಷ್ಟರ ಮಟ್ಟಿಗೆ ಬೆಳೆಯಬೇಕು. ಕಾಮನ್‌ವೆಲ್ತ್, ಏಷಿಯನ್ ಗೇಮ್ಸ್, ಒಲಿಂಪಿಕ್ಸ್ ನಂತಹ ದೊಡ್ಡ ದೊಡ್ಡ ವೇದಿಕೆಗೆ ಹೋಗಬೇಕು. ಜೊತೆಗೆ ಭಾರತವನ್ನು ಅಂತಾರಾಷ್ಟ್ರೀಯ ಮಟ್ಟದಲ್ಲಿ ಪ್ರತಿನಧಿಸಿದರೆ ಸರ್ಕಾರಿ ಕೆಲಸ ಸಹ ಕೊಡುತ್ತಿದ್ದೇವೆ ಎಂದ ಸಿಎಂ ಸಿದ್ದರಾಮಯ್ಯ ಕಿವಿ ಮಾತು ಹೇಳಿದರು.

### ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ಮಹಿಳೆಯರಿಗೆ ಶಕ್ತಿ ತುಂಬುವ ಕೆಲಸ: ನಿರ್ಮಲಾ ಸೀತಾರಾಮನ್

## ಧರ್ಮಸ್ಥಳದಲ್ಲಿ ಸ್ವಸಹಾಯ ಸಂಘದ ಸದಸ್ಯರಿಗೆ ಲಾಭಾಂಶ ವಿತರಣೆ



**ಮುಂಬಯಿ, (ಆರ್‌ಬಿಐ) ನ.14:** ಧರ್ಮಸ್ಥಳ: ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ಬಿ.ಸಿ.ಟ್ರಸ್ಟ್ ಇದರ ವತಿಯಿಂದ ಸ್ವ–ಸಹಾಯ ಸಂಘಗಳ ಸದಸ್ಯರಿಗೆ ಲಾಭಾಂಶ ವಿತರಣಾ ಕಾರ್ಯಕ್ರಮ ಗುರುವಾರ ಅಮೃತ ವರ್ಷಿಣಿ ಸಭಾಭವನದಲ್ಲಿ ನಡೆಯಿತು.

ಕಾರ್ಯಕ್ರಮವನ್ನು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ದೀಪ ಬೆಳಗಿಸುವ ಮೂಲಕ ಉದ್ಘಾಟಿಸಿದರು. ಬಳಿಕ ಮಾತಾಡಿದ ಅವರು, ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ಗ್ರಾಮೀಣ ಭಾಗದ ಮಹಿಳೆಯರಿಗೆ ಶಕ್ತಿ ತುಂಬುವ ಕೆಲಸ ನಡೆಯುತ್ತಿದೆ. ಇಂದು ದೇಶದಲ್ಲಿ ಕೃಷಿ ಕ್ಷೇತ್ರದ ಕ್ರಾಂತಿಯಾಗಿದೆ. ದೇಶದ ಜನರಿಗೆ ಸಾಕಾಗುವಷ್ಟು ಅಕ್ಕಿ, ಧವಸ ಧಾನ್ಯ ಉತ್ಪಾದನೆಯಾಗುತ್ತಿದೆ. ರೈತರು ಸಶಕ್ತರಾಗಿದ್ದಾರೆ. ಧರ್ಮಸ್ಥಳ ಕ್ಷೇತ್ರದ ಧರ್ಮಾಧಿಕಾರಿ ಅವರು ಈ ನಿಟ್ಟಿನಲ್ಲಿ ಉತ್ತಮ ಕೆಲಸ ಮಾಡುತ್ತಿದ್ದಾರೆ ಎಂದರು.

ಗ್ರಾಮಾಭಿವೃದ್ಧಿ ಯೋಜನೆಯಿಂದ ಫಲ ಪಡೆದು ಲಾಭಾಂಶವನ್ನು ಸ್ವೀಕರಿಸಿರುವ ಎಲ್ಲರಿಗೂ ವಂದನೆಗಳು. ಇಂಥ ಕಾರ್ಯಕ್ರಮಗಳಿಂದ ಇಂದು ಮಹಿಳೆಯರು ಸ್ವಯಂ ಗೌರವದಿಂದ ನಾವೂ ದುಡಿಯುತ್ತಿದ್ದೇವೆ ಎಂದು ಹೇಳಬಹುದಾಗಿದೆ. ನೀವು ಕೊಡುವ ಹಣ ಲಾಭದ ರೂಪದಲ್ಲಿ ಗೌರವಪೂರ್ವಕವಾಗಿ ನಿಮಗೆ ವಾಪಾಸ್ ಬಂದಿದೆ.

ಗ್ರಾಮೀಣ ಅಭಿವೃದ್ಧಿಗೆ ಜನರ ಹಣ ಬಳಕೆಯಾಗುತ್ತಿದೆ. ಕೋವಿಡ್ ಸಮಯದಲ್ಲಿ ಆತ್ಮನಿರ್ಭರ್ ಭಾರತ್ ಘೋಷಣೆ ಮಾಡಿದ ಬಳಿಕ 5 ಮಿನಿ ಬಜೆಟ್ ಗಳನ್ನು ರಾಷ್ಟ್ರಕ್ಕೆ ಅರ್ಪಿಸಿದ್ದೇವೆ. ಗ್ರಾಮೀಣ ಭಾಗದ ಮಹಿಳೆಯರು ತಮ್ಮ ಗ್ರಾಮದ ಅಭಿವೃದ್ಧಿಗೆ ಕಾರಣರಾಗುತ್ತಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರ ಕನಸು ಕೂಡ ಇದೇ ಆಗಿದೆ. ಹೆಣ್ಮಕ್ಕಳು ನಾಯಕತ್ವ ವಹಿಸಿದರೆ ಏನಾಗುತ್ತೆ ಅನ್ನುವುದಕ್ಕೆ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಉತ್ತಮ ಉದಾಹರಣೆ. ಧರ್ಮಸ್ಥಳ ಇದು ಗ್ರಾಮೀಣ ಯೋಜನೆಯ ಪ್ರಯೋಗಲಾಯ ಎಂದರೆ ತಪ್ಪಾಗದು ಎಂದು ಯೋಜನೆಯ ಕಾರ್ಯವೈಖರಿಯನ್ನು ಶ್ಲಾಘಿಸಿದರು.


ಬಳಿಕ ಮಾತಾಡಿದ ಧರ್ಮಾಧಿಕಾರಿ ಡಿ.ವೀರೇಂದ್ರ ಹೆಗ್ಗಡೆ ಅವರು, ನಿರ್ಮಲಾ ಸೀತಾರಾಮನ್ ಅವರು ದೇಶದ ಆರ್ಥಿಕ ಮಂತ್ರಿಯಾದರೆ ನಾವು ನಮ್ಮ ಸಂಘದ ಮಹಿಳೆಯರನ್ನು ಆರ್ಥಿಕ ಮಂತ್ರಿಯನ್ನಾಗಿ ಮಾಡಿದ್ದೇವೆ. ಯೋಜನೆಯಲ್ಲಿ 62% ಮಹಿಳೆಯರು ಇದ್ದರೆ 38% ಮಂದಿ ಪುರುಷರು ಇದ್ದಾರೆ. ಮಹಿಳೆಯರನ್ನು ಮಾತ್ರವಲ್ಲದೆ ಗಂಡಸರನ್ನು ನಂಬಿ ಸಾಲ ಕೊಟ್ಟವರು ನಾವು. ಎಲ್ಲ ಸಂಘಗಳು ಶಿಸ್ತುಬದ್ಧವಾಗಿ ಕೆಲಸ ಮಾಡಿದರೆ ಏನು ಪ್ರಯೋಜನವಾಗುತ್ತದೆ ಅನ್ನುವುದಕ್ಕೆ ಲಾಭಾಂಶ ವಿತರಣೆ ಕಾರ್ಯಕ್ರಮ ಸಾಕ್ಷಿ. ಬ್ಯಾಂಕ್ ನಿಮ್ಮನ್ನು ನಂಬಿ ನಮಗೆ ಸಾಲ ಕೊಟ್ಟಿದೆ. ನಾವು ನಿಮ್ಮನ್ನು ನಂಬಿ ಸಾಲ ಕೊಟ್ಟಿದ್ದೇವೆ. ಹೆಣ್ಮಕ್ಕಳ ಕೈಗೆ ಹಣ ಕೊಟ್ಟಲ್ಲಿ ಹಣದ ಸರಿಯಾದ ಬಳಕೆಯಾಗುತ್ತದೆ. ನೀವು ಗೃಹಲಕ್ಷ್ಮಿಯಾಗಿದ್ದೀರಿ. ನಿಮ್ಮಿಂದ ಸಂಸ್ಥೆಗೆ ಕೀರ್ತಿ ಬಂದಿದೆ ಎಂದರು.

ಬಳಿಕ ಸಂಘಗಳ ಸದಸ್ಯರಿಗೆ ಲಾಭಾಂಶದ ಚೆಕ್ ಅನ್ನು ವಿತರಣೆ ಮಾಡಲಾಯಿತು. ನಬಾರ್ಡ್ ಬ್ಯಾಂಕ್ ಅಧ್ಯಕ್ಷ ಶಾಜಿ ಕೆ.ವಿ. ಮಾತಾಡಿ, 1992ರಲ್ಲಿ ನಬಾರ್ಡ್ ಪ್ರಾರಂಭಗೊಂಡಿದ್ದು ಅಂದಿನಿಂದ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಜೊತೆಗೂಡಿ ಅನೇಕ ಕಾರ್ಯಕ್ರಮಗಳನ್ನು ನಡೆಸುತ್ತ ಬಂದಿದೆ. ಈಗ ರಾಷ್ಟ್ರೀಯ ಮಟ್ಟದ ಕಾರ್ಯಕ್ರಮವಾಗಿ ನಡೆಯುತ್ತಿರುವುದು ಖುಷಿಯ ವಿಚಾರ. ಸಣ್ಣ ಮಧ್ಯಮ ಉದ್ಯಮಗಳಿಗೆ ಸ್ವ–ಸಹಾಯ ಸಂಘಗಳು ಬೆಂಬಲ ನೀಡುತ್ತಿರುವ ಕಾರಣ ಗ್ರಾಮೀಣ ಮಟ್ಟದಲ್ಲಿ ಬಹಳಷ್ಟು ಅಭಿವೃದ್ಧಿಯಾಗಿದೆ. 600 ಕೋಟಿಯಷ್ಟು ದೊಡ್ಡ ಮೊತ್ತ ಲಾಭವನ್ನು ಸ್ವ–ಸಹಾಯ ಸಂಘದ ಸದಸ್ಯರಿಗೆ ಹಂಚುವ ಸಂಘದ ಕ್ರಮ ಶ್ಲಾಘನೀಯವಾದುದು ಎಂದರು.

ವೇದಿಕೆಯಲ್ಲಿ ಗ್ರಾಮಾಭಿವೃದ್ಧಿ ಯೋಜನೆಯ ಜ್ಞಾನವಿಕಾಸ ಕಾರ್ಯಕ್ರಮದ ಅಧ್ಯಕ್ಷೆ ಹೇಮಾವತಿ ವಿ. ಹೆಗ್ಗಡೆ, ದಕ್ಷಿಣ ಕನ್ನಡ ಸಂಸದ ಕ್ಯಾಪ್ಟನ್ ಬೃಜೇಶ್ ಚೌಟ, ಬೆಳ್ತಂಗಡಿ ಶಾಸಕ ಹರೀಶ್ ಪೂಂಜಾ, ವಿಧಾನ ಪರಿಷತ್ ಶಾಸಕ ಪ್ರತಾಪ್ ಸಿಂಹ ನಾಯಕ್ ಉಪಸ್ಥಿತರಿದ್ದರು.

ಯೋಜನೆಯ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಅನಿಲ್ ಕುಮಾರ್ ಎಸ್. ಎಸ್. ಪ್ರಾಸ್ತಾವಿಕ ಮಾತನ್ನಾಡಿ ಅತಿಥಿಗಳನ್ನು ಸ್ವಾಗತಿಸಿದರು. ಶಾಂತಾರಾಮ್ ಆರ್.ಪೈ, ಪ್ರವೀಣ್ ಎಂ.ಸಿ. ಕಾರ್ಯಕ್ರಮ ನಿರೂಪಿಸಿದರು. ಆನಂದ ಸುವರ್ಣ ಧನ್ಯವಾದ ಸಮರ್ಪಿಸಿದರು.

## ದೆಹಲಿಯಲ್ಲಿ ವಾಯುಮಾಲಿನ್ಯ: 300ಕ್ಕೂ ಅಧಿಕ ವಿಮಾನಗಳ ಹಾರಾಟ ವ್ಯತ್ಯಯ



**ನವದೆಹಲಿ, ನ.14:** ರಾಷ್ಟ್ರ ರಾಜಧಾನಿ ದೆಹಲಿಯಲ್ಲಿ ವಾಯು ಮಾಲಿನ್ಯ ಮುಂದುವರಿದಿದೆ. ಇಂದು ಮುಂಜಾನೆ AQI 452ರ ಗಡಿ ದಾಟಿದ್ದು ದಟ್ಟಮಂಜಿನಂತಹ ಹೊಗೆ ಆಚರಿಸಿಕೊಂಡಿತ್ತು. ಫ್ಲೈಟ್ರಾಡಾರ್ ಪ್ರಕಾರ ದೆಹಲಿಯ ಇಂದಿರಾಗಾಂಧಿ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಗೋಚರತೆ ಕಡಿಮೆಯಾಗಿದೆ, ಇದರಿಂದಾಗಿ 300 ಅಧಿಕ ವಿಮಾನಗಳು ವಿಳಂಬವಾಗಿವೆ. ಕೇಂದ್ರೀಯ ಮಾಲಿನ್ಯ ನಿಯಂತ್ರಣ ಮಂಡಳಿ ಪ್ರಕಾರ, ರಾಜಧಾನಿ ಪ್ರದೇಶದ ಹಲವಾರು ಪ್ರದೇಶಗಳಲ್ಲಿ AQI 450 ಕ್ಕಿಂತ ಹೆಚ್ಚು ದಾಖಲಾಗಿದೆ. ಆನಂದ್ ವಿಹಾರ್, ಅಶೋಕ್ ವಿಹಾರ್, ಬವಾನಾ, ದ್ವಾರಕಾ, ಜಹಾಂಗೀರ್‌ಪುರಿ, ಮುಂಡ್ಕಾ, ನಜಾಫ್‌ಗಢ್, ಲಜಪತ್ ನಗರ, ಪಟ್ಪರ್ಗಂಜ್, ಪಂಜಾಬಿ ಬಾಗ್, ಆರ್‌ಕೆ ಪುರಂ, ರೋಹಿಣಿ, ವಿವೇಕ್ ವಿಹಾರ್, ಮತ್ತು ವಜೀರ್ಪುರ ದೆಹಲಿಯ ಹಲವಾರು ಪ್ರದೇಶಗಳಲ್ಲಿ ಸೇರಿವೆ. ಹದಗೆಡುತ್ತಿರುವ ಗಾಳಿಯ ಗುಣಮಟ್ಟದ ಕುರಿತು ಮಾತನಾಡಿದ ದೆಹಲಿ ಬಿಜೆಪಿ ಅಧ್ಯಕ್ಷ ವೀರೇಂದ್ರ ಸಚ್ದೇವ ಅವರು ಆತಿಶಿ ಸರ್ಕಾರವನ್ನು ತರಾಟೆಗೆ ತೆಗೆದುಕೊಂಡರು, ನಾವು ಕರ್ತವ್ಯ ಪಥದಲ್ಲಿ ನಿಂತಿದ್ದೇವೆ ಇಲ್ಲಿ AQI 474 ತಲುಪಿದೆ. ನಮಗೆ ಇಂಡಿಯಾ ಗೇಟ್ ಅನ್ನು ಸಹ ನೋಡಲಾಗುತ್ತಿಲ್ಲ, ಎಎಪಿ ಸರ್ಕಾರದ ಅಸಮರ್ಥತೆ ಇದಕ್ಕೆ ಕಾರಣ ಎಂದು ವಾಗ್ದಾಳಿ ನಡೆಸಿದರು. ಕಾಂಗ್ರೆಸ್ ನಾಯಕಿ ಪ್ರಿಯಾಂಕಾ ಗಾಂಧಿ ವಾದ್ರಾ ಅವರು ವಯನಾಡ್‌ನಿಂದ ದೆಹಲಿಗೆ ಹಿಂದಿರುಗಿದ ಬಗ್ಗೆ ಮಾತನಾಡಿ, ದೆಹಲಿಗೆ ಆಗಮಿಸಿದ್ದು ಗ್ಯಾಸ್ ಚೇಂಬರ್ಗೆ ಪ್ರವೇಶಿಸಿದ ಅನುಭವ" ಎಂದು ಹೇಳಿದರು. ವಯನಾಡಿನ ವಾಯು ಗುಣಮಟ್ಟ ಸೂಚ್ಯಂಕವು 35 ರಷ್ಟಿದ್ದರೆ, ದೆಹಲಿಯ ಮಾಲಿನ್ಯವು ಮರುಕಳಿಸಲಾಗದ ಬಿಕ್ಕಟ್ಟಾಗಿದೆ ಎಂದು ವಿವರಿಸಿದರು. ರಾಜಕೀಯ ಭಿನ್ನಾಭಿಪ್ರಾಯಗಳನ್ನು ಮೀರಿ ಸಾಮೂಹಿಕ ಕ್ರಮಕ್ಕೆ ಕರೆ ನೀಡಿದರು. ಇಂಡಿಯನ್ ಇನ್ಸ್ಟಿಟ್ಯೂಟ್ ಆಫ್ ಟ್ರಾಪಿಕಲ್ ಮೆಟಿಯರಾಲಜಿಯು ನವೆಂಬರ್ 15 ರಿಂದ ದೆಹಲಿಯ ಏರ್ ಕ್ವಾಲಿಟಿ ಇಂಡೆಕ್ಸ್‌ನಲ್ಲಿ ಸ್ವಲ್ಪ ಸುಧಾರಣೆಯನ್ನು ಕಂಡು ಬರುವ ಮುನ್ಸೂಚನೆಯನ್ನು ಒದಗಿಸಿದೆ, ವಾರಾಂತ್ಯದಲ್ಲಿ ಮತ್ತಷ್ಟು ಬದಲಾವಣೆಗಳನ್ನು ನಿರೀಕ್ಷಿಸಲಾಗಿದೆ.

## ನಿತ್ಯ ಪಂಚಾಂಗ 15.11.2024 ಶುಕ್ರವಾರ



ಶ್ರೀ ಕ್ರೋಧಿ ನಾಮ ಸಂವತ್ಸರ,
ದಕ್ಷಿಣಾಯನ-ಶರದ್ ಋತು,
ಚಾಂದ್ರಮಾನ, ಆಶ್ವಯುಜ ಕಾರ್ತಿಕ ಶುದ್ಧ

ಪೂರ್ಣಿಮ, ಭರಣಿ ನಕ್ಷತ್ರ,
ಗುರುನಾನಕರ್ ಜಯಂತಿ,
ಧರ್ಮ ಸಾವರ್ಣಿಮನ್ವಾದಿ,
ಕಾರ್ತಿಕೇಯ ಸ್ವಾಮಿ ದರ್ಶನ, ಗೌರೀ ಹುಣ್ಣಿಮೆ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| | ರಾಹುಕಾಲ | ಯಮಗಂಡ | ಗುಳಿಕಕಾಲ |
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 –12.00 | 1.30 – 3.00 |
| ಮಂಗಳ | 3.00 – 4.30 | 9.00 –10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 –12.00 |
| ಗುರು | 1.30 – 3.00 | 6.00 – 7.30 | 9.00 –10.30 |
| ಶುಕ್ರ | 10.30 –12.00 | 3.00 – 4.30 | 7.30 – 9.00 |
| ಶನಿ | 9.00 –10.30 | 1.30 – 3.00 | 6.00 – 7.30 |

# ದೇಶದ ನಿರ್ಮಾಣ: ನೆಹರೂ ಭದ್ರ ಬುನಾದಿಗೆ ಬೆಂಗಳೂರು ಸಾಕ್ಷಿ: ಡಿಕೆಶಿ

**ಬೆಂಗಳೂರು, ನ.14:** ದೇಶದ ನಿರ್ಮಾಣಕ್ಕಾಗಿ ಮಾಜಿ ಪ್ರಧಾನಿ ಜವಾಹರ್ ಲಾಲ್ ನೆಹರೂ ಅವರು ಹಾಕಿರುವ ಭದ್ರ ಬುನಾದಿಗೆ ಬೆಂಗಳೂರು ಸಾಕ್ಷಿ, ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು. ಕೆಪಿಸಿಸಿ ಕಚೇರಿಯ ಭಾರತ ಜೋಡೋ ಭವನದಲ್ಲಿ ಗುರುವಾರ ನಡೆದ ಜವಾಹರ್‌ಲಾಲ್ ನೆಹರೂ ಜಯಂತಿ ಹಾಗೂ ಮಕ್ಕಳ ದಿನಾಚರಣೆ ಕಾರ್ಯಕ್ರಮದಲ್ಲಿ ಶಿವಕುಮಾರ್ ಅವರು ಮಾತನಾಡಿ, ನೆಹರೂ ಅವರ ಕೊಡುಗೆ ಹಾಗೂ ಮಕ್ಕಳ ಏಳಿಗೆಗೆ ಕಾಂಗ್ರೆಸ್ ಪಕ್ಷದ ಕೊಡುಗೆಗಳನ್ನು ಸ್ಮರಿಸಿದರು. ಈ ಸಂದರ್ಭದಲ್ಲಿ ಅವರು ಹೇಳಿದ್ದಿಷ್ಟು,

ನೆಹರೂ ಅವರು ಬೆಂಗಳೂರಿನಲ್ಲಿ ಸಾರ್ವಜನಿಕ ಉದ್ದಿಮೆಗಳು ಎಚ್‌ಎಎಲ್, ಐಟಿಐ, ಬಿಇಎಂಎಲ್, ಬಿಇಎಲ್, ಇಸ್ರೋ ಸೇರಿದಂತೆ ಅನೇಕ ಉದ್ದಿಮೆಗಳು ಆರಂಭಿಸಿದರು. ಇಲ್ಲಿರುವ ಮಾನವ ಸಂಪನ್ಮೂಲ, ಗುಣಮಟ್ಟದ ಶಿಕ್ಷಣದ ಮೇಲೆ ವಿಶೇಷ ಆದ್ಯತೆ ನೀಡಿದರು. ಅವರು ಹಾಕಿಕೊಟ್ಟ ಅಡಿಪಾಯದಲ್ಲಿ ನಾವು ಇಂದು ಈ ದೇಶ ಕಟ್ಟುತ್ತಿದ್ದೇವೆ. ಮಕ್ಕಳಿಗೆ ಶಿಕ್ಷಣ ಸಿಗಬೇಕು, ಮಕ್ಕಳು ಶಾಲೆಯಿಂದ ವಿಮುಖರಾಗಬಾರದು ಎಂದು ಎಸ್ ಎಂ ಕೃಷ್ಣ ಅವರ ಅವಧಿಯಲ್ಲಿ ಬಿಸಿಯೂಟ ಕಾರ್ಯಕ್ರಮ ನೀಡಲಾಯಿತು. ಸಿದ್ದರಾಮಯ್ಯ ಅವರ ಸರ್ಕಾರದಲ್ಲಿ ಶಾಲಾಮಕ್ಕಳಿಗೆ ಶೂ, ಸಾಕ್ಸ್, ಕ್ಷೀರಭಾಗ್ಯ, ಮೊಟ್ಟೆಭಾಗ್ಯ ನೀಡಿ ಪೌಷ್ಟಿಕತೆ ಹೆಚ್ಚಿಸಿದರು.

ಇಂದಿರಾ ಗಾಂಧಿ ಅವರ ಕಾಲದಲ್ಲಿ ಅಂಗನವಾಡಿ ಕಾರ್ಯಕ್ರಮ ಮಾಡಲಾಯಿತು. ಹೀಗೆ ಕಾಂಗ್ರೆಸ್ ಸರ್ಕಾರ ಸದಾ ಮಕ್ಕಳಿಗೆ ಹೆಚ್ಚಿನ ಆದ್ಯತೆ ನೀಡುತ್ತಾ ಬಂದಿದೆ. ಇನ್ನು ಈ ವರ್ಷದಿಂದ ಗ್ರಾಮೀಣ ಭಾಗದಲ್ಲಿ



ಪಂಚಾಯಿತಿ ಮಟ್ಟದಲ್ಲಿ 2 ಸಾವಿರ ಸಿಎಸ್ ಆರ್ ಶಾಲೆಗಳನ್ನು ಆರಂಭಿಸಲು ಮುಂದಾಗಿದ್ದೇವೆ. ಇದಕ್ಕಾಗಿ ನನ್ನನ್ನು ಸೇರಿದಂತೆ ನಾಲ್ಕೈದು ಮಂತ್ರಿಗಳಿಗೆ ಮುಖ್ಯಮಂತ್ರಿಗಳು ಜವಾಬ್ದಾರಿ ನೀಡಿದ್ದು, ಈಗಾಗಲೇ 50 ಶಾಲೆಗಳ ನಿರ್ಮಾಣಕ್ಕೆ ಮುಂದಾಗಿದ್ದೇವೆ. ಹೀಗೆ ಸರ್ಕಾರ ವಿಭಿನ್ನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಮಕ್ಕಳಿಗಾಗಿ ಕಾಂಗ್ರೆಸ್ ಪಕ್ಷದಿಂದ ನೂತನ ಘಟಕ ಜವಾಹರ್ ಲಾಲ್ ನೆಹರೂ ಅವರ ಜನ್ಮದಿನವನ್ನು ಮಕ್ಕಳ ದಿನವಾಗಿ ಆಚರಣೆ ಮಾಡಲಾಗುತ್ತದೆ. ಈ ವರ್ಷ ಕಾಂಗ್ರೆಸ್ ಪಕ್ಷದಲ್ಲಿ ಹೊಸ ಘಟಕ ಆರಂಭಿಸಲಾಗಿದೆ. ಹೊಸ ಪೀಳಿಗೆಗೆ ಕಾಂಗ್ರೆಸ್ ಪಕ್ಷದ ಆಚಾರ ವಿಚಾರ, ಜಾತ್ಯಾತೀತ ತತ್ವವನ್ನು ಯುವ ಪೀಳಿಗೆಗಳಿಗೆ ಸಣ್ಣ ವಸ್ಸಿನಿಂದಲೇ ಅರಿವು ಮೂಡಿಸಲು ಜವಾಹರ್‌ಲಾಲ್ ಬಾಲ ಮಂಚ್ ಅನ್ನು ಆರಂಭಿಸಲಾಗಿದೆ. ಯುವ ಕಾಂಗ್ರೆಸ್, ಮಹಿಳಾ ಕಾಂಗ್ರೆಸ್ ನಂತೆ ಇದು ಕೂಡ ಹೊಸ ಘಟಕವಾಗಿದೆ. ದೇಶದಾದ್ಯಂತ ಸಂವಿಧಾನ, ಜಾತ್ಯಾತೀತ ತತ್ವ ಹಾಗೂ ಪಕ್ಷದ ಸಂವಿಧಾನದ ಬಗ್ಗೆ ಮಾಹಿತಿ ನೀಡಲಾಗುವುದು. ಪಕ್ಷದ ಎಲ್ಲಾ ನಾಯಕರು ತಮ್ಮ ವ್ಯಾಪ್ತಿಯಲ್ಲಿ ಈ ಘಟಕಕ್ಕೆ ಹೆಚ್ಚಿನ ಉತ್ತೇಜನ ನೀಡಬೇಕು.

ವಿಧಾನಸೌಧದಲ್ಲಿ ಬೆಂಗಳೂರು ನಗರ ಪಾಲಿಕೆ ವ್ಯಾಪ್ತಿಯಲ್ಲಿನ ಸರ್ಕಾರಿ ಶಾಲಾ ಮಕ್ಕಳ ಜತೆಗೆ ಸಂವಾದ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ವಿವಿಧ ಶಾಲೆಗಳ 300 ಶಾಲಾ ಮಕ್ಕಳೊಂದಿಗೆ ನಾನು ಹಾಗೂ ಪ್ರಾಥಮಿಕ ಶಿಕ್ಷಣ ಸಚಿವರಾದ ಮಧು ಬಂಗಾರಪ್ಪ ಅವರು ಸಂವಾದ ಮಾಡಿದೆವು. ಮಕ್ಕಳ ಆಸೆ, ಆಲೋಚನೆಗಳ ಬಗ್ಗೆ ಚರ್ಚೆ ಮಾಡಿದೆವು. ಒಟ್ಟಾಗಿ ಸೇರಿ ಭೇದ ಭಾವ ತೊರೆದು ಬದುಕುವ ನಾವು ಭಾರತೀಯರು ಎಂದು ಗಟ್ಟಿಯಾಗಿ ಹೇಳುವ ಎಂಬ ನೆಹರೂ ಅವರ ಸಂದೇಶದಂತೆ ನಾವು ಬದುಕೋಣ.?

# ಶಾಸಕರಿಗೆ ಕೋಟಿ ಕೋಟಿ ಆಮಿಷ ನಿಜ: ಡಿ.ಕೆ. ಶಿವಕುಮಾರ್ ಸಮರ್ಥನೆ

**ಬೆಂಗಳೂರು, ನ.14–** ಸರ್ಕಾರವನ್ನು ಅಸ್ಥಿರಗೊಳಿಸಲು ಐವತ್ತು ಜನ ಕಾಂಗ್ರೆಸ್ ಎಂಎಲ್‌ಎಗಳಿಗೆ ಬಿಜೆಪಿಯವರು 50 ಕೋಟಿ ಆಮಿಷ ಒಡ್ಡಿರುವುದು ನಿಜ ಎಂದು ಉಪಮುಖ್ಯಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷರಾದ ಡಿ. ಕೆ. ಶಿವಕುಮಾರ್ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಹೇಳಿಕೆಯನ್ನು ಸಮರ್ಥಿಸಿದರು.

ಮಾಧ್ಯಮಗಳೊಂದಿಗೆ, ಆಪರೇಷನ್ ಕಮಲದ ಬಗ್ಗೆ ನಮ್ಮ ಶಾಸಕರ ಬಳಿ ಮಾತನಾಡಿದ್ದಾರೆ. ಈ ವಿಚಾರವನ್ನು ಕೆಲವರು ಬಂದು ಮುಖ್ಯಮಂತ್ರಿಯ ಬಳಿ ತಿಳಿಸಿದ್ದಾರೆ. ಈ ಸಂಗತಿಯನ್ನು ಮುಖ್ಯಮಂತ್ರಿಗಳು ಮಾಧ್ಯಮದ ಮುಂದೆ ಹೇಳಿದ್ದಾರೆ. ಮಿಕ್ಕ ವಿಚಾರಗಳನ್ನು ಅನಂತರ ನಿಮಗೆ ತಿಳಿಸುತ್ತೇನೆ ಜವಾಹರ್ ಲಾಲ್ ನೆಹರೂ ಜಯಂತಿ ಹಾಗೂ ಮಕ್ಕಳ ದಿನಾಚರಣೆ ಕಾರ್ಯಕ್ರಮದ ಕುರಿತು ಡಿ.ಕೆ.ಶಿವಕುಮಾರ್ ಅವರು ಮಾತನಾಡಿ, ದೇಶದ ನಿರ್ಮಾಣಕ್ಕಾಗಿ ಮಾಜಿ ಪ್ರಧಾನಿ ಜವಾಹರ್ ಲಾಲ್ ನೆಹರೂ ಅವರು ಹಾಕಿರುವ ಭದ್ರ ಬುನಾದಿಗೆ ಬೆಂಗಳೂರು ಸಾಕ್ಷಿ. ನೆಹರೂ ಅವರ ಕೊಡುಗೆ ಹಾಗೂ ಮಕ್ಕಳ ಏಳಿಗೆಗೆ ಕಾಂಗ್ರೆಸ್ ಪಕ್ಷದ ಕೊಡುಗೆಗಳನ್ನು ಸ್ಮರಿಸಿದರು. ನೆಹರೂ ಅವರು ಬೆಂಗಳೂರಿನಲ್ಲಿ ಸಾರ್ವಜನಿಕ ಉದ್ದಿಮೆಗಳು ಹೆಚ್‌ಎಎಲ್, ಐಟಿಐ, ಬಿಇಎಂಎಲ್, ಬಿಇಎಲ್, ಇಸ್ರೋ ಸೇರಿದಂತೆ ಅನೇಕ ಉದ್ದಿಮೆಗಳು ಆರಂಭಿಸಿದರು. ಇಲ್ಲಿರುವ ಮಾನವ ಸಂಪನ್ಮೂಲ, ಗುಣಮಟ್ಟದ ಶಿಕ್ಷಣದ ಮೇಲೆ ವಿಶೇಷ ಆದ್ಯತೆ ನೀಡಿದರು.

ಅವರು ಹಾಕಿಕೊಟ್ಟ ಅಡಿಪಾಯದಲ್ಲಿ ನಾವು ಇಂದು ಈ ದೇಶ ಕಟ್ಟುತ್ತಿದ್ದೇವೆ ಎಂದು ಹೇಳಿದರು.ಮಕ್ಕಳಿಗೆ ಶಿಕ್ಷಣ ಸಿಗಬೇಕು, ಮಕ್ಕಳು ಶಾಲೆಯಿಂದ ವಿಮುಖರಾಗಬಾರದು ಎಂದು ಎಸ್.ಎಂ.ಕೃಷ್ಣ ಅವರ ಅವಧಿಯಲ್ಲಿ ಬಿಸಿಯೂಟ ಕಾರ್ಯಕ್ರಮ ನೀಡಲಾಯಿತು.

ಸಿದ್ದರಾಮಯ್ಯ ಅವರ ಸರ್ಕಾರದಲ್ಲಿ ಶಾಲಾ ಮಕ್ಕಳಿಗೆ ಶೂ, ಸಾಕ್ಸ್, ಕ್ಷೀರಭಾಗ್ಯ, ಮೊಟ್ಟೆ ಭಾಗ್ಯ ನೀಡಿ ಪೌಷ್ಟಿಕತೆ ಹೆಚ್ಚಿಸಿದರು.



ಇಂದಿರಾ ಗಾಂಧಿ ಅವರ ಕಾಲದಲ್ಲಿ ಅಂಗನವಾಡಿ ಕಾರ್ಯಕ್ರಮ ಮಾಡಲಾಯಿತು.

ಹೀಗೆ ಕಾಂಗ್ರೆಸ್ ಸರ್ಕಾರ ಸದಾ ಮಕ್ಕಳಿಗೆ ಹೆಚ್ಚಿನ ಆದ್ಯತೆ ನೀಡುತ್ತಾ ಬಂದಿದೆ.ಇನ್ನು ಈ ವರ್ಷದಿಂದ ಗ್ರಾಮೀಣ ಭಾಗದಲ್ಲಿ ಪಂಚಾಯಿತಿ ಮಟ್ಟದಲ್ಲಿ 2 ಸಾವಿರ ಸಿಎಸ್ ಆರ್ ಶಾಲೆಗಳನ್ನು ಆರಂಭಿಸಲು ಮುಂದಾಗಿದ್ದೇವೆ. ಇದಕ್ಕಾಗಿ ನನ್ನನ್ನು ಸೇರಿದಂತೆ ನಾಲ್ಕೈದು ಮಂತ್ರಿಗಳಿಗೆ ಮುಖ್ಯಮಂತ್ರಿಗಳು ಜವಾಬ್ದಾರಿ ನೀಡಿದ್ದು, ಈಗಾಗಲೇ 50 ಶಾಲೆಗಳ ನಿರ್ಮಾಣಕ್ಕೆ ಮುಂದಾಗಿದ್ದೇವೆ. ಹೀಗೆ ಸರ್ಕಾರ ವಿಭಿನ್ನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಜವಾಹರ್‌ಲಾಲ್ ನೆಹರೂ ಅವರ ಜನ್ಮದಿನವನ್ನು ಮಕ್ಕಳ ದಿನವಾಗಿ ಆಚರಣೆ ಮಾಡಲಾಗುತ್ತದೆ. ಈ ವರ್ಷ ಕಾಂಗ್ರೆಸ್ ಪಕ್ಷದಲ್ಲಿ ಹೊಸ ಘಟಕ ಆರಂಭಿಸಲಾಗಿದೆ.

ಯುವ ಕಾಂಗ್ರೆಸ್, ಮಹಿಳಾ ಕಾಂಗ್ರೆಸ್ ನಂತೆ ಇದು ಕೂಡ ಹೊಸ ಘಟಕವಾಗಿದೆ. ದೇಶದಾದ್ಯಂತ ಸಂವಿಧಾನ, ಜಾತ್ಯಾತೀತ ತತ್ವ ಹಾಗೂ ಪಕ್ಷದ ಸಂವಿಧಾನದ ಬಗ್ಗೆ ಮಾಹಿತಿ ನೀಡಲಾಗುವುದು. ಪಕ್ಷದ ಎಲ್ಲಾ ನಾಯಕರು ತಮ್ಮ ವ್ಯಾಪ್ತಿಯಲ್ಲಿ ಈ ಘಟಕಕ್ಕೆ ಹೆಚ್ಚಿನ ಉತ್ತೇಜನ ನೀಡಬೇಕು.ವಿಧಾನಸೌಧದಲ್ಲಿ ಬೆಂಗಳೂರು ನಗರ ಪಾಲಿಕೆ ವ್ಯಾಪ್ತಿಯಲ್ಲಿನ ಸರ್ಕಾರಿ ಶಾಲಾ ಮಕ್ಕಳ ಜತೆಗೆ ಸಂವಾದ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ವಿವಿಧ ಶಾಲೆಗಳ 300 ಶಾಲಾ ಮಕ್ಕಳೊಂದಿಗೆ ನಾನು ಹಾಗೂ ಪ್ರಾಥಮಿಕ ಶಿಕ್ಷಣ ಸಚಿವರಾದ ಮಧು ಬಂಗಾರಪ್ಪ ಅವರು ಸಂವಾದ ಮಾಡಿದೆವು. ಮಕ್ಕಳ ಆಸೆ, ಆಲೋಚನೆಗಳ ಬಗ್ಗೆ ಚರ್ಚೆ ಮಾಡಿದೆವು. ಒಟ್ಟಾಗಿ ಸೇರಿ ಭೇದ ಭಾವ ತೊರೆದು ಬದುಕುವ ನಾವು ಭಾರತೀಯರು ಎಂದು ಗಟ್ಟಿಯಾಗಿ ಹೇಳುವ ಎಂಬ ನೆಹರೂ ಅವರ ಸಂದೇಶದಂತೆ ನಾವು ಬದುಕೋಣ ಎಂದು ಹೇಳಿದರು.

# ಮಾದಕದ್ರವ್ಯ ವ್ಯಸನಕ್ಕೆ ಮುಕ್ತಿ ಕಾಣಿಸಲು ಸಮಾಜ ಒಂದಾಗಲಿ: ಯು.ಟಿ.ಖಾದರ್

**ಮಂಗಳೂರು, ನ.14–** ಜನಜಾಗೃತಿ ಮತ್ತು ಸಮಾಜದ ಸಂಘಟಿತ ಪ್ರಯತ್ನದಿಂದ ಮಾದಕದ್ರವ್ಯ ವ್ಯಸನಕ್ಕೆ ಮುಕ್ತಿ ಕಾಣಿಸಲು ಸಾಧ್ಯವಿದೆ. ಈ ನಿಟ್ಟಿನಲ್ಲಿ ಸಮಾಜ ಒಂದಾಗಬೇಕು ಎಂದು ವಿಧಾನಸಭಾ ಅಧ್ಯಕ್ಷ ಯು.ಟಿ.ಖಾದರ್ ತಿಳಿಸಿದ್ದಾರೆ.



ಮಂಗಳೂರಿನಲ್ಲಿಂದು 'ಮಾದಕದ್ರವ್ಯ ವ್ಯಸನ ಮುಕ್ತ ಮಂಗಳೂರು' ಜಾಗೃತಿ ಜಾಥಾಕ್ಕೆ ಚಾಲನೆ ನೀಡಿದ ಬಳಿಕ ಮಾತನಾಡಿದ ಅವರು, ಸಮಾಜಕ್ಕೆ ಕಂಟಕವಾಗಿ ಪರಿಣಮಿಸಿರುವ ಡ್ರಗ್ಸ್ ವಿರುದ್ಧ ಜನತೆಯ ಸಹಭಾಗಿತ್ವ ಅಗತ್ಯವಿದೆ. ಪೊಲೀಸ್ ಇಲಾಖೆ ಎಷ್ಟೇ ಜಾಗೃತಿ ಕಾರ್ಯ ನಡೆಸಿದರು ಕೂಡ ಹೆತ್ತವರು ಹಾಗೂ ಸಮಾಜದ ಪ್ರೋತ್ಸಾಹವಿಲ್ಲದಿದ್ದರೆ ಪ್ರಯೋಜನವಿಲ್ಲ. ಸ್ವಸ್ಥ ಸಮಾಜ ನಿರ್ಮಿಸುವಲ್ಲಿ ಎಲ್ಲರೂ ಕಟಿಬದ್ಧರಾಗಬೇಕು ಎಂದು ಕರೆ ನೀಡಿದರು.


ಹೆತ್ತವರು ಮತ್ತು ಪೋಷಕರು ತಮ್ಮ ಮಕ್ಕಳ ಚಲನವಲನಗಳ ಬಗ್ಗೆ ನಿಗಾ ಇರಿಸಬೇಕು. ಅವರು ಹಾದಿ ತಪ್ಪದಂತೆ ಎಚ್ಚರ ವಹಿಸ ಬೇಕಾದುದು ಮನೆಮಂದಿಯ ಕರ್ತವ್ಯ. ಪೊಲೀಸ್ ಇಲಾಖೆಯಲ್ಲಿ ಸುವ ಟೆಸ್ಟಿಂಗ್ ಕಿಟ್ನ್ನು ತಂದು ತಿಂಗಳಿಗೊಮ್ಮೆ ಪರೀಕ್ಷೆ ಮಾಡುವ ಪರಿಪಾಠ ಬೆಳೆಯಬೇಕು.

ಈ ನಿಟ್ಟಿನಲ್ಲಿ ಜನಜಾಗೃತಿ ಯಾಗಬೇಕು. ಅಲ್ಲದೆ ಪ್ರತೀ ಕಾಲೇಜಿನಲ್ಲಿ ಇಂತಹ ಟೆಸ್ಟಿಂಗ್ ನಡೆದಾಗ ಮಕ್ಕಳು ಮಾದಕ ದ್ರವ್ಯ ಸೇವಿಸಲು ಭಯ ಪಡುತ್ತಾರೆ ಎಂದು ಸ್ಪೀಕರ್ ಖಾದರ್ ಸಲಹೆ ನೀಡಿದರು. ದಕ್ಷಿಣ ಕನ್ನಡ ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ, ಮೇಯರ್ ಮನೋಜ್ ಕುಮಾರ್ ಸೇರಿದಂತೆ ಹಲವು ಮಂದಿ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ವೈಷ್ಣೋದೇವಿ ಯಾತ್ರಿಗಳಿಗೆ 5 ಸಾವಿರ ಸಹಾಯಧನ: ಸಚಿವ ರಾಮಲಿಂಗಾರೆಡ್ಡಿ

**ಬೆಂಗಳೂರು, ನ.14–** ಜಮ್ಮು–ಕಾಶ್ಮೀರದಲ್ಲಿರುವ ಪ್ರಸಿದ್ಧ ವೈಷ್ಣೋದೇವಿ ದೇವಾಲಯಕ್ಕೆ ಭೇಟಿ ನೀಡುವ ರಾಜ್ಯದ ಯಾತ್ರಾರ್ಥಿಗಳಿಗೆ ತಲಾ 5,000 ರೂ. ಸಹಾಯಧನ ನೀಡುವುದಾಗಿ ಮುಜರಾಯಿ ಇಲಾಖೆ ಘೋಷಿಸಿದೆ. ಜೊತೆಗೆ ಸರ್ಕಾರದ ಬಹುಮಹಡಿಗಳ ಕಟ್ಟಡದ ಎದುರು ಇರುವ ಮುಜರಾಯಿ ಇಲಾಖೆಗೆ ಸೇರಿದ 3/4 ಎಕರೆ ಜಾಗದಲ್ಲಿ 10 ಕೋಟಿ ರೂ. ವೆಚ್ಚದಲ್ಲಿ ಧಾರ್ಮಿಕ ಸೌಧ ನಿರ್ಮಿಸಲು ಇಲಾಖೆ ತೀರ್ಮಾನಿಸಿದೆ.

ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ ಅಧ್ಯಕ್ಷತೆಯಲ್ಲಿ ನಡೆದ ಕರ್ನಾಟಕ ರಾಜ್ಯ ಧಾರ್ಮಿಕ ಪರಿಷತ್ ಸಭೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದೆ.120 ವರ್ಷಗಳಷ್ಟು ಹಳೆಯದಾದ ಮೈಸೂರಿನ ಸಂಸ್ಕೃತ ಮಹಾರಾಜ ಕಾಲೇಜಿನ ಸಂಸ್ಥೆಯ ಸಂಪೂರ್ಣ ಜೀರ್ಣೋದ್ಧಾರಕ್ಕೆ ಅಗತ್ಯ ಅನುದಾನ ಬಿಡುಗಡೆ ಮಾಡಲು ಕೂಡಾ ಸಭೆಯಲ್ಲಿ ತೀರ್ಮಾನಿಸಲಾಗಿದೆ.:ರಾಜ್ಯ ಧಾರ್ಮಿಕ ಪರಿಷತ್ ಸಭೆಯಲ್ಲಿ ಮುಜರಾಯಿ ಇಲಾಖೆಗೆ ಸೇರಿದ ದೇವಾಲಯದ ಆಸ್ತಿಯ ಸರ್ವೇ. ಒತ್ತುವರಿ ತೆರವುಗೊಳಿಸಿ ದಾಖಲೆ ನೀಡುವುದು. ಅವಧಿ ಮುಗಿಯುವ 14 ದೇವಾಲಯಗಳಿಗೆ ವ್ಯವಸ್ಥಾಪನಾ ಸಮಿತಿ ರಚಿಸಲು, ಅವಧಿ ಮುಗಿದ ನಂತರ ಆಡಳಿತಾಧಿಕಾರಿಗಳನ್ನು ನೇಮಕ ಮಾಡಲು, ಅರ್ಜಿ ಸ್ವೀಕಾರ



ವಾಗಿರುವ 28 ದೇವಾಲಯ ಗಳಿಗೆ ವ್ಯವಸ್ಥಾಪನಾ ಸಮಿತಿ ರಚಿಸಲು, ಅರ್ಜಿ ಸ್ವೀಕಾರವಾಗದೇ ಇರುವ 13 ದೇವಾಲಯಗಳಿಗೆ ಪುನಃ ಅರ್ಜಿ ಕರೆಯಲು ಹಾಗೂ ಬೇಲೂರು ಶ್ರೀ ಚನ್ನಕೇಶವ ದೇವಾಲಯದ ಖಾಲಿ ಇರುವ ವ್ಯವಸ್ಥಾಪನಾ ಸಮಿತಿಗೆ ಸದಸ್ಯರನ್ನು ನೇಮಕ ಮಾಡುವುದು.ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ಮಂಜೂರು ಮಾಡಲಾದ ಸೌಲಭ್ಯಗಳ ಬಗ್ಗೆ ಸಾರ್ವಜನಿಕ ಮಾಹಿತಿಗಾಗಿ ಪ್ರಮುಖ ದೇವಾಲಯಗಳ ಮುಂದೆ ವಿವರವಾದ ಬೋರ್ಡ್ (ಫಲಕ) ಅಳವಡಿಕೆಗೆ ಸೂಚಿಸಲಾಗಿದೆ.

ಫಲಕದಲ್ಲಿ ಸೇವೆಯಲ್ಲಿರುವಾಗಲೇ ಮರಣ ಹೊಂದಿದ ಅರ್ಚಕರಿಗೆ ತಲಾ 2 ಲಕ್ಷ ರೂ ಸಹಾಯಧನ, ಕಾಶಿ ಯಾತ್ರೆ, ಚಾರ್ಧಾಮ್ ಯಾತ್ರೆ ಮತ್ತು ಮಾನಸ ಸರೋವರ ಹಾಗೂ ವೈಷ್ಣೋದೇವಿ ಯಾತ್ರೆ ಕೈಗೊಂಡ ಯಾತ್ರಾರ್ಥಿಗಳಿಗೆ ಸಹಾಯಧನ ಮಂಜೂರು. ಸರ್ಕಾರದ ವತಿಯಿಂದ ಭಾರತ್ ಗೌರವ್ ಯಾತ್ರೆಯಡಿ ಕಾಶಿ, ಗಯಾ, ಅಯೋಧ್ಯೆ, ಪ್ರಯಾಗ್ ರಾಜ್ ಯಾತ್ರೆ ಮಾಡಲು ಅವಕಾಶ ಮಾಡಿಕೊಡಲಾಗಿದೆ.

ರಾಮೇಶ್ವರ, ಕನ್ಯಾಕುಮಾರಿ, ಮಧುರೈ, ತಿರುವನಂತಪುರಂ, ದ್ವಾರಕ ಯಾತ್ರೆ– ದ್ವಾರಕ, ನಾಗೇಶ್ವರ, ಸೋಮನಾಥ್, ಶ್ರೀ ತ್ರಯಂಬಕೇಶ್ವರ. ಪುರಿ ಜಗನ್ನಾಥ್ ಯಾತ್ರೆ– ಪುರಿ, ಕೊನಾರ್ಕ್, ಗಂಗಾಸಾಗರ್, ಕೋಲ್ಕತಾ. ಭಾರತ್ ಗೌರವ್ ಯಾತ್ರೆಯಡಿ ಮುಜರಾಯಿ ದೇವಾಲಯಗಳ ಅರ್ಚಕರು ಹಾಗೂ ನೌಕರರು ಮತ್ತು ಅವರ ಕುಟುಂಬದ ಸದಸ್ಯರು ಒಟ್ಟು 2,400 ಜನರಿಗೆ ಉಚಿತ ಯಾತ್ರೆ ವ್ಯವಸ್ಥೆ ಕಲ್ಪಿಸುತ್ತಿರುವ ಬಗ್ಗೆ ಪ್ರಕಟಿಸಲು ತೀರ್ಮಾನಿಸಲಾಗಿದೆ.ಸಿ ವರ್ಗದ ಆನುವಂಶಿಕ ಅರ್ಚಕರ ನೇಮಕಾತಿ ಅಧಿಕಾರವನ್ನು ಆಯಾ ತಹಶೀಲ್ದಾರರಿಗೆ ಪ್ರತ್ಯಾಯೋಜಿಸುವುದು.

ಸಿ ವರ್ಗದ ಆನುವಂಶಿಕ ಅರ್ಚಕರು ಅನಾರೋಗ್ಯ ನಿಮಿತ್ತ ಕಾರ್ಯನಿರ್ವಹಿಸಲು ಸಾಧ್ಯವಾಗದ ಪರಿಸ್ಥಿತಿಯಲ್ಲಿ ಅವರ ಕುಟುಂಬದವರಿಗೆ ನೇಮಕಾತಿ ಅಧಿಕಾರವನ್ನು ತಹಸೀಲ್ದಾರ್ ರವರಿಗೆ ಪ್ರತ್ಯಾಯೋಜಿಸುವುದು. ಆಯಾ ಮುಜರಾಯಿ ದೇವಾಲಯಗಳ ಹಣವನ್ನು ದೇವಾಲಯಗಳಿಗೆ ಮಾತ್ರವೇ ಉಪಯೋಗಿಸಲಾಗುತ್ತಿದೆ ಎಂಬ ಮಾಹಿತಿ, ಮಾಂಗಲ್ಯ ಭಾಗ್ಯ ಯೋಜನೆಯಡಿ ಉಚಿತ ಸಾಮೂಹಿಕ ವಿವಾಹ ಏರ್ಪಡಿಸುವ ಬಗ್ಗೆ ಫಲಕದಲ್ಲಿ ಮಾಹಿತಿ ನೀಡುವುದು.

### ಕನ್ನಡದ ಹಬ್ಬವಾದ ಸಾಹಿತ್ಯ ಸಮ್ಮೇಳನದ ಯಶಸ್ವಿಗೆ ಎಲ್ಲರ ಸಹಕಾರ ಮುಖ್ಯ: ದಿನೇಶ್ ಗೂಳಿಗೌಡ

# ಸಕ್ಕರೆ ನಾಡಿನ ಆತಿಥ್ಯ ಜಗಕ್ಕೆ ಪಸರಿಸಲು ಮಾಧ್ಯಮಗಳ ಪಾತ್ರ ಪ್ರಮುಖ



**ಮಂಡ್ಯ, ನ.14–** ನಗರದಲ್ಲಿ ಡಿಸೆಂಬರ್ 20, 21, 22ರಂದು ಜರುಗಲಿರುವ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನ ಕನ್ನಡದ ಹಬ್ಬ. ನಮ್ಮ ಮನೆಯ ಹಬ್ಬ. ಕುಟುಂಬದವರೊಂದಿಗೆ ಹಬ್ಬ ಆಚರಣೆ ಮಾಡುವಂತೆ ಜಿಲ್ಲೆಯ ಜನತೆ ಒಟ್ಟಾಗಿ ಕನ್ನಡ ಹಬ್ಬವನ್ನು ಆಚರಣೆ ಮಾಡಬೇಕು ಎಂದು ಶಾಸಕರು ಹಾಗೂ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಮಾಧ್ಯಮ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷರಾದ ದಿನೇಶ್ ಗೂಳಿಗೌಡ ಅವರು ಹೇಳಿದರು.

ನಗರದ ಹೊರವಲಯದ ಅಮರಾವತಿ ಹೋಟೆಲ್ ಹೋಟೆಲ್ ನಲ್ಲಿ ಹಮ್ಮಿಕೊಂಡಿದ್ದ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಮಾಧ್ಯಮ ಸಮನ್ವಯ ಸಮಿತಿ ಸಭೆಯಲ್ಲಿ ಮಾತನಾಡಿ, ಸಮ್ಮೇಳನದ ಯಶಸ್ವಿಗೆ ಮಾಧ್ಯಮದ ಪಾತ್ರ ಬಹಳ ಮುಖ್ಯ. ಸಾಹಿತ್ಯ ಸಮ್ಮೇಳನದ ಕುರಿತು ಮಾಧ್ಯಮದಲ್ಲಿ ವ್ಯಾಪಕ ಪ್ರಚಾರ ನೀಡುವ ಮೂಲಕ ಸಮ್ಮೇಳನದ ಯಶಸ್ವಿಗೆ ಮಾಧ್ಯಮದವರು ಸಹಕರಿಸಬೇಕು ಎಂದರು.

ಇದು ಕನ್ನಡದ ಹಬ್ಬ, ನಮ್ಮ ಮನೆ ಹಬ್ಬ. ಕನ್ನಡದ ತೇರು ಎಳೆಯಲು ಎಲ್ಲರ ಸಹಕಾರ ಮುಖ್ಯ. ಮಾಧ್ಯಮದಲ್ಲಿ ಹೆಚ್ಚಿನ ಪ್ರಚಾರ ನೀಡಿ ಸಕ್ಕರೆಯ ನಾಡು ಅಕ್ಕರೆಯ ಬೀಡಿನ ಗಮಲನ್ನು ಜಗಕ್ಕೆ ಪಸರಿಸುವಂತೆ ಮಾಡಬೇಕು ಎಂದು ಹೇಳಿದರು. ಮಂಡ್ಯ ಆತಿಥ್ಯಕ್ಕೆ ಹೆಸರುವಾಸಿ. ರಾಜ್ಯ, ಹೊರರಾಜ್ಯದಿಂದ ಆಗಮಿಸುವ ಸಾಹಿತ್ಯಾಸಕ್ತರು, ಮಾಧ್ಯಮ ಮಿತ್ರರ ಆತಿಥ್ಯಕ್ಕೆ ಯಾವುದೇ ಕುಂದುಕೊರತೆ ಉಂಟಾಗದಂತೆ ಅಧಿಕಾರಿಗಳು ಎಚ್ಚರವಹಿಸಬೇಕು. ಯಾವುದೇ ರೀತಿಯ ಗೊಂದಲಗಳಿಗೆ ಆಸ್ಪದ ನೀಡಬಾರದು ಎಂದು ಸೂಚಿಸಿದರು.

ರಾಜ್ಯ, ಜಿಲ್ಲಾ, ತಾಲೂಕು ಹಾಗೂ ಸ್ಥಳೀಯ ಪತ್ರಿಕೆ ಮತ್ತು ಟಿವಿ ಚಾನೆಲ್ ಗಳು ಹೆಚ್ಚಿನ ಪ್ರಚಾರ ನೀಡಿ ನುಡಿ ಹಬ್ಬವನ್ನು ಯಶಸ್ವಿಗೊಳಿಸಬೇಕು. ಎನ್ ಸಿಸಿ, ಸ್ಕೌಟ್ಸ್ ಅಂಡ್ ಗೈಡ್ಸ್, ಹಾಗೂ ಎನ್ ಜಿಓಗಳಿಂದ ಸ್ವಯಂ ಸೇವಕರನ್ನು ನೇಮಿಸುಕೊಳ್ಳಬೇಕು. ನಮ್ಮನೆ ಕಾರ್ಯಕ್ರಮದಂತೆ ಕಾರ್ಯ ನಿರ್ವಹಿಸಬೇಕು. ಮಾಧ್ಯಮ ಸಂಸ್ಥೆಗಳಿಂದ ಸಮ್ಮೇಳನಕ್ಕೆ ಆಗಮಿಸುವವವರಿಗೆ ಸೂಕ್ತ ವಸತಿ ವ್ಯವಸ್ಥೆ, ವಾಹನ, ಊಟ, ತಿಂಡಿ ವ್ಯವಸ್ಥೆ ಆಗಬೇಕು ಎಂದು ಅಧಿಕಾರಿಗಳಿಗೆ ಹೇಳಿದರು.

ಸಭೆಯಲ್ಲಿ ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಪ್ರಕಾಶ್, ಜಿಲ್ಲಾ ಕಸಾಪ ಸಂಚಾಲಕರಾದ ಮೀರ ಶಿವಲಿಂಗಯ್ಯ, ಉಪವಿಭಾಗಾಧಿಕಾರಿ ಶಿವಮೂರ್ತಿ, ವಾರ್ತಾಧಿಕಾರಿ ನಿರ್ಮಲಾ ಸೇರಿದಂತೆ ಸಮಿತಿಯ ಸದಸ್ಯರು ಉಪಸ್ಥಿತರಿದ್ದರು.

**ಸಮ್ಮೇಳನದ ಪ್ರಚಾರ ಕಾರ್ಯ ಆರಂಭ: ಜಿಲ್ಲಾಧಿಕಾರಿ ಕುಮಾರ್**

ಸಾಹಿತ್ಯ ಸಮ್ಮೇಳನದ ಪ್ರಚಾರ ಕಾರ್ಯ ಆರಂಭಿಸಲಾಗಿದೆ. ರಾಜ್ಯದ ನಾನಾ ಭಾಗಗಳಲ್ಲಿ ಸಂಚರಿಸುತ್ತಿರುವ ಜ್ಯೋತಿ ರಥವನ್ನು ಅದ್ದೂರಿಯಾಗಿ ಸ್ವಾಗತಿಸಲಾಗುತ್ತಿದೆ. ಎಲ್ಲೆಡೆ ನಿರೀಕ್ಷೆಗೂ ಮೀರಿ ರಥವನ್ನು ಬರಮಾಡಿಕೊಳ್ಳುತ್ತಿದ್ದಾರೆ ಎಂದು ಜಿಲ್ಲಾಧಿಕಾರಿ ಕುಮಾರ್ ಅವರು ಹೇಳಿದರು.

ಸಾಹಿತ್ಯ ಸಮ್ಮೇಳನದ ಪ್ರಚಾರಕ್ಕೆ ಸಾಕಷ್ಟು ಒತ್ತು ನೀಡಲಾಗುತ್ತಿದೆ. ಪ್ರಚಾರದ ರೂವಾರಿಗಳು ಮಾಧ್ಯಮದವರೇ. ಜನರನ್ನು ತಲುಪಲು ಮಾಧ್ಯಮಗಳ ಸಹಕಾರ ಬಹಳ ಮುಖ್ಯ. ಸಮ್ಮೇಳನದ ಯಶಸ್ವಿಗೆ ಎಲ್ಲರ ಸಲಹೆಗಳನ್ನು ಪಡೆದುಕೊಂಡು ಕಾರ್ಯರೂಪಕ್ಕೆ ತರಲಾಗುವುದು


ಮಾಧ್ಯಮ ಸಮನ್ವಯ ಸಮಿತಿ ಬಹಳ ಶಿಸ್ತುಬದ್ಧವಾಗಿ ಕಾರ್ಯನಿರ್ವಹಿಸುತ್ತಿದೆ. ಅಧ್ಯಕ್ಷರಾದ ದಿನೇಶ್ ಗೂಳಿಗೌಡ ಅವರ ಕಾರ್ಯಕ್ಕೆ ಜಿಲ್ಲಾಡಳಿತ ವತಿಯಿಂದ ಅಭಿನಂದನೆ ಸಲ್ಲಿಸುತ್ತೇನೆ. ರಾಜ್ಯ, ರಾಷ್ಟ್ರದ ನಾನಾ ಭಾಗಗಳಿಂದ ಬರುವವರಿಗೆ ಸಕಲ ವ್ಯವಸ್ಥೆ ಮಾಡಲಾಗುವುದು. ಊಟ, ಪುಸ್ತಕ ಮಳಿಗೆ, ವೇದಿಕೆ ಒಂದೇ ಕಡೆ ಇರುವಂತೆ ಜಾಗ ಗುರುತಿಸಲಾಗಿದೆ. ಎಲ್ಲಾ ಆಯಮದಲ್ಲಿ ಚರ್ಚಿಸಿ, ತಾಂತ್ರಿಕ ವರದಿ ಆಧರಿಸಿ ಜಾಗ ಗುರುತಿಸಲಾಗಿದೆ. ಸಂಚಾರ ದಟ್ಟಣೆ ಆಗದಂತೆ ಕ್ರಮವಹಿಸಲಾಗುವುದು ಎಂದರು.

# ಕಲಿಕೆ ಮೇಲೆ ಸಾಮಾಜಿಕ ಮಾಧ್ಯಮ, ತಂತಜ್ಞಾನದ ದುಷ್ಪರಿಣಾಮ ಶಿಕ್ಷಣ ತಜ್ಞರಿಂದ ನಾನಾ ಆಯಾಮಗಳ ಕುರಿತು ಚರ್ಚೆ

**ಬೆಂಗಳೂರು, ನ, 14–** 'ವಿದ್ಯಾರ್ಥಿಗಳ ಮಾನಸಿಕ ಆರೋಗ್ಯದ ಮೇಲೆ ಸಾಮಾಜಿಕ ಮಾಧ್ಯಮ ಮತ್ತು ತಂತ್ರಜ್ಞಾನದಿಂದ ಆಗುತ್ತಿರುವ ದುಷ್ಪರಿಣಾಮ'ದ ಬಗ್ಗೆ ವಿವಿಧ ವಲಯದ ಗಣ್ಯರು ವ್ಯಾಪಕವಾಗಿ ಬೆಳಕು ಚೆಲ್ಲಿದರು.

ನಗರದ ರಿಟ್ಸ್–ಕಾರ್ಲ್ಟನ್ ಹೋಟೆಲ್ ನಲ್ಲಿ ಆಯೋಜಿಸಲಾದ ಕ್ಯೂಎಸ್ ಐ – ಗೇಜ್ "ಇನ್ಸ್ಟಿಟ್ಯೂಟ್ ಆಫ್ ಹ್ಯಾಪಿನೆಸ್ ಕನ್ಕ್ಲೇವ್ 2024" ನಲ್ಲಿ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಪೂರಕ ವಾತಾವರಣ ನಿರ್ಮಿಸುವ ನಿಟ್ಟಿನಲ್ಲಿ ಇಡೀ ದಿನ ನಡೆದ ವಿವಿಧ ಗೋಷ್ಠಿಗಳಲ್ಲಿ ತಜ್ಞರು ನಾನಾ ವಿಷಯಗಳನ್ನು ಅನಾವರಣಗೊಳಿಸಿದರು.

ವಿದ್ಯಾರ್ಥಿ ಮಾನಸಿಕ ಆರೋಗ್ಯಕ್ಕಾಗಿ ಸಾಮಾಜಿಕ ಮಾಧ್ಯಮದ ಅಪಾಯಗಳು ಮತ್ತು ಪ್ರತಿಕೂಲ ಪರಿಸ್ಥಿತಿಯನ್ನು ಸಮತೋಲನಗೊಳಿಸುವುದು ಸಾಮಾಜಿಕ ಭಾವನಾತ್ಮಕ ಕಲಿಕೆ ಸಂತಸಕ್ಕೆ ಮಾರ್ಗ



ಶಿಕ್ಷಕರ ಸಬಲೀಕರಣ: ತರಗತಿಗಳಲ್ಲಿ ಮಾನಸಿಕ ಆರೋಗ್ಯಕ್ಕೆ ಆದ್ಯತೆ ನೀಡುವ ಹಾಗೂ ಸ್ಪರ್ಧಾತ್ಮಕ ಶೈಕ್ಷಣಿಕ ಪರಿಸರದಲ್ಲಿ ಯಶಸ್ಸನ್ನು ಮರು ವ್ಯಾಖ್ಯಾನಿಸುವ ವಿಷಯಗಳ ಕುರಿತು ಶಿಕ್ಷಣ ತಜ್ಞರು ಬೆಳಕು ಚೆಲ್ಲಿಸಿದರು.

ಶಿಕ್ಷಣ ತಜ್ಞ ಮತ್ತು ಸಿಬಿಎಸ್ಸಿ ಮಾಜಿ ನಿರ್ದೇಶಕ ಡಾ. ಜಿ. ಬಾಲಕೃಷ್ಣ ಮಾತನಾಡಿ, ಸಾಮಾಜಿಕ ಮಾಧ್ಯಮ ಮತ್ತು ತಂತ್ರಜ್ಞಾನ ಶಿಕ್ಷಣದ ಮೇಲೆ ವ್ಯಾಪಕ ಪರಿಣಾಮ ಬೀರುತ್ತಿದ್ದು, ಸೂಕ್ತ ಮಾರ್ಗದರ್ಶನವಿಲ್ಲದಿದ್ದರೆ ವಿದ್ಯಾರ್ಥಿಗಳ ಭವಿಷ್ಯ ಡೋಲಾಯಮಾನ ವಾಗುತ್ತದೆ. ವಾಟ್ಸ್ ಅಪ್ ವಿವಿಗಳು ವಿದ್ಯಾರ್ಥಿಗಳನ್ನು ಗೊಂದಲಕ್ಕೆ ದೂಡುತ್ತಿವೆ ಎಂದರು.

ಎಸ್.ಎಸ್.ಆರ್.ವಿ.ಎಂ ಸಂಸ್ಥೆ ಅಧ್ಯಕ್ಷ ಎಚ್.ಜಿ. ಹರ್ಷ ಮಾತನಾಡಿ, ತರಗತಿಗಳಲ್ಲಿ ವಿದ್ಯಾರ್ಥಿಗಳು ತುಂಬಾ ಆಕ್ರಮಣಕಾರಿ ವರ್ತನೆ ತೋರಿದರೆ ಅದು ಘರ್ಷಣೆಗಳಿಗೆ ಕಾರಣವಾಗಲಿದ್ದು, ತೀವ್ರ ಖಿನ್ನತೆಗೆ ಒಳಗಾದರೆ ಅದು ಆತ್ಮಹತ್ಯೆ ಮತ್ತಿತರೆ ಅನಾಹುತಳಿಗೆ ನಾಂದಿಯಾಗಲಿದೆ. ಹೀಗಾಗಿ ಸಮತೋಲನ ಕಾಯ್ದುಕೊಳ್ಳುವುದು ಅತ್ಯಂತ ಅಗತ್ಯ ಎಂದು ಹೇಳಿದರು.

ಉದ್ಯಮಿ ಐಶ್ವರ್ಯ ಡಿಕೆಎಸ್ ಹೆಗಡೆ ಮಾತನಾಡಿ, ಸಾಮಾಜಿಕ ಮಾಧ್ಯಮಗಳ ಬಳಕೆ ಬಗ್ಗೆ ಎಚ್ಚರಿಕೆ ವಹಿಸುವುದು ಅಗತ್ಯ. ತಂತ್ರಜ್ಞಾನ ಸಂತೋಷದ ಆಂದೋಲನವಾಗಿ ಪರಿವರ್ತನೆಯಾಗಬೇಕು. ವ್ಯಾಪಾರ ವಹಿವಾಟಿಗೆ ಸಾಮಾಜಿಕ ಮಾಧ್ಯಮ ಸೂಕ್ತ ವೇದಿಕೆ ಎಂದರು.

# ಸಚಿವ ಸಂಪುಟ ನಿರ್ಣಯ–ಕೋವಿಡ್ ಅಕ್ರಮ–ಭ್ರಷ್ಟಾಚಾರ ತನಿಖೆಗೆ ಹೊಸ ಎಸ್.ಐ.ಟಿ: ಎಚ್.ಕೆ.ಪಾಟೀಲ

**ಬೆಂಗಳೂರು, ನ.14–** ರಾಜ್ಯ ಸರ್ಕಾರವು ವಿಚಾರಣಾ ಆಯೋಗಗಳ ಕಾಯ್ದೆ 1952ರನ್ವಯ 'ಕೋವಿಡ್ ಭ್ರಷ್ಟಾಚಾರದ' ಕುರಿತು ಸತ್ಯ ಶೋಧನೆಗಾಗಿ ಜಸ್ಟೀಸ್ ಜಾನ್ ಮೈಕಲ್ ಕುನ್ಹಾ ನಿವೃತ್ತ ನ್ಯಾಯಾಧೀಶರ ನೇತೃತ್ವದಲ್ಲಿ ಆಯೋಗ ನೇಮಿಸ ಲಾಗಿತ್ತು. ಈ ಆಯೋಗ ತನ್ನ ಕಾರ್ಯ ಅವಧಿಯಲ್ಲಿ ತನಿಖೆ ನಡೆಸಿ 2 ಮಧ್ಯಂತರ ವರದಿಗಳನ್ನು ನೀಡಿ ಬ್ರಹ್ಮಾಂಡ ಭ್ರಷ್ಟಾಚಾರದ ಕುರಿತು, ಎಳೆ ಎಳೆಯಾಗಿ ಬಿಡಿಸಿಟ್ಟಿದೆ. ಈ ಬ್ರಹ್ಮಾಂಡ ಭ್ರಷ್ಟಾಚಾರ, ಜನರ ಜೀವಗಳ ಜೊತೆ ಚೆಲ್ಲಾಟವಾಡಿದ ಅಮಾನವೀಯ ಘಟನೆಗಳ ಬಗ್ಗೆ ಸತ್ಯ ಸಂಶೋಧನೆ ನಡೆಸಿರುವ ಆಯೋಗದ ವರದಿಯ ಆಧಾರದ ಮೇಲೆ ಮುಂದುವರೆದ ಕ್ರಮಗಳನ್ನು ತೆಗೆದುಕೊಳ್ಳಲು ವಿಶೇಷ ತನಿಖಾ ತಂಡವೊಂದನ್ನು ನೇಮಕ ಮಾಡಲು



ರಾಜ್ಯ ಸಚಿವ ಸಂಪುಟ ಇಂದು ನಿರ್ಧರಿಸಿದೆ ಎಂದು ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವ ಎಚ್.ಕೆ ಪಾಟೀಲ ರವರು ತಿಳಿಸಿದರು.

ಸಚಿವ ಸಂಪುಟದ ಸಭೆಯಲ್ಲಿ ಕೈಗೊಂಡ ನಿರ್ಣಯಗಳ ಕುರಿತು ಮಾಧ್ಯಮ ಪ್ರತಿನಿಧಿಗಳಿಗೆ ವಿವರಿಸಿದರು. ವಿಧಾನಸಭೆಯ ಸಾರ್ವಜನಿಕ ಲೆಕ್ಕಪತ್ರ ಸಮಿತಿಯ ತನಿಖಾ ವರದಿಯ ನಂತರ ಕೋವಿಡ್ ಸಂದರ್ಭದಲ್ಲಿ ಸರ್ಕಾರದ ಅಧಿಕಾರಿಗಳು ಅಧಿಕಾರಸ್ಥ ರಾಜಕಾರಣಿಗಳ ಅಪವಿತ್ರ ಮೈತ್ರಿಯ ಫಲವಾಗಿ ನಡೆದ ಭ್ರಷ್ಟಾಚಾರ, ಹಗರಣಗಳ ಕುರಿತು ಸತ್ಯಾಂಶಗಳು ಲಭ್ಯವಾಗಿದ್ದವು. ಸಾವಿನ ಬಗ್ಗೆ ಸರಿಯಾಗಿ ಲೆಕ್ಕ ಕೊಡದೇ ಸಾವಿನ ಲೆಕ್ಕ ಪರಿಶೋಧನೆ ನಡೆಸದೇ ನೈಜವಾದ ಸಾವಿನ ಸಂಖ್ಯೆಗಳನ್ನು ಬಚ್ಚಿಟ್ಟ ಸರ್ಕಾರ ನ್ಯಾಯಯುತವಾದ ಯಾವುದೇ ಕ್ರಮ ಕೈಗೊಳ್ಳಲಿಲ್ಲ ಈ ಎಲ್ಲಾ ಅವ್ಯವಹಾರ ಕ್ರಮಗಳಲ್ಲಿ ಅಪರಾಧಿ ಅಂಶಗಳನ್ನು ತನಿಖೆ ಮಾಡಿ ಎಫ್.ಐ.ಆರ್, ದೋಷಾರೋಪ ಪಟ್ಟಿ ಮತ್ತು ಅಪರಾಧಿಗಳನ್ನು ಪತ್ತೆ ಹಚ್ಚಲು ಮತ್ತು ಸೂಕ್ತ ಶಿಕ್ಷೆಗೆ ಅಭಿಯೋಜನೆಗೆ ಒಳಪಡಿಸುವ ಮೂಲಕ ಕರ್ನಾಟಕದ ಜನತೆಗೆ ನ್ಯಾಯ ಒದಗಿಸಲು ಸಚಿವ ಸಂಪುಟ ತೀರ್ಮಾನಿಸಿದೆ ಎಂದರು.

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363



ಭಾರತದ ರಾಷ್ಟ್ರಪತಿ ಶ್ರೀಮತಿ ದ್ರೌಪದಿ ಮುರ್ಮು, ಗುರುವಾರದಂದು ನವದೆಹಲಿಯ ರಾಷ್ಟ್ರಪತಿ ಭವನದ ಸಾಂಸ್ಕೃತಿಕ ಕೇಂದ್ರದಲ್ಲಿ ಮಕ್ಕಳ ದಿನಾಚರಣೆಯ ಸಂದರ್ಭದಲ್ಲಿ ವಿವಿಧ ಶಾಲೆಗಳು ಮತ್ತು ಸಂಸ್ಥೆಗಳ ಮಕ್ಕಳನ್ನು ಭೇಟಿ.

# ಪ್ರಜಾಪ್ರಭುತ್ವದಲ್ಲಿ ಯಾರು ಏನು ಬೇಕಾದರೂ ಆಗಬಹುದು: ಡಿ.ಕೆ.ಶಿ

**ಬೆಂಗಳೂರು, ನ. 14 :** ಪ್ರಜಾಪ್ರಭುತ್ವದಲ್ಲಿ ಯಾರು ಏನು ಬೇಕಾದರು ಆಗಬಹುದು. ನಮ್ಮ ತಂದೆ ರೈತರಾಗಿದ್ದರು, ನಿಮ್ಮ ವೃತ್ತಿ ಆಯ್ಕೆ ಮಾಡಿಕೊಳ್ಳಬೇಕಾದರೆ ಗುಣಮಟ್ಟದ ಶಿಕ್ಷಣ, ಆರ್ಥಿಕ ಸ್ಥಿತಿ ಹಾಗೂ ನಾಯಕತ್ವದ ಗುಣ ಬೆಳಸಿಕೊಳ್ಳಬೇಕು ಎಂಬುದಾಗಿ ಡಿಸಿಎಂ ಡಿಕೆ ಶಿವಕುಮಾರ್ ಸಲಹೆ ನೀಡಿದರು. ಇದು ವಿಧಾನಸೌಧದಲ್ಲಿ ಶಾಲಾ ಮಕ್ಕಳೊಂದಿಗೆ ನಡೆದ ಸಂವಾದ ಕಾರ್ಯಕ್ರಮದಲ್ಲಿ ಪಂಚಶೀಲನಗರದ ಪಾಲಿಕೆ ಹಿರಿಯ ಪ್ರಾಥಮಿಕ ಶಾಲೆ 7ನೇ ತರಗತಿ ವಿದ್ಯಾರ್ಥಿ ವಿದ್ಯಾಸಾಗರ್, ನಾನು ಈ ರಾಜ್ಯದ ಸಿಎಂ ಆಗಬೇಕು, ಇದಕ್ಕಾಗಿ ಏನು ಓದಬೇಕು ಎಂದು ಕೇಳಿದ ಪ್ರಶ್ನೆಗೆ ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಕೊಟ್ಟ ಸಲಹೆಯುಕ್ತ ಉತ್ತರ. ಮಕ್ಕಳಲ್ಲಿ ಜ್ಞಾನ ಹೆಚ್ಚಾಗಬೇಕೆಂಬ ಉದ್ದೇಶದಿಂದಲೇ ಕಾರ್ಯಕ್ರಮಗಳಲ್ಲಿ ನಿರೂಪಣೆ ಹಾಗೂ ಮಾತನಾಡಲು ಅವಕಾಶ ನೀಡಲಾಗುತ್ತಿದೆ.



ನೀವೆಲ್ಲರೂ ಸಿಎಂ, ಡಿಸಿಎಂ, ಐಎಎಸ್ ಅಧಿಕಾರಿಗಳ ಜೊತೆ ನೇರವಾಗಿ ಹಾಗೂ ಧೈರ್ಯವಾಗಿ ಮಾತನಾಡುತ್ತಿದ್ದೀರಾ, ವಿಧಾನಸೌಧ ಸಮ್ಮೇಳನಾ ಸಭಾಂಗಣವು ದೇಶಕ್ಕೆ ಸಂವಿಧಾನ ತರುವಂತಹ ಜಾಗ, ಶಾಸಕಾಂಗ ಸಭೆ ನಡೆಸುವಂತಹ ಜಾಗ, ನೀವೇ ಇಲ್ಲಿ ಕೂತು, ಸಿಎಂ, ಡಿಸಿಎಂ, ಐಎಎಸ್ ಅಧಿಕಾರಿಗಳು ಆಗಬೇಕು" ಎಂದು ಸಲಹೆ ನೀಡಿದರು.

**ವಯೋಮಿತಿ ನಿಗದಿ ಮಾಡಿ ಗಂಡು ಮಕ್ಕಳಿಗೂ ಶಕ್ತಿ ಯೋಜನೆ ನೀಡುವ ಬಗ್ಗೆ ಚರ್ಚೆ:** ನೀಲಸಂದ್ರದ ಪಾಲಿಕೆ ಪ್ರಾಥಮಿಕ ಶಾಲೆ 7ನೇ ತರಗತಿ ವಿದ್ಯಾರ್ಥಿ ಚರಣ್, ನೀವು 5 ಗ್ಯಾರಂಟಿ ನೀಡಿದ್ದೀರಿ, ಮಹಿಳೆಯರಿಗೆ ಉಚಿತ ಬಸ್ ವ್ಯವಸ್ಥೆ ಮಾಡಿದ್ದು, ನಮ್ಮ ಅಮ್ಮ ಅಕ್ಕ ತಂಗಿಯರನ್ನು ಮಾತ್ರ ಊರಿಗೆ ಕರೆದುಕೊಂಡು ಹೋಗುತ್ತಾರೆ. ಗಂಡು ಮಕ್ಕಳಿಗಾಗಿ ಯಾವುದೇ ಯೋಜನೆ ಇಲ್ಲವೇ ಎಂದು ಕೇಳಿದಾಗ, "ನಿಮ್ಮ ತಾಯಿಗೆ 2000, ಬಸ್ ಉಚಿತ, 10 ಕೆಜಿ ಅಕ್ಕಿ, ಉಚಿತ ವಿದ್ಯುತ್ ನೀಡಲಾಗುತ್ತಿದೆ. ನೀನು ಕೇಳಿರುವ ಪ್ರಶ್ನೆಗೆ ಸರ್ಕಾರದಲ್ಲಿ ಚರ್ಚಿಸಿ ಒಂದು ವಯೋಮಿತಿಯವರೆಗೆ ಯೋಚಿಸಿ ಮುಂದೆ ಕ್ರಮವಹಿಸಲಾಗುವುದು" ಎಂದು ಭರವಸೆ ನೀಡಿದರು.

# ಉಚಿತ ಔಷಧ ವಿತರಿಸುವ ಮೂಲಕ ಸಮಾಜ ಸುರಕ್ಷತೆಗೆ ಆದ್ಯತೆ: ಡಾ.ಶರಣಪ್ರಕಾಶ್ ಪಾಟೀಲ್

**ಬೆಂಗಳೂರು, ನ. 14 :** ಅಪರೂಪದ ಮತ್ತು ಭಾರಿ ಸಮಸ್ಯೆಗಳಲ್ಲಿ ಬೆನ್ನುಮೂಳೆ ಸ್ನಾಯು ಕ್ಷೀಣತೆಯೂ ಒಂದು, ಇದರಿಂದ ಬಳಲುತ್ತಿರುವವರಿಗೆ ಉತ್ತಮ ಚಿಕಿತ್ಸೆ ಒದಗಿಸುವ ಮೂಲಕ ಪರಿವರ್ತಕ ಆರೋಗ್ಯ ಚಿಕಿತ್ಸಾ ವಿಧಾನವನ್ನು ಹಾಗೂ ಉಚಿತ ಔಷಧವನ್ನು ವಿತರಿಸುವ ಮೂಲಕ ಸಮಾಜ ಸುರಕ್ಷತೆಗೆ ಆದ್ಯತೆ ನೀಡುತ್ತಿರುವುದು ಸ್ವಾಗತಾರ್ಹ ಎಂದು ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವ ಡಾ.ಶರಣ ಪ್ರಕಾಶ್ ಪಾಟೀಲ್ ಅವರು ತಿಳಿಸಿದ್ದಾರೆ.

ಬೆಂಗಳೂರಿನ ಖಾಸಗಿ ಹೋಟೆಲಿನಲ್ಲಿ ಕೇರ್ ಅಂಡ್ ಪ್ರೊಟೆಕ್ಷನ್ ಆಫ್ ಚಿಲ್ಡ್ರನ್ ಟ್ರಸ್ಟ್ ಆಯೋಜಿಸಿದ್ದ ಬೆನ್ನುಮೂಳೆಯ ಸ್ನಾಯು ಕ್ಷೀಣತೆಯಿಂದ ಬಳಲುತ್ತಿರುವವರಿಗೆ ಉಚಿತ ಔಷಧ ನೀಡುವ ವಿಶೇಷ ಕಾರ್ಯಕ್ರಮ ಉದ್ಘಾಟನೆ ನೆರವೇರಿಸಿ ಸಚಿವರು ಮಾತನಾಡಿದರು. ಬೆನ್ನುಮೂಳೆಯ ಸ್ನಾಯು ಕ್ಷೀಣತೆಯಂಥ ಅಪರೂಪದ ಹಾಗೂ ಭಾರಿ ಅಪಾಯ ತಂದೊಡ್ಡುವ ರೋಗಗಳನ್ನು ನಿಯಂತ್ರಿಸುವುದಕ್ಕೆ ನಮ್ಮ ಸರ್ಕಾರ ಒತ್ತು ನೀಡುತ್ತಿದೆ. ಈ ರೀತಿಯ ಚಿಕಿತ್ಸಾ ವ್ಯವಸ್ಥೆಗಳು ಅಗಾಧವಾದ ಪ್ರಭಾವವನ್ನು ಬೀರುತ್ತವೆ. ಪ್ರಸವಪೂರ್ವ ರೋಗನಿರ್ಣಯ, ಆರಂಭಿಕ



ರೋಗನಿರ್ಣಯಕ್ಕೆ ನಾವು ಈಗ ಹೆಚ್ಚು ಗಮನಹರಿಸಬೇಕಾಗಿದೆ. ಚಿಕಿತ್ಸೆ, ಮತ್ತು ಸಮಗ್ರ ಬೆಂಬಲ ವ್ಯವಸ್ಥೆಗಳು ಭರವಸೆಯನ್ನು ನೀಡುತ್ತದೆ ಎಂದು ಸಚಿವರು ತಿಳಿಸಿದ್ದಾರೆ. ಶಿಶುಗಳಲ್ಲಿ ಮತ್ತು ಮಕ್ಕಳಲ್ಲಿ ಹೆಚ್ಚಾಗಿ ಕಾಣಿಸಿಕೊಳ್ಳುವ ಈ ಅಪರೂಪದ ಅನುವಂಶಿಕ ಕಾಯಿಲೆಗೆ ಔಷಧಿಗಳು ದೊರೆಯುವಂತೆ ಮಾಡುವುದು ಕುಟುಂಬಗಳ ಆರ್ಥಿಕ ಹೊರೆ ಕಡಿಮೆ ಮಾಡಲು ನಮ್ಮ ಸರ್ಕಾರ ಮುಂದಾಗಿದೆ.

ಅಪರೂಪದ ಕಾಯಿಲೆಗಳ ರೋಗಿಗಳಿಗೆ ಸರ್ಕಾರ ಸದಾ ಬೆಂಬಲ ನೀಡುತ್ತಿದೆ, ಹೆಚ್ಚುವರಿಯಾಗಿ ಒಟ್ಟು ಸುಮಾರು 75 ಕೋಟಿ ರೂ.ಗಳನ್ನು ಒದಗಿಸಲಾಗಿದೆ. ಅಪರೂಪದ ಕಾಯಿಲೆಗಳ ಚಿಕಿತ್ಸೆಗಾಗಿ ವಿಶೇಷ ನಿಧಿಯನ್ನು ಆರಂಭಿಸಲಾಗಿದೆ. ಅಪರೂಪದ ಕಾಯಿಲೆಗಳಿಗಾಗಿ ಶ್ರೇಷ್ಠತೆಯ ಕೇಂದ್ರವನ್ನು ಸ್ಥಾಪಿಸಿದ್ದೇವೆ ಇಂದಿರಾ ಗಾಂಧಿ ಮಕ್ಕಳ ಆರೋಗ್ಯ ಸಂಸ್ಥೆಯಲ್ಲಿ ಇದು ಆರಂಭಿಸಲಾಗಿದ್ದು, ಇದು ದೇಶದ ಮೊದಲ ಕೇಂದ್ರವಾಗಿದೆ ಎಂದು ಪಾಟೀಲರು ವಿವರಿಸಿದರು. ಇಂದಿರಾಗಾಂಧಿ ಮಕ್ಕಳ ಆರೋಗ್ಯ ಸಂಸ್ಥೆಯಲ್ಲಿ ಪಾಲುದಾರಿಕೆಯಲ್ಲಿ ಉಚಿತ ಚಿಕಿತ್ಸೆ ಒದಗಿಸಲು ಹೆಚ್ಚು ಆದ್ಯತೆ ನೀಡಲಾಗಿದೆ. ಅದರಲ್ಲೂ ಪ್ರಮುಖವಾಗಿ ಬೆನ್ನುಮೂಳೆ ಸ್ನಾಯು ಕ್ಷೀಣತೆಗೆ ಚಿಕಿತ್ಸೆ ಕೊಡಿಸಲು ಕ್ರಮ ಕೈಗೊಳ್ಳಲಾಗಿದೆ. ಆರೋಗ್ಯ ಕ್ಷೇತ್ರದಲ್ಲಿಯೇ ಇದೊಂದು ಮೈಲಿಗಲ್ಲಾಗಿದೆ ಎಂದು ಸಚಿವರು ತಿಳಿಸಿದರು.

ನಮ್ಮ ಸರ್ಕಾರ ಸರ್ವರ ಆರೋಗ್ಯ ರಕ್ಷಣೆಗೆ ಸದಾ ಬದ್ಧವಾಗಿದೆ. ಈಗಾಗಲೇ ಗ್ಯಾರಂಟಿ ಯೋಜನೆಗಳ ಜೊತೆಗೆ ಆರೋಗ್ಯ ಕ್ಷೇತ್ರದಲ್ಲಿಯೂ ಜನಪರ ಯೋಜನೆಗಳನ್ನು ಜಾರಿಗೆ ತರುವ ಮೂಲಕ ಸ್ವಸ್ಥ ಹಾಗೂ ಆರೋಗ್ಯಕರ ಸಮಾಜ ನಿರ್ಮಾಣಕ್ಕೆ ಮುಂದಾಗಿದ್ದೇವೆ.

ಭವಿಷ್ಯದಲ್ಲಿಯೂ ಹಲವು ಯೋಜನೆಗಳನ್ನು ಜಾರಿಗೆ ತರಲು ನಾವು ಬದ್ಧರಾಗಿದ್ದೇವೆ ಎಂದು ಸಚಿವ ಶರಣ ಪ್ರಕಾಶ್ ಪಾಟೀಲ್ ಹೇಳಿದರು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್, ವೈದ್ಯಕೀಯ ಶಿಕ್ಷಣ ಇಲಾಖೆ ಪ್ರಧಾನ ಕಾರ್ಯದರ್ಶಿ ಮೊಹಮ್ಮದ್ ಮೊಹಿಸಿನ್ ಮತ್ತು ಇಂದಿರಾಗಾಂಧಿ ಮಕ್ಕಳ ಆರೋಗ್ಯ ಸಂಸ್ಥೆಯ ನಿರ್ದೇಶಕ ಡಾ.ಕೆ.ಎಸ್.ಸಂಜಯ್ ಉಪಸ್ಥಿತರಿದ್ದರು.

# ದೇಶವನ್ನೇ ಲೂಟಿಮಾಡಿದ ಉದ್ಯಮಿ ಗೌತಮ್ ಅದಾನಿ: ಮಲ್ಲಿಕಾರ್ಜುನ್ ಖರ್ಗೆ

**ಕಲಬುರಗಿ, ನ. 14 :** ಇಡೀ ದೇಶವನ್ನೇ ಲೂಟಿ ಮಾಡಿದ ಉದ್ಯಮಿ ಗೌತಮ್ ಅದಾನಿ ಪ್ರತಿಗಾಮಿ ಸರಕಾರಗಳಿಗೆ ಸಹಕಾರ ಕೊಡುತ್ತಿದ್ದಾನೆ ಎಂದು ಎಐಸಿಸಿ ಅಧ್ಯಕ್ಷ, ರಾಜ್ಯಸಭೆಯ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ್ ಖರ್ಗೆ ಅವರು ಏಕವಚನದಲ್ಲಿ ವಾಗ್ದಾಳಿ ನಡೆಸಿದ್ದಾರೆ. ನಗರದಲ್ಲಿ ತಮ್ಮ ನಿವಾಸದಲ್ಲಿ ಮಾಧ್ಯಮದವರೊಂದಿಗೆ ಪ್ರತಿಕ್ರಿಯಿಸಿದ ಅವರು, ಅದಾನಿ ಬಗ್ಗೆ ಪದೇ ಪದೇ ಮಾತಾಡ್ತೀರಿ ಅಂತ ನಮಗೆ ಹೇಳ್ತಾರೆ, ಅದಾನಿ ಧರ್ಮದ ಆಧಾರದ ಮೇಲೆ ಭಾವನಾತ್ಮಕವಾಗಿ ಒಗ್ಗೂಡಿಸುವ ಶಕ್ತಿಗಳನ್ನು ಬೆಂಬಲಿಸುತ್ತಿದ್ದಾನೆ. ಲೂಟಿಗೈದ ಅದಾನಿಯ ಬೃಹತ್ ಹಣವನ್ನು ಮೋದಿ-ಅಮಿತ್ ಶಾ ತಗೊಂಡು ಚುನಾವಣೆಗಳನ್ನು ಮಾಡುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಇಡೀ ದೇಶದ ಸಂಪತ್ತು ಬೆರಳಣಿಕೆಯ ಉದ್ಯಮಿಯಲ್ಲಿರುವ ಅದಾನಿಯಂತಹ ಲೋಟಿಕೋರರನ್ನು ಮೋದಿ-ಶಾ ಬೆಂಬಲಿಸುತ್ತಿದ್ದಾರೆ. ಇವರು ಬಡವರ್ಗದ ಜನರ ಕಷ್ಟಗಳಿಗೆ ಸ್ಪಂದಿಸುತ್ತಿಲ್ಲ ಎಂದು ವಾಗ್ದಾಳಿ ನಡೆಸಿದ ಅವರು, ದೇಶದ ರೈತರಿಗೆ ಸರಿಯಾದ



ಬೆಂಬಲ ಬೆಲೆ ನೀಡುತ್ತಿಲ್ಲ, ರಾಜ್ಯಗಳಿಗೆ ಬರಬೇಕಾದ ಜಿಎಸ್ಟಿ ಪಾಲು ಕೊಡುತ್ತಿಲ್ಲ ಎಂದರು.ಬಿಜೆಪಿಯವರು ಮೊದಲಿನಿಂದಲೇ ಸಂವಿಧಾನ, ತಿರಂಗಾವನ್ನು ಒಪ್ಪಿಲ್ಲ, ಇದನ್ನ ಒಪ್ಪದೇ ಅವರು ರಾಮಲೀಲಾ ಮೈದಾನದಲ್ಲಿ ಸಂವಿಧಾನವನ್ನೇ ಸುಟ್ಟಿದ್ದರು.

ಮಹಾರಾಷ್ಟ್ರ, ಜಾರ್ಖಂಡ್ ರಾಜ್ಯದಲ್ಲಿ ಜನರು ನಮ್ಮ ರಾಜ್ಯಕ್ಕೆ ಏನು ಕೊಡ್ತಿದ್ದೀರಿ ಎಂದು ಪ್ರಶ್ನಿಸುತ್ತಿದ್ದಾರೆ. ನಮ್ಮ ಬಗ್ಗೆ ಒಳ್ಳೆಯ ಪ್ರತಿಕ್ರಿಯೆ ಬಂದಿದೆ, ಕರ್ನಾಟಕದಲ್ಲಿ ಏನೆಲ್ಲಾ ಜಾರಿ ಮಾಡಿದ್ದೀವಿ, ಅವುಗಳನ್ನು ಅಧಿಕಾರಕ್ಕೆ ಏರಿದರೆ ಮಹಾರಾಷ್ಟ್ರದಲ್ಲೂ ಅನುಷ್ಠಾನಕ್ಕೆ ತರಲಿದ್ದೇವೆ ಎಂದರು.

# ಶಾಸಕರಿಗೆ ಆಮಿಷವೊಡ್ಡಿ ಸರ್ಕಾರ ಪತನಗೊಳಿಸಲು ಯತ್ನ : ಜಿ. ಪರಮೇಶ್ವರ್

**ಬೆಂಗಳೂರು, ನ. 14 :** ರಾಜ್ಯಸರ್ಕಾರವನ್ನು ಅಸ್ಥಿರಗೊಳಿಸಲು ಪ್ರತಿಯೊಬ್ಬ ಶಾಸಕರಿಗೂ 50 ಕೋಟಿ ರೂ.ಗಳ ಆಮಿಷ ಒಡ್ಡುತ್ತಿರುವುದಾಗಿ ಮುಖ್ಯಮಂತ್ರಿಯವರು ಹೇಳಿರುವುದರಲ್ಲಿ ಅರ್ಥ ಇದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಸಮರ್ಥಿಸಿಕೊಂಡಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿ ಮತ್ತು ಜೆಡಿಎಸ್ ಪಕ್ಷಗಳು ಸರ್ಕಾರವನ್ನು ಅಸ್ಥಿರಗೊಳಿಸಲು ಎಲ್ಲಾ ಪ್ರಯತ್ನಗಳನ್ನೂ ಸತತವಾಗಿ ನಡೆಸುತ್ತಿವೆ. ಮುಡಾ ಪ್ರಕರಣದ ಆರೋಪ ಸೇರಿದಂತೆ ಎಲ್ಲಾ ಯತ್ನಗಳೂ ಸರ್ಕಾರವನ್ನು ಅಸ್ಥಿರಗೊಳಿಸುವ ಸಲುವಾಗಿಯೇ ನಡೆಯುತ್ತಿವೆ ಎಂದರು.

ಈಗ ಶಾಸಕರಿಗೆ ಆಮಿಷವೊಡ್ಡಿ ಸರ್ಕಾರ ಪತನಗೊಳಿಸಲು ಯತ್ನಿಸುತ್ತಿದ್ದಾರೆ. ಮಹಾರಾಷ್ಟ್ರದಲ್ಲಿ 42 ಮಂದಿ ಶಾಸಕರನ್ನು ಹಣ ಕೊಟ್ಟು ಕರೆತಂದು ಸರ್ಕಾರ ರಚಿಸಿದ್ದರು. ಇಲ್ಲಿಯೂ ಅಂತಹುದೇ ಪ್ರಯತ್ನ ಮೊದಲು ನಡೆಸಿ ಯಶಸ್ವಿಯಾಗಿದ್ದರು. ಈಗಲೂ ಅದೇ ಚಾಳಿಯನ್ನು ಮುಂದುವರೆಸಿದ್ದಾರೆ. ಈ ಹಿನ್ನೆಲೆಯಲ್ಲಿ ಮುಖ್ಯಮಂತ್ರಿಯವರು ತಮಗಿರುವ ಮಾಹಿತಿ ಆಧರಿಸಿ ಹೇಳಿಕೆ ನೀಡಿದ್ದಾರೆ.ಇದನ್ನೆಲ್ಲಾ ಜನ ಗಮನಿಸುತ್ತಾರೆ. ಕೆಲವೊಮ್ಮೆ ತಪ್ಪು ಕಲ್ಪನೆಗಳು ಬಂದರೂ ನಾವು ಜನಸಮುದಾಯದ ನಡುವೆ ಹೋಗಿ ವಿವರಣೆ ನೀಡುತ್ತೇವೆ. ಜನ ಕಣ್ಣು ಮುಚ್ಚಿಕೊಂಡು ಎಲ್ಲವನ್ನೂ ಸ್ವೀಕರಿಸುವುದಿಲ್ಲ , ಅವರನ್ನು ತಿರಸ್ಕಾರ ಮಾಡುತ್ತಾರೆ ಎಂದರು.ನಮಗೆ ಯಾವುದೇ ಆತಂಕ ಇಲ್ಲ. ಸರ್ಕಾರ ಅಸ್ಥಿರಗೊಳಿಸಲು ಅವಕಾಶ ನೀಡುವುದಿಲ್ಲ. ಅವರ ಪ್ರಯತ್ನವನ್ನು ವಿಫಲಗೊಳಿಸುತ್ತೇವೆ.

ಬೃಹತ್ ಪ್ರಮಾಣದ ಜನಾದೇಶ ಇದ್ದಾಗಿಯೂ



ಬಿಜೆಪಿ ನಡೆಸುತ್ತಿರುವ ಪ್ರಯತ್ನಗಳು ಆಕ್ಷೇಪಾರ್ಹ ಎಂದು ಹೇಳಿದರು. ಒಳಮೀಸಲಾತಿ ಯಾವಾಗ ಎಂಬ ಪ್ರಶ್ನೆ ಸದಾಕಾಲ ಎದುರಾಗುತ್ತಲೇ ಇದೆ. ಅದಕ್ಕೆ ತಾರ್ಕಿಕ ಅಂತ್ಯ ಎಂಬ ನಿಟ್ಟಿನಲ್ಲಿ ರಾಜ್ಯಸರ್ಕಾರ ಈಗ ನಾಗಮೋಹನದಾಸ್ ಅವರ ಸಮಿತಿಯನ್ನು ರಚನೆ ಮಾಡಿದ್ದು, ಪರಿಶಿಷ್ಟ ಜಾತಿಗಳ ವೈಜ್ಞಾನಿಕ ಹಾಗೂ ಸಮರ್ಥನೀಯ ದತ್ತಾಂಶ ಸಂಗ್ರಹಕ್ಕೆ ಮುಂದಾಗಿದೆ.ಮೂರು ತಿಂಗಳ ಒಳಗಾಗಿ ಆಯೋಗ ತನ್ನ ವರದಿಯನ್ನು ನೀಡಲಿದೆ. ಅನಂತರ ಸರ್ಕಾರ ನಿರ್ಧಾರ ತೆಗೆದುಕೊಳ್ಳಲಿದೆ ಎಂದರು.ಶೇ.40ರಷ್ಟು ಕಮಿಷನ್ ಹಗರಣದ ತನಿಖೆಯನ್ನು ನಾಗಮೋಹನದಾಸ್ ಅವರ ನೇತೃತ್ವದ ಆಯೋಗಕ್ಕೆ ನೀಡಲಾಗಿದೆ. ಈಗ ಒಳಮೀಸಲಾತಿಯ ಕುರಿತಂತೆಯೂ ಸಮಿತಿ ರಚಿಸಿರುವುದರಿಂದ ನಾಗಮೋಹನ್ ದಾಸ್ ಅವರಿಗೆ ಕಾರ್ಯದೊತ್ತಡ ಹೆಚ್ಚಾಗಬಹುದು ಎಂಬ ಅಭಿಪ್ರಾಯ ಅನಗತ್ಯ. ಅವರ ಕೆಲಸಗಳಿಗೆ ಅಗತ್ಯವಾದ ಸಿಬ್ಬಂದಿಗಳನ್ನು ಒದಗಿಸಲಾಗುವುದು. ಇದು ಓವರ್‌ಲ್ಯಾಪ್ ಆಗುವುದಿಲ್ಲ ಇದು ಓವರ್‌ಲ್ಯಾಪ್ ಆಗುವುದಿಲ್ಲ ಎಂದು ಹೇಳಿದರು.

# ಮುಡಾ ಹಗರಣ: ಹೈಕೋರ್ಟ್ ವಿಭಾಗೀಯ ಪೀಠಕ್ಕೆ ಮೇಲ್ಮನವಿ ಸಲ್ಲಿಸಿದ ಸಿಎಂ ಸಿದ್ದರಾಮಯ್ಯ

**ಬೆಂಗಳೂರು, ನ. 14 :** ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ಹೈಕೋರ್ಟ್‌ರಿ ಆದೇಶ ಪ್ರಶ್ನಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹೈಕೋರ್ಟ್ ವಿಭಾಗೀಯ ಪೀಠಕ್ಕೆ ಮೇಲ್ಮನವಿ ಸಲ್ಲಿಸಿದ್ದಾರೆ.

ತುರ್ತು ಅವಶ್ಯಕತೆ ಸೃಷ್ಟಿಯಾಗಿದೆ ನವೆಂಬರ್ 23ಕ್ಕೆ ವಿಚಾರಣೆ ನಡೆಸಬೇಕೆಂದು ಮುಖ್ಯಮಂತ್ರಿ ಪರ ವಕೀಲ ಅಭಿಷೇಕ್ ಸಿಂಘ್ವಿ ಮನವಿ ಮಾಡಿದ್ದಾರೆ. ಮನವಿ ಆಲಿಸಿ ವಿಚಾರಣೆಯನ್ನು ನವೆಂಬರ್ 23ಕ್ಕೆ



ಹೈಕೋರ್ಟ್ ವಿಭಾಗೀಯಪೀಠ ನಿಗದಿಪಡಿಸಿದೆ. ಮುಡಾ ಹಗರಣಕ್ಕೆ ಸಂಬಂಧಪಟ್ಟಂತೆ ಭ್ರಷ್ಟಾಚಾರ ತಡೆ ಕಾಯ್ದೆ 17ಂ ಅಡಿಯಲ್ಲಿ ರಾಜ್ಯಪಾಲರು ಅನುಮತಿ ನೀಡಿದ್ದರು.


ತನಿಖೆಗೆ ರಾಜ್ಯಪಾಲರ ಅನುಮತಿಯನ್ನು ಪ್ರಶ್ನಿಸಿ ಸಿಎಂ ಸಿದ್ದರಾಮಯ್ಯ ಹೈಕೋರ್ಟಿಗೆ ರಿಟ್ ಅರ್ಜಿ ಸಲ್ಲಿಸಿದ್ದರು. ವಿಚಾರಣೆ ನಡೆಸಿದ ಹೈಕೋರ್ಟ್ ಏಕ ಸದಸ್ಯ ಪೀಠವು ಸಿದ್ದರಾಮಯ್ಯ ಅವರು ಸಲ್ಲಿಸಿದ್ದ ರಿಟ್ ಅರ್ಜಿಯನ್ನು ವಜಾ ಗೊಳಿಸಿತ್ತು. ಇದೀಗ ಹೈಕೋರ್ಟ್ ಆದೇಶವನ್ನು ಪ್ರಶ್ನಿಸಿ ಸಿಎಂ ಸಿದ್ದರಾಮಯ್ಯ ಅವರು ಹೈಕೋರ್ಟ್ ಏಕ ಸದಸ್ಯ ವಿಭಾಗೀಯ ಪೀಠಕ್ಕೆ ಮೇಲ್ಮನವಿ ಸಲ್ಲಿಸಿದ್ದಾರೆ.

ಈ ವೇಳೆ ತುರ್ತು ವಿಚಾರಣೆ ಅಗತ್ಯವಿದೆ ಎಂದು ಸಿಜೆ ಪ್ರಶ್ನಿಸಿದ್ದಾರೆ ಇದಕ್ಕೆ ಸಿಎಂ ಸಿದ್ದರಾಮಯ್ಯ ಪರ ವಕೀಲರು ಹೌದು ತುರ್ತು ವಿಚಾರಣೆ ಅಗತ್ಯವಿದೆ ಎಂದಾಗ ಇದೇ ನವೆಂಬರ್ 23ಕ್ಕೆ ಮೇಲ್ಮನವಿ ಅರ್ಜಿ ವಿಚಾರಣೆಗೆ ದಿನಾಂಕ ನಿಗದಿಪಡಿಸಲಾಗಿದೆ.

# ಮಣಿಪುರ ಹಿಂಸಾಚಾರದಲ್ಲಿ ಮಹಿಳೆಯ ಬರ್ಬರ ಹತ್ಯೆ: ಶವಪರೀಕ್ಷೆಯಲ್ಲಿ ಪತ್ತೆ

**ಇಂಫಾಲ, ನ. 14:** ಮಣಿಪುರ ರಾಜ್ಯದ ಪ್ರಕ್ಷುಬ್ಧ ಜಿರಿಬಾಮ್ ಜಿಲ್ಲೆಯಲ್ಲಿ ಶಂಕಿತ ಬಂಡುಕೋರರ ರಾತ್ರಿ ದಾಳಿಯಲ್ಲಿ ಸಾವನ್ನಪ್ಪಿದ ಮಹಿಳೆಯ ಶವಪರೀಕ್ಷೆ ವರದಿ ಬಹಿರಂಗವಾಗಿದ್ದು, ದೇಹದ ಬಹುತೇಕ ಮೂಳೆಗಳು ಮುರಿದಿದ್ದು, ಆಕೆಯ ಶೇ. 99ರಷ್ಟು ಸುಟ್ಟ ದೇಹದಿಂದ ತಲೆಬುರುಡೆ ಪ್ರತ್ಯೇಕವಾಗಿತ್ತು ಎಂದು ಹೇಳಿದೆ.

ಅಸ್ಸಾಂನ ಗಡಿಯಲ್ಲಿರುವ ಜಿಲ್ಲೆಯಲ್ಲಿ ಶಂಕಿತ ಮೈತೇಯ್ ಉಗ್ರಗಾಮಿಗಳು ತಮ್ಮ ಮನೆಗೆ ಬೆಂಕಿ ಹಚ್ಚುವ ಮೊದಲು ಆಕೆಯ ಮೇಲೆ ಅತ್ಯಾಚಾರವೆಸಗಿದ್ದಾರೆ ಎಂದು 31 ವರ್ಷದ ಮಹಿಳೆಯ ಪತಿ ಪೊಲೀಸರಿಗೆ ನೀಡಿರುವ ದೂರಿನಲ್ಲಿ ಆರೋಪಿಸಿದ್ದಾರೆ. ಅವರು ಶಾಲಾ ಶಿಕ್ಷಕಿ ಮತ್ತು ಮೂರು ಮಕ್ಕಳ ತಾಯಿಯಾಗಿದ್ದರು. ದೇಹದ ಭಾಗಗಳು ಸಂಪೂರ್ಣವಾಗಿ ಸುಟ್ಟುಹೋಗಿವೆ ಮತ್ತು ಗುರುತಿಸಲು ಸಾಧ್ಯವಾಗದ ಕಾರಣ ಲೈಂಗಿಕ ದೌರ್ಜನ್ಯವನ್ನು ಪರೀಕ್ಷಿಸಲು



ಮಾದರಿಗಳನ್ನು ತೆಗೆದುಕೊಳ್ಳಲಾಗುವುದಿಲ್ಲ ಎಂದು ಶವಪರೀಕ್ಷೆ ವರದಿ ಹೇಳಿದೆ. ಅಂತ್ಯ ಸಂಸ್ಕಾರದ ಬಳಿಕ ಕುಟುಂಬಸ್ಥರು ಮೃತದೇಹವನ್ನು ಅಂತ್ಯಸಂಸ್ಕಾರ ಮಾಡಿದ್ದಾರೆ.

ಬಲಭಾಗದ ಮೇಲಿನ ಅಂಗ ಮತ್ತು ಎರಡೂ ಕೆಳಗಿನ ಅಂಗಗಳ ಭಾಗಗಳು, ಮುಖದ ರಚನೆಯು ಕಾಣೆಯಾಗಿದೆ ಎಂದು ವರದಿ ಹೇಳಿದೆ. ಎಡತೊಡೆಯ ಮೇಲೆ 5 ಸೆಂ.ಮೀ ಉದ್ದದ ಲೋಹೀಯ ಉಗುರು ಹುದುಗಿರುವುದು ಕಂಡುಬಂದಿದೆ. ಸುಟ್ಟ ಮತ್ತು ಬೇರ್ಪಡಿಸಿದ ಮೂಳೆಯ ತುಣುಕುಗಳು ಪ್ರತ್ಯೇಕತೆಯ ಮರಣೋತ್ತರ ಸ್ವರೂಪವನ್ನು ಸೂಚಿಸುವ ಪ್ರಮುಖ ಪ್ರತಿಕ್ರಿಯೆಯ ಯಾವುದೇ ಲಕ್ಷಣಗಳನ್ನು ತೋರಿಸಲಿಲ್ಲ ಎಂದು ಶವಪರೀಕ್ಷೆ ವರದಿ ಹೇಳಿದೆ. ಮಹಿಳೆಯನ್ನು ಕೊಂದ ಎರಡು ದಿನಗಳ ನಂತರ ನೆರೆಯ ಅಸ್ಸಾಂನ ಸಿಲ್ಚಾರ್ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯಲ್ಲಿ ಶವಪರೀಕ್ಷೆ ಮಾಡಲಾಯಿತು.

ಮೂರನೇ ಹಂತದ ಆಂಟಿಮಾರ್ಟಮ್ ಸುಟ್ಟಗಾಯಗಳ ಪರಿಣಾಮವಾಗಿ ಆಘಾತದಿಂದಾಗಿ ಸಾವು ಸಂಭವಿಸಿದೆ, ಇದು ಒಟ್ಟು ದೇಹದ ಮೇಲ್ಮೈ ಪ್ರದೇಶದ 99 ಪ್ರತಿಶತವನ್ನು ಆವರಿಸಿದೆ. ಸಾವಿನ ಸಮಯವು 24 ರಿಂದ 36 ಗಂಟೆಗಳು ಎಂದು ಶವಪರೀಕ್ಷೆ ವರದಿಯು ತೀರ್ಮಾನಿಸಿದೆ. ಪೊಲೀಸರು ಸಲ್ಲಿಸಿದ ಪ್ರಥಮ ಮಾಹಿತಿ ವರದಿಯಲ್ಲಿ (ಎಫ್‌ಐಆರ್), ರಾಜ್ಯ ರಾಜಧಾನಿ ಇಂಫಾಲ್‌ನಿಂದ 120 ಕಿಮೀ ದೂರದಲ್ಲಿರುವ ಜಿರಿಬಾಮ್‌ನಲ್ಲಿ ಗುರುವಾರ ರಾತ್ರಿ ತಮ್ಮ ಹಳ್ಳಿಯಾದ ಜೈರೌನ್‌ನಲ್ಲಿ ದಾಳಿ ಪ್ರಾರಂಭವಾದಾಗ ಆಕೆಯ ಕಾಲಿಗೆ ಗುಂಡು ಹಾರಿಸಲಾಗಿದೆ ಎಂದು ಮಹಿಳೆಯ ಪತಿ ಆರೋಪಿಸಿದ್ದಾರೆ. ಬೆಂಕಿಯು ಕಟ್ಟಡವನ್ನು ಸಂಪೂರ್ಣವಾಗಿ ನಾಶಪಡಿಸಿದ ನಂತರ ಅವರ ಮನೆ ಕುಸಿದಿದೆ ಎಂದು ಅವರು ಹೇಳಿದರು.

ದಾಳಿಕೋರರು ಹ್ಮಾರ್ ಬುಡಕಟ್ಟಿನ ಜನರು ವಾಸಿಸುವ ಗ್ರಾಮದಲ್ಲಿ ಹಲವಾರು ಇತರ ಮನೆಗಳಿಗೆ ಬೆಂಕಿ ಹಚ್ಚಿದ್ದಾರೆ ಎಂದು ನಾಗರಿಕ ಸಮಾಜದ ಗುಂಪುಗಳು ತಿಳಿಸಿವೆ. ರಾತ್ರಿ ದಾಳಿಯ ದೃಶ್ಯಗಳು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿವೆ. ಗುರುವಾರದ ದಾಳಿಯು ಬಹು ಜನಾಂಗೀಯ ಜಿಲ್ಲೆಯಲ್ಲಿ ಇತ್ತೀಚಿನ ಸುತ್ತಿನ ಹಿಂಸಾಚಾರವನ್ನು ಹುಟ್ಟುಹಾಕಿತು. ಅಲ್ಲಿ ಮಣಿಪುರವನ್ನು ಅಸ್ಸಾಂನೊಂದಿಗೆ ಸಂಪರ್ಕಿಸುವ ಪ್ರಮುಖ ರಾಷ್ಟ್ರೀಯ ಹೆದ್ದಾರಿ ಹಾದುಹೋಗುತ್ತದೆ.

ಸೋಮವಾರ, ಜಿರಿಬಾಮ್‌ನಲ್ಲಿ ಕೇಂದ್ರೀಯ ಮೀಸಲು ಪೊಲೀಸ್ ಪಡೆ (ಸಿಆರ್‌ಪಿಎಫ್) ನಡೆಸಿದ ಎನ್ಕೌಂಟರ್‌ನಲ್ಲಿ 10 ಶಂಕಿತ ಕುಕಿ ಬಂಡುಕೋರರನ್ನು ಹೊಡೆದುರುಳಿಸಲಾಯಿತು. ಕುಕಿ ಬುಡಕಟ್ಟು ಜನಾಂಗದ ನಾಗರಿಕ ಸಮಾಜದ ಗುಂಪುಗಳು 10 ಪುರುಷರು ಗ್ರಾಮ ಸ್ವಯಂಸೇವಕರು ಎಂದು ಆರೋಪಿಸಿದ್ದಾರೆ. ಘಟನೆಯ ಬಗ್ಗೆ ಸಂಪೂರ್ಣ ತನಿಖೆಗೆ ಒತ್ತಾಯಿಸಿದ್ದಾರೆ.

# ನಾವಾಡುವ ನುಡಿಯೇ ಕನ್ನಡ ನುಡಿ ಕಾರ್ಯಕ್ರಮ: ಮಹೇಶ ಜೋಶಿ

**ಬೆಂಗಳೂರು, ನ. 14 :** ನಾವಾಡುವ ನುಡಿಯೇ ಕನ್ನಡ ನುಡಿ ಎಂಬ ಶೀರ್ಷಿಕೆಯಡಿ ಕನ್ನಡ ಸಾಹಿತ್ಯ ಪರಿಷತ್ತಿನಿಂದ ರಾಜ್ಯಾದ್ಯಂತ ಭಾವಗೀತೆ, ಕವಿ-ಕಾವ್ಯ ಗೀತೆ ಹಾಗೂ ಚಲನಚಿತ್ರ ಗೀತೆಗಳ ಆಧಾರಿತ ಸಂಗೀತ-ನೃತ್ಯ ಕಾರ್ಯಕ್ರಮ ನಾಡೋಜ ಡಾ. ಮಹೇಶ ಜೋಶಿ ಕನ್ನಡ ಭಾಷೆ, ಸಾಹಿತ್ಯ, ಕಲೆ, ಸಂಸ್ಕೃತಿ ಮತ್ತು ಜಾನಪದ ಇವುಗಳ ರಕ್ಷಣೆ, ಪ್ರಸಾರ ಮತ್ತು ಅಭಿವೃದ್ಧಿಯ ಮೂಲ ಧ್ಯೇಯೋದ್ದೇಶಗಳೊಂದಿಗೆ ಕನ್ನಡ-ಕನ್ನಡಿಗ-ಕರ್ನಾಟಕದ ಹಿತರಕ್ಷಣೆ ಕಾಪಾಡುವ ಹಿನ್ನೆಲೆಯಲ್ಲಿ ಹಾಗೂ ಕನ್ನಡ ಸಾಹಿತ್ಯ ಪರಿಷತ್ತನ್ನು ಜನಸಾಮಾನ್ಯರ ಪರಿಷತ್ತನ್ನಾಗಿ ರೂಪಿಸುವ ಉದ್ದೇಶದಿಂದ ಪರಿಷತ್ತಿನ ಅಧ್ಯಕ್ಷ ಡಾ. ಮಹೇಶ ಜೋಶಿ ಅವರು ವಿಶಿಷ್ಟ ಕಾರ್ಯಕ್ರಮಗಳನ್ನು ಆಯೋಜಿಸುತ್ತಿದ್ದಾರೆ. ಇವುಗಳಲ್ಲಿ ಬಹಳ ಮುಖ್ಯವಾದದ್ದು ನಾವಾಡುವ ನುಡಿಯೇ ಕನ್ನಡನುಡಿ ಎನ್ನುವ ಕಾರ್ಯಕ್ರಮ. ಈ ಸಾಂಸ್ಕೃತಿಕ ಕಾರ್ಯಕ್ರಮವು ರಾಜ್ಯಾದ್ಯಂತ ನಡೆಯಲಿದ್ದು ಭಾವಗೀತೆ, ಕವಿ-ಕಾವ್ಯ ಗೀತೆ ಮತ್ತು ಚಲನಚಿತ್ರ ಗೀತೆಗಳನ್ನು ವಾದ್ಯಗೋಷ್ಠಿಯ ಸಹಕಾರದೊಂದಿಗೆ ಪ್ರಸ್ತುತಪಡಿಸಲಾಗುವುದು. ನಾಡೋಜ ಡಾ. ಮಹೇಶ ಜೋಶಿಯವರು ದೂರದರ್ಶನದ ಚುಕ್ಕಾಣಿ ಹಿಡಿದಾಗ ಮಧುರ ಮಧುರವೀ ಮಂಜುಳಗಾನ ಎನ್ನುವ ಜನಪ್ರಿಯ ಕಾರ್ಯಕ್ರಮಗಳನ್ನು ಆಯೋಜಿಸಿ, ಜನಸಾಮಾನ್ಯರಿಂದ ದೂರವಾಗಿದ್ದ ದೂರದರ್ಶನವನ್ನು ಸಮೀಪ ದರ್ಶನ ಮಾಡಿಸುವಲ್ಲಿ ಯಶಸ್ವಿಯಾಗಿದ್ದರು. ಅದೇ ಮಾದರಿಯಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನಿಂದ ಮುಂಬರುವ ದಿನಗಳಲ್ಲಿ ಕನ್ನಡ ನಾಡಿನ ತೆರೆಯ ಮರೆಯಲ್ಲಿರುವ ಕಲಾವಿದರನ್ನು ಗುರುತಿಸಿ ಅಂತಹವರಿಗೆ ಸೂಕ್ತ ವೇದಿಕೆ ನೀಡಿ ಪ್ರೋತ್ಸಾಹಿಸುವುದಕ್ಕೆ ಅಧ್ಯಕ್ಷರು ಮುಂದಾಗಿದ್ದಾರೆ.

ಸಂಗೀತ, ನೃತ್ಯದಲ್ಲಿ ತೊಡಗಿಸಿಕೊಂಡ ಕಲಾವಿದರು, ಅವಕಾಶ ವಂಚಿತರು, ಜೀವನದಲ್ಲೊಮ್ಮೆ ಬೃಹತ್ ವೇದಿಕೆಯ ಮೇಲೆ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಬೇಕು ಎನ್ನುವ ಕನಸು ಇಟ್ಟುಕೊಂಡಿರುವವರಿಗೆ ಸದಾವಕಾಶ ನೀಡಲು ಕನ್ನಡ ಸಾಹಿತ್ಯ ಪರಿಷತ್ತು ಮುಂದಾಗಿದೆ. ಕನ್ನಡದ ಚಿತ್ರಗೀತೆಗಳನ್ನು ಒಳಗೊಂಡ ಈ ಕಾರ್ಯಕ್ರಮದಲ್ಲಿ ಕನ್ನಡ ಚಲನಚಿತ್ರ ಗೀತೆಗಳಿಗೆ ನೃತ್ಯ ಮಾಡುವವರಿಗೂ ಅವಕಾಶ ಕಲ್ಪಿಸಿಕೊಡಲಾಗುತ್ತಿದೆ. ಈ ಅವಕಾಶವನ್ನು ಸದುಪಯೋಗ ಪಡಿಸಿಕೊಳ್ಳಲು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಡಾ. ಮಹೇಶ ಜೋಶಿ ಅವರು ಕೋರಿದ್ದಾರೆ.

ಹಾವೇರಿಯಲ್ಲಿ ಜರುಗಲಿರುವ 86ನೆಯ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿಯೂ ನಾವಾಡುವ ನುಡಿಯೇ ಕನ್ನಡ ನುಡಿಯ ಕಾರ್ಯ ಕ್ರಮವನ್ನು ಆಯೋಜಿಸಲಾಗುವುದು.

ಈ ಹಿನ್ನೆಲೆಯಲ್ಲಿ ಸ್ಥಳೀಯ ಕಲಾವಿದರಿಗೆ ಅವಕಾಶ ನೀಡುವ ಉದ್ದೇಶವನ್ನು ಪರಿಷತ್ತು ಹೊಂದಿದ್ದು, ಸಂಗೀತ ಜ್ಞಾನವುಳ್ಳ, ನೃತ್ಯದಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡ ಚಲನಚಿತ್ರಗಳಿಗೆ ನೃತ್ಯ ಸಂಯೋಜನೆ ಮಾಡಬಲ್ಲ ಅಭ್ಯರ್ಥಿಗಳು ಅಥವಾ ತಂಡಗಳಿಗೆ ಅವಕಾಶ ಇರುತ್ತದೆ.

ಅಂಥವರು ತಮ್ಮ ಸ್ವವಿವರದೊಂದಿಗೆ 30 ಜೂನ್ 2022 ರೊಳಗೆ ಅಧ್ಯಕ್ಷರು, ಕನ್ನಡ ಸಾಹಿತ್ಯ ಪರಿಷತ್ತು, ಪಂಪಮಹಾಕವಿ ರಸ್ತೆ, ಚಾಮರಾಜಪೇಟೆ, ಬೆಂಗಳೂರು-560 018 ಇಲ್ಲಿಗೆ ಕಳುಹಿಸಲು ತಿಳಿಸಿದೆ.

# 480 ಸಮುದಾಯ ಶೌಚಾಲಯಗಳ ನಿರ್ಮಾಣ: ಖರ್ಗೆ

**ಬೆಂಗಳೂರು, ನ. 14 :** ಕಲ್ಯಾಣ ಕರ್ನಾಟಕದ ಏಳು ಜಿಲ್ಲೆಗಳಲ್ಲಿ 480 ಸಮುದಾಯ ಶೌಚಾಲಯಗಳನ್ನು ನಿರ್ಮಿಸಲಾಗುತ್ತಿದ್ದು 2025ರ ಜನವರಿ ಅಂತ್ಯದೊಳಗೆ ಶೌಚಾಲಯಗಳ ನಿರ್ಮಾಣವನ್ನು ಪೂರ್ಣಗೊಳಿಸಿ ಸಾರ್ವಜನಿಕರ ಬಳಕೆಗೆ ಸಜ್ಜುಗೊಳಿಸಬೇಕೆಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ವಿಕಾಸಸೌಧದಲ್ಲಿ ಇಂದು ಅಧಿಕಾರಿಗಳ ಜೊತೆ ಸಭೆ ನಡೆಸಿದ ಸಚಿವರು, ನಿರ್ಮಾಣದ



ನಂತರ ನಿರ್ವಹಣೆಯ ಜವಾಬ್ದಾರಿಯನ್ನು ನಿರ್ಮಾಣ ಸಂಸ್ಥೆಗೆ ಒಪ್ಪಿಸಲಾಗುತ್ತಿದ್ದು, ಇದು ವಿನೂತನ ಪ್ರಯೋಗವಾಗಿದೆ, ನಿರ್ಮಾಣದ ನಂತರ ನಿರ್ವಹಣೆಯಿಲ್ಲದೆ ಸೊರಗಬಾರದು ಎಂಬ ಉದ್ದೇಶದಿಂದ ಈ ಹೊಸ ಪದ್ಧತಿಯಲ್ಲಿ ಶೌಚಾಲಯಗಳನ್ನು ನಿರ್ಮಿಸಲಾಗುತ್ತಿದೆ, ಅಧಿಕಾರಿಗಳು ಬದ್ಧತೆಯಿಂದ ಕಾರ್ಯನಿರ್ವಹಿಸಿ ಶೌಚಾಲಯಗಳ ನಿರ್ಮಾಣವನ್ನು ಗುಣಮಟ್ಟದೊಂದಿಗೆ ಪೂರ್ಣಗೊಳಿಸಬೇಕೆಂದು ಸಚಿವರು ಸೂಚನೆ ನೀಡಿದರು.

ವಿಶೇಷವಾಗಿ ಕಲ್ಯಾಣ ಕರ್ನಾಟಕ ಭಾಗದಲ್ಲಿ ನೀರು ಮತ್ತು ನೈರ್ಮಲ್ಯದ ಬಗ್ಗೆ ಹೆಚ್ಚಿನ ಒತ್ತು ನೀಡುವ ಅಗತ್ಯವಿರುವುದರಿಂದ ಆದ್ಯತೆಯ ಮೇಲೆ ಪೂರ್ಣಗೊಳಿಸುವಂತೆ ಸಚಿವರು ಅಧಿಕಾರಿಗಳಿಗೆ ನಿರ್ದೇಶಿಸಿದರು.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಅಂಜುಂ ಪರವೇಜ್, ಗ್ರಾಮೀಣ ನೀರು ಸರಬರಾಜು ಇಲಾಖೆಯ ನಿರ್ದೇಶಕ ಕೆ.ನಾಗೇಂದ್ರಪ್ರಸಾದ್ ಹಾಗೂ ಇನ್ನಿತರ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

### ದೆಹಲಿ ವಕ್ಫ್ ಬೋರ್ಡ್‌ನಲ್ಲಿ ಅಕ್ರಮ ಹಣ ವರ್ಗಾವಣೆ ಆರೋಪ

# ಎಎಪಿ ಶಾಸಕ ಅಮಾನತ್‌ಉಲ್ಲಾ ಖಾನ್‌ಗೆ ಜಾಮೀನು



**ನವದೆಹಲಿ, ನ. 14 :** ದೆಹಲಿ ವಕ್ಫ್ ಬೋರ್ಡ್ ಅಕ್ರಮಗಳಿಗೆ ಸಂಬಂಧಿಸಿದ ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ಎಎಪಿ ಶಾಸಕ ಅಮಾನತ್ ಉಲ್ಲಾ ಖಾನ್ ಅವರನ್ನು ಬಿಡುಗಡೆ ಮಾಡುವಂತೆ ರೋಸ್ ಅವೆನ್ಯೂ ನ್ಯಾಯಾಲಯವು ಆದೇಶಿಸಿದೆ.

ಅವರ ವಿರುದ್ಧ ಸಲ್ಲಿಸಲಾದ ಆರೋಪಪಟ್ಟಿಯನ್ನು ಸ್ವೀಕರಿಸಲು ನಿರಾಕರಿಸಿದೆ.

ವಿಶೇಷ ನ್ಯಾಯಾಧೀಶ ಜಿತೇಂದ್ರ ಸಿಂಗ್ ಅವರು ಖಾನ್ ವಿರುದ್ಧ ಮುಂದುವರೆಯಲು ಸಾಕಷ್ಟು ಸಾಕ್ಷ್ಯಾಧಾರಗಳಿದ್ದರೂ, ಅವರ ವಿರುದ್ಧ ಕಾನೂನು ಕ್ರಮ ಜರುಗಿಸಲು ಯಾವುದೇ ಅನುಮತಿ ಇಲ್ಲ. ಆದ್ದರಿಂದ, ಚಾರ್ಜ್‌ಶೀಟ್ ನಿರಾಕರಿಸಲಾಗಿದೆ ಎಂದು ನ್ಯಾಯಾಧೀಶರು ಹೇಳಿದರು.

ಒಂದು ಲಕ್ಷ ರೂಪಾಯಿಯ ಜಾಮೀನು ಬಾಂಡ್ ಮತ್ತು ಅಂತಹ ಮೊತ್ತದ ಒಂದು ಶ್ಯೂರಿಟಿಯ ಮೇಲೆ ಖಾನ್ ಅವರನ್ನು ತಕ್ಷಣವೇ ನ್ಯಾಯಾಂಗ ಬಂಧನದಿಂದ ಬಿಡುಗಡೆ ಮಾಡುವಂತೆ ನ್ಯಾಯಾಲಯ ಸೂಚಿಸಿದೆ. ಇಡಿ ಅಕ್ಟೋಬರ್ 29 ರಂದು 110 ಪುಟಗಳ ಮೊದಲ ಪೂರಕ ಪ್ರಾಸಿಕ್ಯೂಷನ್ ದೂರನ್ನು ಖಾನ್ ಅವರು ದೆಹಲಿ ವಕ್ಫ್ ಬೋರ್ಡ್‌ನಲ್ಲಿನ ಭ್ರಷ್ಟಾಚಾರದ ಮೂಲಕ ಗಳಿಸಿದ ಹಣವನ್ನು ಲಾಂಡರಿಂಗ್ ಮಾಡಿದ್ದಾರೆ ಎಂದು ಆರೋಪಿಸಿದರು.

ಚಾರ್ಜ್‌ಶೀಟ್‌ನಲ್ಲಿ ಮರಿಯಮ್ ಸಿದ್ದಿಕಿ ಎಂಬುವರನ್ನು ಹೆಸರಿಸಲಾಗಿದ್ದು, ಅವರನ್ನು ಪ್ರಕರಣದಲ್ಲಿ ಇಡಿ ಆರೋಪಿ ಎಂದು ಬಂಧಿಸಿಲ್ಲ. ಸಿದ್ದಿಕಿ ವಿರುದ್ಧ ಮುಂದುವರಿಯಲು ಯಾವುದೇ ಪುರಾವೆಗಳಿಲ್ಲ ಎಂದು ನ್ಯಾಯಾಲಯ ಹೇಳಿದ್ದು, ಆಕೆಯನ್ನು ಬಿಡುಗಡೆ ಮಾಡಲು ಆದೇಶಿಸಿದೆ.



ವಿಜ್ಞಾನ ಮತ್ತು ತಂತ್ರಜ್ಞಾನ, ಭೂ ವಿಜ್ಞಾನ, ಪ್ರಧಾನ ಮಂತ್ರಿ ಕಚೇರಿ, ಸಿಬ್ಬಂದಿ, ಸಾರ್ವಜನಿಕ ಕುಂದುಕೊರತೆಗಳು ಮತ್ತು ಪಿಂಚಣಿಗಳು, ಪರಮಾಣು ಶಕ್ತಿ ಮತ್ತು ಬಾಹ್ಯಾಕಾಶ ಖಾತೆಯ ರಾಜ್ಯ ಸಚಿವ ಡಾ. ಜಿತೇಂದ್ರ ಸಿಂಗ್ ಅವರು ನವದೆಹಲಿಯಲ್ಲಿ ಕರ್ಮಯೋಗಿ ಸಪ್ತಾಹ ವೈಭವದ ಸಮಾರಂಭದಲ್ಲಿ ಪಾಲ್ಗೊಂಡರು.

### ಇಂಡಿಗೋ ವಿಮಾನಕ್ಕೆ ಬಾಂಬ್ ಬೆದರಿಕೆ ಕರೆ

# ರಾಯ್ಪುರ ವಿಮಾನ ನಿಲ್ದಾಣದಲ್ಲಿ ತುರ್ತು ಭೂಸ್ಪರ್ಶ



**ನವದೆಹಲಿ, ನ. 14 :** ಬಾಂಬ್ ಬೆದರಿಕೆಯ ಹಿನ್ನೆಲೆಯಲ್ಲಿ ನಾಗ್ಪುರದಿಂದ ಕೋಲ್ಕತ್ತಾಗೆ ಹೊರಟಿದ್ದ ವಿಮಾನವನ್ನು ರಾಯ್ಪುರ ವಿಮಾನ ನಿಲ್ದಾಣದಲ್ಲಿ ತುರ್ತು ಭೂಸ್ಪರ್ಶ ಮಾಡಿತು. ಎಲ್ಲಾ ಪ್ರಯಾಣಿಕರು ಮತ್ತು ಸಿಬ್ಬಂದಿಯನ್ನು ಸುರಕ್ಷಿತವಾಗಿ ಸ್ಥಳಾಂತರಿಸಿದ ಸಿಐಎಸ್‌ಎಫ್ ಮತ್ತು ಪೊಲೀಸರು ವಿಮಾನವನ್ನು ತಪಾಸಣೆ ಮಾಡಿದರು, ತಪಾಸಣೆಯಲ್ಲಿ ಯಾವುದೇ ಸ್ಫೋಟಕ ಪತ್ತೆಯಾಗದ ಕಾರಣ ಹುಸಿ ಬಾಂಬ್ ಬೆದರಿಕೆ ಎಂದು ನಿರ್ಧರಿಸಲಾಗಿದೆ.

ಈ ಬಗ್ಗೆ ಮಾತನಾಡಿದ ರಾಯ್ಪುರದ ಹಿರಿಯ ಪೊಲೀಸ್ ವರಿಷ್ಠಾಧಿಕಾರಿ ಸಂತೋಷ್ ಸಿಂಗ್, ವಿಮಾನಯಾನ ಸಂಸ್ಥೆಗಳಿಗೆ ಬೆದರಿಕೆ ಬಂದ ಹಿನ್ನಲೆ ನಾಗ್ಪುರದಿಂದ ಕೋಲ್ಕತ್ತಾಗೆ ವಿಮಾನವನ್ನು ತಿರುಗಿಸಲಾಯಿತು. ಇಂಡಿಗೋ ವಿಮಾನದಲ್ಲಿದ್ದ ಎಲ್ಲಾ 187 ಪ್ರಯಾಣಿಕರು ಮತ್ತು ಆರು ಸಿಬ್ಬಂದಿಯನ್ನು ಸ್ಥಳಾಂತರಿಸಲಾಯಿತು ಎಂದು ಹೇಳಿದರು. ಬೆದರಿಕೆಗೆ ಸಂಬಂಧಿಸಿದಂತೆ ಒಬ್ಬ ಪ್ರಯಾಣಿಕನನ್ನು ಬಂಧಿಸಲಾಗಿದೆ, ಬಂಧಿತನನ್ನು ನಿಮೇಶ್ ಮಂಡಲ್ ಎಂದು ಗುರುತಿಸಿದೆ.

ಆತನನ್ನು ಮನ ಪೊಲೀಸ್ ಠಾಣೆಯಲ್ಲಿ ಅಧಿಕಾರಿಗಳು ವಿಚಾರಣೆ ನಡೆಸುತ್ತಿದ್ದಾರೆ. ವಿಮಾನಯಾನ ಸಂಸ್ಥೆಗಳಿಂದ ದೂರು ಸ್ವೀಕರಿಸಿದ್ದರಿಂದ ಸಂಬಂಧಿತ ಸೆಕ್ಷನ್ಗಳ ಅಡಿಯಲ್ಲಿ ಅವರ ವಿರುದ್ಧ ಪ್ರಕರಣ ದಾಖಲಿಸಲಾಗಿದೆ.

# ಚುನಾವಣಾಧಿಕಾರಿಯ ಮೇಲೆ ಹಲ್ಲೆ ಪ್ರಕರಣ: ಆರೋಪಿ ಬಂಧನದ ವೇಳೆ ಹಿಂಸಾಚಾರ; 60 ಮಂದಿಯ ಬಂಧನ



**ಜೈಪುರ್, ನ. 14 :** ಉಪವಿಭಾಗೀಯ ಮ್ಯಾಜಿಸ್ಟ್ರೇಟ್ ಅಮಿತ್ ಚೌಧರಿ ಅವರ ಮೇಲೆ ಹಲ್ಲೆ ನಡೆಸಿದ ಆರೋಪದಲ್ಲಿ ಡಿಯೋಲಿ ಉನಿಯಾರಾ ಉಪಚುನಾವಣೆಯಲ್ಲಿ ಸ್ಪರ್ಧಿಸಿದ್ದ ಪಕ್ಷೇತರ ಅಭ್ಯರ್ಥಿ ನರೇಶ್ ಮೀನಾ ಅವರನ್ನು ಬಂಧಿಸಲು ಪೊಲೀಸರು ಯತ್ನಿಸಿದ ನಂತರ ಬುಧವಾರ ತಡರಾತ್ರಿ ರಾಜಸ್ಥಾನದ ಟೋಂಕ್ನ ಸಮ್ರಾವತ ಗ್ರಾಮದಲ್ಲಿ ಉದ್ವಿಗ್ನತೆ ಉಂಟಾಗಿದೆ. ಚುನಾವಣಾ ಪ್ರಕ್ರಿಯೆಗಳನ್ನು ನೋಡಿಕೊಳ್ಳುತ್ತಿದ್ದ ಅಮಿತ್ ಚೌಧರಿ ಅವರಿಗೆ ಮತಗಟ್ಟೆಯ ಹೊರಗೆ ಮೀನಾ ಅವರು ಹಲ್ಲೆ ನಡೆಸಿದ್ದರು.

ಈ ವಿಡಿಯೊ ವೈರಲ್ ಆಗಿದೆ. ಚುನಾವಣಾಧಿಕಾರಿಯ ಮೇಲೆ ಹಲ್ಲೆ ಪೊಲೀಸರು ಮೀನಾ ಅವರನ್ನು ಬಂಧಿಸಲು ಪ್ರಯತ್ನಿಸುತ್ತಿದ್ದಂತೆ, ಹಿಂಸಾಚಾರ ಭುಗಿಲೆದ್ದಿದ್ದು, ಗಲಭೆಕೋರರು ಅಧಿಕಾರಿಗಳ ಮೇಲೆ ಕಲ್ಲು ತೂರಾಟ ನಡೆಸಿ ವಾಹನಗಳಿಗೆ ಬೆಂಕಿ ಹಚ್ಚಿದ್ದಾರೆ. ಹಿಂಸಾಚಾರಕ್ಕೆ ಸಂಬಂಧಿಸಿದಂತೆ ಕನಿಷ್ಠ 60 ಜನರನ್ನು ಬಂಧಿಸಲಾಗಿದೆ ಎಂದು ಅಜ್ಮೀರ್ ರೇಂಜ್ ಐಜಿ ಓಂ ಪ್ರಕಾಶ್ ಖಚಿತಪಡಿಸಿದ್ದಾರೆ. ಹಿಂಸಾಚಾರದ ವೇಳೆ ಉದ್ರಿಕ್ತ ಜನರು ಸುಮಾರು 24 ದೊಡ್ಡ ವಾಹನಗಳು ಮತ್ತು 48 ದ್ವಿಚಕ್ರ ವಾಹನಗಳಿಗೆ ಬೆಂಕಿ ಹಚ್ಚಿದ್ದು, ಹಲವಾರು ಮನೆಗಳಿಗೆ ಹಾನಿಯಾಗಿದೆ. ಹಿಂಸಾಚಾರಕ್ಕೆ ಪ್ರತಿಕ್ರಿಯೆಯಾಗಿ ಶೋಧ ಕಾರ್ಯಾಚರಣೆಗಳನ್ನು ನಡೆಸಲು ಮತ್ತು ಕಾನೂನು ಸುವ್ಯವಸ್ಥೆಯನ್ನು ಪುನಃಸ್ಥಾಪಿಸಲು ವಿಶೇಷ ಕಾರ್ಯಪಡೆ ತುಕಡಿಗಳನ್ನು ಗುರುವಾರ ಮುಂಜಾನೆ ನಿಯೋಜಿಸಲಾಗಿದೆ.

ಘಟನೆಗಳ ಬಗ್ಗೆ ವಿವರಿಸಿದ ಟೋಂಕ್ ಎಸ್ಪಿ ವಿಕಾಸ್ ಸಾಂಗ್ವಾನ್, ಸಮ್ರಾವತ ಗ್ರಾಮದಲ್ಲಿ ಕೆಲವರು ಮತದಾನವನ್ನು ಬಹಿಷ್ಕರಿಸಿದ್ದಾರೆ. ಸಮಸ್ಯೆ ಬಗೆಹರಿಸಲು ಎಸ್ಡಿಎಂ, ತಹಸೀಲ್ದಾರ್, ಹೆಚ್ಚುವರಿ ಎಸ್ಪಿ ಹಾಗೂ ಇತರೆ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿದ್ದರು.

ಈ ವೇಳೆ ಪಕ್ಷೇತರ ಅಭ್ಯರ್ಥಿ ನರೇಶ್ ಮೀನಾ ಮತಗಟ್ಟೆಗೆ ನುಗ್ಗಿ ಎಸ್ಡಿಎಂ ಮೇಲೆ ದೈಹಿಕ ಹಲ್ಲೆ ನಡೆಸಿದ್ದಾರೆ. ತಕ್ಷಣ ಹೆಚ್ಚುವರಿ ಎಸ್ಪಿ ಅವರನ್ನು ತಡೆದಿದ್ದಾರೆ. ಈ ಬಗ್ಗೆ ಕಾನೂನು ಪ್ರಕಾರ ಕ್ರಮ ಕೈಗೊಳ್ಳಲಾಗುವುದು, ನಮ್ಮ ಮಧ್ಯಸ್ಥಿಕೆಯ ನಂತರ ಮತದಾನ ಶಾಂತಿಯುತವಾಗಿ ಪುನರಾರಂಭವಾಯಿತು ಎಂದು ಹೇಳಿದ್ದಾರೆ. ಘಟನೆ ಬಗ್ಗೆ ಮಾತನಾಡಿರುವ ಪಕ್ಷೇತರ ಅಭ್ಯರ್ಥಿ ನರೇಶ್ ಮೀನಾ, ಈ ಹಿಂದೆ ಎಸ್ಡಿಎಂ ಅಮಿತ್ ಚೌಧರಿ ಸ್ಥಳೀಯರ ಮೇಲೆ ಹಲ್ಲೆ ನಡೆಸಿದ್ದರು ಎಂದು ಆರೋಪಿಸಿದ್ದಾರೆ. ಈ ಹಿಂದೆ ಹಿಂದೋಳಿಯಲ್ಲಿ ಎಸ್ಡಿಎಂ ಅಮಿತ್ ಅವರು ಮಹಿಳೆಯೊಬ್ಬರ ಮೇಲೆ ಹಲ್ಲೆ ನಡೆಸಿದ್ದರು. ಈ ವೇಳೆ ಮಹಿಳೆಯ ಪತಿ ಮತ್ತು ಶಿಕ್ಷಕರನ್ನೂ ಥಳಿಸಿದ್ದರು.

ಈ ವೇಳೆ ಮತ ಹಾಕುವಂತೆ ಒತ್ತಾಯಿಸಿದ್ದ ಅವರು, ಇಲ್ಲವೆಂದರೆ ಕೆಲಸ ಕಳೆದುಕೊಳ್ಳುತ್ತೀರಿ ಎಂದು ಬೆದರಿಸಿದ್ದರು ಎಂದು ಹೇಳಿದ್ದಾರೆ. ಅಷ್ಟೇ ಅಲ್ಲದೆ, ಅಕ್ಟೋಬರ್ 25 ರಿಂದ ನನ್ನ ಬೆಂಬಲಿಗರಿಗೆ ಕಿರುಕುಳ ನೀಡಲಾಗುತ್ತಿದೆ. ನನ್ನ ಪ್ರಚಾರ ಪೋಸ್ಟರ್ಗಳನ್ನು ಹರಿದು ಹಾಕಲಾಗಿದ್ದು, ಜನರು ನನಗೆ ಮತ ಹಾಕುವುದನ್ನು ತಡೆಯಲು ಈ ಪ್ರಯತ್ನಗಳನ್ನು ಮಾಡಲಾಗಿದೆ ಎಂದು ಮೀನಾ ಹೇಳಿದ್ದಾರೆ.

# ವೈದ್ಯನಿಗೆ ಚಾಕುವಿನಿಂದ ಇರಿದ ರೋಗಿಯ ಮಗ



**ಚೆನ್ನೈ, ನ. 14:** ಕ್ಯಾನ್ಸರ್ ರೋಗಿಯೊಬ್ಬರ ಪುತ್ರ ತನ್ನ ತಾಯಿಗೆ ಚಿಕಿತ್ಸೆ ನೀಡುತ್ತಿದ್ದ ವೈದ್ಯರಿಗೆ ಚಾಕುವಿನಿಂದ ಏಳು ಬಾರಿ ಇರಿದಿರುವ ಘಟನೆ ಚೆನ್ನೈನಲ್ಲಿ ನಡೆದಿದೆ. ಈ ಕುರಿತು ತನಿಖೆಗೆ ಮುಖ್ಯಮಂತ್ರಿ ಎಂ.ಕೆ ಸ್ಟಾಲಿನ್ ಆದೇಶಿಸಿದ್ದಾರೆ. ನಗರದ ಕಲೈಂಜರ್ ಶತಮಾನೋತ್ಸವ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಯಲ್ಲಿ ಘಟನೆ ನಡೆದಿದೆ. ಗಂಭೀರವಾಗಿ ಗಾಯಗೊಂಡಿರುವ ವೈದ್ಯ ಬಾಲಾಜಿ ಜಗನ್ನಾಥ್ ಅವರನ್ನು ತೀವ್ರ ನಿಗಾ ಘಟಕ (ಐಸಿಯು) ದಲ್ಲಿ ಇರಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಅವರ ಸ್ಥಿತಿ ಸ್ಥಿರವಾಗಿದೆ ಎಂದು ವೈದ್ಯರು ತಿಳಿಸಿದ್ದಾರೆ.

ತನ್ನ ತಾಯಿಗೆ ಚಿಕಿತ್ಸೆ ನೀಡುವಲ್ಲಿ ನಿರ್ಲಕ್ಷ್ಯ ತೋರಿದ್ದಾರೆ ಎಂದು 26 ವರ್ಷದ ವಿಘ್ನೇಶ್ವರನ್ ಎಂಬಾತ ಚಾಕುವಿನಿಂದ ದಾಳಿ ನಡೆಸಿರುವುದಾಗಿ ತಿಳಿದು ಬಂದಿದೆ. ಈತನ ಜೊತೆ ಇತರ ಮೂವರನ್ನೂ ಪೊಲೀಸರು ಬಂಧಿಸಿದ್ದಾರೆ ಎಂದು ವರದಿಯಾಗಿದೆ. ಬುಧವಾರ ಬೆಳಿಗ್ಗೆ 10.30ರ ಸುಮಾರಿಗೆ ವೈದ್ಯ ಜಗನ್ನಾಥ್ ಅವರು ಆಸ್ಪತ್ರೆಯ ಕ್ಯಾನ್ಸರ್ ವಿಭಾಗದಲ್ಲಿ ಕರ್ತವ್ಯದಲ್ಲಿದ್ದ ವೇಳೆ, ಅಲ್ಲಿಗೆ ಬಂದ ವಿಘ್ನೇಶ್ ಮತ್ತು ಆತನ ಮೂವರು ಗೆಳೆಯರು ಕ್ಯಾನ್ಸರ್ ರೋಗಿಯಾಗಿರುವ ವಿಘ್ನೇಶ್ ತಾಯಿಯ ಸ್ಥಿತಿ ಹದಗೆಟ್ಟಿರುವ ಕುರಿತು ವೈದ್ಯನೊಂದಿಗೆ ವಾಗ್ವಾದ ನಡೆಸಿದ್ದಾರೆ. ವೈದ್ಯ ನಿರ್ಲಕ್ಷ್ಯದ ಆರೋಪ ಮಾಡಿದ್ದಾರೆ.

ಈ ವೇಳೆ ವಿಘ್ನೇಶ್ ಏಕಾಏಕಿ ಚಾಕು ತೆಗೆದು ವೈದ್ಯ ಜಗನ್ನಾಥ್ ಅವರ ಕುತ್ತಿಗೆ, ತಲೆ ಸೇರಿದಂತೆ ದೇಹದ ವಿವಿಧ ಭಾಗಗಳಿಗೆ ಇರಿದಿದ್ದಾನೆ. ಇದನ್ನು ಗಮನಿಸಿ ಧಾವಿಸಿ ಬಂದ ಆಸ್ಪತ್ರೆ ಸಿಬ್ಬಂದಿ ಮತ್ತು ಇತರರು, ಜಗನ್ನಾಥ್ ಅವರನ್ನು ತಕ್ಷಣ ಚಿಕಿತ್ಸೆ ದಾಖಲಿಸಿದ್ದಾರೆ. ನಾವು ತಕ್ಷಣ ಜಗನ್ನಾಥ್ ಅವರನ್ನು ಆಪರೇಷನ್ ಥಿಯೇಟರ್‌ಗೆ ಕರೆದೊಯ್ದಿದೆವು. ಅಲ್ಲಿ ಹೃದಯ ಮತ್ತು ನರ–ಶಸ್ತ್ರಚಿಕಿತ್ಸಾ ವಿಭಾಗಗಳ ತಜ್ಞರ ತಂಡವು ಅವರಿಗೆ ಶಸ್ತ್ರಚಿಕಿತ್ಸೆ ಮಾಡಿತು. ಇದರಿಂದ ಜಗನ್ನಾಥ್ ಅವರು ಅಪಾಯದಿಂದ ಪಾರಾಗಿದ್ದಾರೆ. ಅವರ ಸ್ಥಿತಿ ಈಗ ಸ್ಥಿರವಾಗಿದೆ ಎಂದು ಆಸ್ಪತ್ರೆಯ ನಿರ್ದೇಶಕ ಎಲ್ ಪಾರ್ಥಸಾರಥಿ ತಿಳಿಸಿದ್ದಾರೆ.

ವೈದ್ಯನ ಮೇಲಿನ ದಾಳಿಯು ತಮಿಳುನಾಡು ರಾಜ್ಯದಲ್ಲಿ ದೊಡ್ಡ ಮಟ್ಟದಲ್ಲಿ ಸುದ್ದಿಯಾಗಿದ್ದು, ಮುಖ್ಯಮಂತ್ರಿ ಎಂ.ಕೆ.ಸ್ಟಾಲಿನ್ ಘಟನೆಯ ಕುರಿತು ತನಿಖೆಗೆ ಆದೇಶಿಸಿದ್ದಾರೆ. ಉಪಮುಖ್ಯಮಂತ್ರಿ ಉದಯನಿಧಿ ಸ್ಟಾಲಿನ್ ಮತ್ತು ಆರೋಗ್ಯ ಸಚಿವ ಸುಬ್ರಮಣಿಯನ್ ಆಸ್ಪತ್ರೆಗೆ ಭೇಟಿ ನೀಡಿ ವೈದ್ಯನ ಆರೋಗ್ಯ ವಿಚಾರಿಸಿದ್ದಾರೆ.

ಸಮಯವನ್ನು ಲೆಕ್ಕಿಸದೆ ಸರ್ಕಾರಿ ಆಸ್ಪತ್ರೆಗಳಲ್ಲಿ ರೋಗಿಗಳಿಗೆ ಚಿಕಿತ್ಸೆ ನೀಡುವ ನಮ್ಮ ಸರ್ಕಾರಿ ವೈದ್ಯರ ನಿಸ್ವಾರ್ಥ ಸೇವೆ ಅಪಾರವಾದದ್ದು. ಕೆಲಸದ ಸಮಯದಲ್ಲಿ ಅವರ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳುವುದು ನಮ್ಮ ಕರ್ತವ್ಯ. ಭವಿಷ್ಯದಲ್ಲಿ ಇಂತಹ ಘಟನೆಗಳು ಮರುಕಳಿಸದಂತೆ ಸರ್ಕಾರ ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳಲಿದೆ ಎಂದು ಸಿಎಂ ಎಂ.ಕೆ ಸ್ಟಾಲಿನ್ ತಿಳಿಸಿದ್ದಾರೆ.

# ಯುಪಿಎಸ್ಸಿ ಪರೀಕ್ಷಾ ವೇಳಾಪಟ್ಟಿಗೆ ವಿರೋಧ: ಪ್ರತಿಭಟನೆ



**ಚೆನ್ನೈ, ನ. 14:** ಪರೀಕ್ಷಾ ವೇಳಾಪಟ್ಟಿಯನ್ನು ವಿರೋಧಿಸಿ ಯುಪಿಎಸ್ಸಿ ಆಕಾಂಕ್ಷಿಗಳು ಗುರುವಾರ ಬ್ಯಾರಿಕೇಡ್ಗಳನ್ನು ಮುರಿದು ಆಯೋಗದ ಗೇಟ್ ತಲುಪಿದರು. ಒಂದು ದಿನ ಒಂದೇ ಪಾಳಿ? ಎಂಬ ಬೇಡಿಕೆ ತೀವ್ರವಾಗುತ್ತಿದ್ದಂತೆ, ಕೆಲವು ಕ್ರಿಮಿನಲ್ ದುಷ್ಕರ್ಮಿಗಳು ವಿದ್ಯಾರ್ಥಿಗಳ ಪ್ರತಿಭಟನೆಗೆ ನುಸುಳಿದ್ದಾರೆ, ಅವರನ್ನು ದಾರಿತಪ್ಪಿಸಲು ಪ್ರಯತ್ನಿಸುತ್ತಿದ್ದಾರೆ ಎಂದು ಪ್ರಯಾಗರಾಜ್ ಪೊಲೀಸರು ಹೇಳಿದ್ದಾರೆ.

ಪ್ರಯಾಗರಾಜ್ ಡಿಸಿಪಿ ಅಭಿಷೇಕ್ ಭಾರತಿ ಮಾತನಾಡಿ, ರಾಜ್ಯ ಪಿಎಸ್ಸಿ ವಿರುದ್ಧ ವಿದ್ಯಾರ್ಥಿಗಳು ಪ್ರತಿಭಟನೆ ನಡೆಸುತ್ತಿದ್ದಾರೆ, ವಿದ್ಯಾರ್ಥಿಗಳು ತಮ್ಮ ಪ್ರತಿಭಟನೆಯನ್ನು ಸಾಂವಿಧಾನಿಕವಾಗಿ ಮುಂದುವರಿಸಲು ಮನವಿ ಮಾಡಲಾಗುತ್ತಿದೆ. ಅವರ ಬೇಡಿಕೆಗಳನ್ನು ಅಧಿಕಾರಿಗಳ ಗಮನಕ್ಕೆ ತರಲಾಗುವುದು. ನಿನ್ನೆ ಸಮಾಜ ವಿರೋಧಿಗಳು ಮತ್ತು ಪ್ರಕರಣಗಳಿಂದ ಸಾರ್ವಜನಿಕ ಆಸ್ತಿಯನ್ನು ಧ್ವಂಸಗೊಳಿಸಲಾಗಿದೆ. ಅವರು ವಿದ್ಯಾರ್ಥಿಗಳಲ್ಲ, ಸಮಾಜವಿರೋಧಿಗಳಾಗಿದ್ದು, ಕ್ರಿಮಿನಲ್ ಕೇಸ್ಗಳ ಇತಿಹಾಸವಿದೆ ವಿದ್ಯಾರ್ಥಿಗಳನ್ನು ಗುರುತಿಸಿ ವಿಚಾರಣೆ ನಡೆಸಲಾಗುತ್ತಿದೆ ಎಂದರು.

ಮಹಿಳಾ ಪ್ರತಿಭಟನಾಕಾರರನ್ನು ಬಂಧಿಸಲಾಗಿದೆ ಎಂಬ ಸುದ್ದಿ ನಕಲಿ ಮತ್ತು ದುರುದ್ದೇಶಪೂರಿತ ಉದ್ದೇಶದಿಂದ ಪ್ರಸಾರವಾಗಿದೆ ಎಂದು ಪ್ರಯಾಗ್ರಾಜ್ ಸಿಪಿ ಹೇಳಿದರು. ನವೆಂಬರ್ 11 ರಂದು ಆರಂಭವಾದ ಪ್ರತಿಭಟನೆಯ ಇಂದು ನಾಲ್ಕನೇ ದಿನಕ್ಕೆ ಕಾಲಿಟ್ಟಿದೆ. ಯುಪಿಪಿಎಸ್ಸಿ ನವೆಂಬರ್ 5 ರಂದು ಪರಿಶೀಲನಾ ಅಧಿಕಾರಿ ಮತ್ತು ಸಹಾಯಕ ಪರಿಶೀಲನಾ ಅಧಿಕಾರಿ ಪೂರ್ವಭಾವಿ ಪರೀಕ್ಷೆಯನ್ನು ಡಿಸೆಂಬರ್ 22 ಮತ್ತು 23 ರಂದು ಮೂರು ಪಾಳಿಗಳಲ್ಲಿ ನಡೆಸಲಾಗುವುದು ಎಂದು ಘೋಷಿಸಿತು. ಪ್ರಾಂತೀಯ ನಾಗರಿಕ ಸೇವೆ (ಪಿಸಿಎಸ್) ಪೂರ್ವಭಾವಿ ಪರೀಕ್ಷೆಯು ಡಿಸೆಂಬರ್ 7 ಮತ್ತು 8 ರಂದು ಎರಡು ಪಾಳಿಗಳಲ್ಲಿ ನಡೆಯಲಿದೆ.

ವೇಳಾಪಟ್ಟಿಯ ಪ್ರಕಾರ, ಪಿಸಿಎಸ್ ಪ್ರಿಲಿಮ್ಸ್ ಪರೀಕ್ಷೆಯನ್ನು ಎರಡು ದಿನಗಳಲ್ಲಿ ನಡೆಸಲಾಗುತ್ತದೆ. ಡಿಸೆಂಬರ್ 7 ಮತ್ತು 8, 2024–ಮತ್ತು ಎರಡು ಪಾಳಿಗಳಲ್ಲಿ: 9:30 ರಿಂದ 11:30 ರವರೆಗೆ ಮತ್ತು 2:30 ರಿಂದ 4:30 ರವರೆಗೆ ರಾಜ್ಯದ 41 ಜಿಲ್ಲೆಗಳಲ್ಲಿ ಪರೀಕ್ಷೆ ನಡೆಯಲಿದೆ.

ಬಹುಪಾಲು ವೇಳಾಪಟ್ಟಿಯ ವಿರುದ್ಧ ಆಕಾಂಕ್ಷಿಗಳು ಪ್ರತಿಭಟನೆ ನಡೆಸುತ್ತಿದ್ದಾರೆ. ಪರೀಕ್ಷೆಯಲ್ಲಿ ನ್ಯಾಯಸಮ್ಮತತೆಯನ್ನು ಖಚಿತಪಡಿಸಿಕೊಳ್ಳಲು ಮತ್ತು ಗೊಂದಲವನ್ನು ತಪ್ಪಿಸಲು ಆರ್‌ಒ–ಎಆರ್‌ಒ ಪರೀಕ್ಷೆಯನ್ನು ಒಂದೇ ದಿನದಲ್ಲಿ ಒಂದೇ ಪಾಳಿಯಲ್ಲಿ ನಡೆಸುವಂತೆ ಒತ್ತಾಯಿಸುತ್ತಿದ್ದಾರೆ.

ಯುಪಿಪಿಎಸ್ಸಿ ಕಾರ್ಯದರ್ಶಿ ಅಶೋಕ್ ಕುಮಾರ್ ಅವರು, ಒಂದೇ ದಿನದಲ್ಲಿ ಒಂದೇ ಶಿಫ್ಟ್‌ನಲ್ಲಿ ಪರೀಕ್ಷೆಯನ್ನು ನಡೆಸುವ ನಿಯಂತ್ರಣ ಮತ್ತು ವ್ಯವಸ್ಥಾಪನಾ ಸವಾಲುಗಳನ್ನು ಎತ್ತಿ ತೋರಿಸಿದರು. ಆಯೋಗದ ಮಾರ್ಗಸೂಚಿಯಂತೆ ಜಿಲ್ಲಾ ಕೇಂದ್ರದ 10 ಕಿ.ಮೀ ವ್ಯಾಪ್ತಿಯಲ್ಲಿರುವ ಸರ್ಕಾರಿ ಸಂಸ್ಥೆಗಳನ್ನೇ ಪರೀಕ್ಷಾ ಕೇಂದ್ರಗಳನ್ನಾಗಿ ಬಳಸಲಾಗುತ್ತಿದ್ದು, ಈ ಹಿಂದೆ ಇದೇ ವಿದ್ಯಾರ್ಥಿಗಳು ಭದ್ರತೆ ಹಾಗೂ ಪೇಪರ್ ಸೋರಿಕೆ ವಿಚಾರವಾಗಿ ಖಾಸಗಿ ಸಂಸ್ಥೆಗಳನ್ನು ಪರೀಕ್ಷಾ ಕೇಂದ್ರಗಳನ್ನಾಗಿ ಬಳಸುವುದನ್ನು ವಿರೋಧಿಸಿದ್ದರು ಎಂದು ಹೇಳಿದರು.

ಪಿಸಿಎಸ್ ಪರೀಕ್ಷೆಗೆ ಒಟ್ಟು 576,000 ಅಭ್ಯರ್ಥಿಗಳು ನೋಂದಾಯಿಸಿಕೊಂಡಿದ್ದಾರೆ. ಆದರೆ ಎಲ್ಲಾ 75 ಜಿಲ್ಲೆಗಳಲ್ಲಿ ಕೇವಲ 435,000 ವಿದ್ಯಾರ್ಥಿಗಳಿಗೆ ಮಾತ್ರ ಕೇಂದ್ರಗಳು ಲಭ್ಯವಿವೆ. ಈ ಪರಿಸ್ಥಿತಿಯಲ್ಲಿ, ಎರಡು ದಿನಗಳಲ್ಲಿ ಪರೀಕ್ಷೆಗಳನ್ನು ನಡೆಸುವುದು ಅನಿವಾರ್ಯವಾಗಿದೆ ಎಂದು ಕುಮಾರ್ ಹೇಳಿದರು.

# ಎಡಗಣ್ಣಿನ ಬದಲು ಬಲಗಣ್ಣಿನ ಶಸ್ತ್ರಚಿಕಿತ್ಸೆ ಮಾಡಿದ ವೈದ್ಯರು



**ಗ್ರೇಟರ್ ನೊಯ್ಡಾ, ನ. 14 :** ಎಡಗಣ್ಣಿನ ಶಸ್ತ್ರಚಿಕಿತ್ಸೆಗೆ ಹೋದ 7 ವರ್ಷದ ಬಾಲಕನಿಗೆ ವೈದ್ಯರು ಬಲಗಣ್ಣಿನ ಶಸ್ತ್ರಚಿಕಿತ್ಸೆ ಮಾಡಿದ ಘಟನೆ ಉತ್ತರ ಪ್ರದೇಶದ ಗ್ರೇಟರ್ ನೋಯ್ಡಾದ ಆಸ್ಪತ್ರೆಯೊಂದರಲ್ಲಿ ನಡೆದಿದೆ. ನ.12 ರಂದು ಸೆಕ್ಟರ್ ಗಾಮಾ 1 ರ ಆನಂದ್ ಸ್ಪೆಕ್ಟ್ರಮ್ ಆಸ್ಪತ್ರೆಯಲ್ಲಿ ಈ ಘಟನೆ ನಡೆದಿದೆ.

ಬಾಲಕನ ಎಡಗಣ್ಣಿನಿಂದ ಆಗಾಗ ನೀರು ಬರುತ್ತಿತ್ತು. ಇದಕ್ಕಾಗಿ ಬಾಲಕನ ತಂದೆ ನಿತಿನ್ ಭಾಟಿ ಆತನನ್ನು ಆಸ್ಪತ್ರೆಗೆ ತೋರಿಸಿದ್ದರು. ವೈದ್ಯರು ತಪಾಸಣೆ ನಡೆಸಿದ ನಂತರ, ಬಾಲಕನ ಕಣ್ಣಿನಲ್ಲಿ ಪ್ಲಾಸ್ಟಿಕ್ ತರಹದ ವಸ್ತುವಿದೆ. ಅದನ್ನು ಶಸ್ತ್ರಚಿಕಿತ್ಸೆ ಮೂಲಕ ಗುಣಪಡಿಸಬಹುದು ಎಂದು ತಿಳಿಸಿದ್ದರು.

ಆಸ್ಪತ್ರೆಗೆ 45,000 ರೂ. ಹಣ ಪಾವತಿಸಿ ಬಾಲಕನಿಗೆ ಶಸ್ತ್ರಚಿಕಿತ್ಸೆ ಮಾಡಿಸಲಾಗಿದೆ. ಬಳಿಕ ಬಾಲಕನನ್ನು ಮನೆಗೆ ಕರೆದುಕೊಂಡು ಬಂದ ಮೇಲೆ ಆತನ ತಾಯಿ ಬಲಗಣ್ಣಿನ ಶಸ್ತ್ರಚಿಕಿತ್ಸೆ ಮಾಡಿರುವುದನ್ನು ಗಮನಿಸಿದ್ದಾರೆ.ಮತ್ತೆ ವೈದ್ಯರನ್ನು ಸಂಪರ್ಕಿಸಿ ವಿಚಾರಿಸಿದಾಗ, ವೈದ್ಯರು ಮತ್ತು ಆಸ್ಪತ್ರೆ ಸಿಬ್ಬಂದಿ ಅನುಚಿತವಾಗಿ ವರ್ತಿಸಿದ್ದಾರೆ ಎಂದು ಬಾಲಕನ ಕುಟುಂಬಸ್ಥರು ಆರೋಪಿಸಿದ್ದಾರೆ. ಈ ಸಂಬಂಧ ಬಾಲಕನ ತಂದೆ, ಗೌತಮ್ ಬುದ್ಧ ನಗರದ ಮುಖ್ಯ ವೈದ್ಯಕೀಯ ಅಧಿಕಾರಿಗೆ ದೂರು ಸಲ್ಲಿಸಿದ್ದಾರೆ.

# ಒಬಿಸಿ ಕೆನೆಪದರ ಸಮಸ್ಯೆಯಿಂದ ಯುಪಿಎಸ್ಸಿ ಅಭ್ಯರ್ಥಿಗಳಿಗೆ ಅನ್ಯಾಯ: ಟ್ಯಾಗೋರ್



**ನವದೆಹಲಿ, ನ. 14:** ಇತರೆ ಹಿಂದುಳಿದ ವರ್ಗಗಳ ಕಲ್ಯಾಣ ಸಮಿತಿಯ (ಒಬಿಸಿ) ಸಭೆಯಲ್ಲಿ ಕಾಂಗ್ರೆಸ್ ನಾಯಕ ಮಾಣಿಕ್ಕಂ ಟ್ಯಾಗೋರ್ ಸೇರಿದಂತೆ ಕೆಲವು ವಿರೋಧ ಪಕ್ಷದ ಸದಸ್ಯರು, ಪರೀಕ್ಷೆಗಳಲ್ಲಿ ಉತ್ತೀರ್ಣರಾಗಿದ್ದರೂ ನಾಗರಿಕ ಸೇವೆಗಳಿಗೆ ಸೇರುವಾಗ ಕೆನೆಪದರ ಮಿತಿ ಪರಿಶೀಲಿಸುವಲ್ಲಿ ಒಬಿಸಿ ಅಭ್ಯರ್ಥಿಗಳು ಎದುರಿಸುತ್ತಿರುವ ಸಮಸ್ಯೆಗಳ ಕುರಿತು ಧ್ವನಿ ಎತ್ತಿದ್ದಾರೆ.

ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯದ ಅಧಿಕಾರಿಗಳು ಒಬಿಸಿಗಳ ಕಲ್ಯಾಣಕ್ಕಾಗಿ ವಿವಿಧ ಕ್ರಮಗಳು ಮತ್ತು ಯೋಜನೆಗಳ ಅನುಷ್ಠಾನ ವಿಷಯದ ಕುರಿತು ವಿವರಿಸುತ್ತಿದ್ದಾಗ ಸಂಸದರು ಈ ಕುರಿತು ಪ್ರಸ್ತಾಪಿಸಿದ್ದಾರೆ ಎಂದು ವರದಿಯಾಗಿದೆ. ಸಂಸದರಾದ ಮಾಣಿಕ್ಕಂ ಟ್ಯಾಗೋರ್, ಡಿಎಂಕೆಯ ಟಿಆರ್ ಬಾಲು ಮತ್ತು ಸಮಾಜವಾದಿ ಪಕ್ಷದ ರಾಮಶಂಕರ್ ರಾಜ್ಬರ್ ಅವರು, 2023 ರ ನಾಗರಿಕ ಸೇವಾ ಪರೀಕ್ಷೆಯಲ್ಲಿ ಉತ್ತೀರ್ಣರಾದ ಅಭ್ಯರ್ಥಿಗಳು ಸೇವೆಗೆ ಸೇರುವಾಗ ಕೆನೆ ಪದರವನ್ನು ತಡೆಯಾಗಿ ಬಳಕೆಯಾಗುತ್ತಿರುವ ಬಗ್ಗೆ ಪ್ರಶ್ನಿಸಿದ್ದಾರೆ.

ಈ ವರ್ಷದ ಸೆಪ್ಟೆಂಬರ್‌ನಲ್ಲಿ, ಕೇಂದ್ರ ಲೋಕಸೇವಾ ಆಯೋಗದ (ಯುಪಿಎಸ್ಸಿ) ನಾಗರಿಕ ಸೇವಾ ಪರೀಕ್ಷೆಯಲ್ಲಿ ಯಶಸ್ವಿಯಾಗಿ ಉತ್ತೀರ್ಣರಾದ ಒಬಿಸಿ ವರ್ಗದ ಅನೇಕ ಅರ್ಹ ಅಭ್ಯರ್ಥಿಗಳ ಮೇಲೆ ಪರಿಣಾಮ ಬೀರುವ ಸಮಸ್ಯೆಗಳ ಬಗ್ಗೆ ಗಮನ ಸೆಳೆಯಲು ಮಾಣಿಕ್ಕಂ ಟ್ಯಾಗೋರ್ ಅವರು ಪ್ರಧಾನಿ ನರೇಂದ್ರ ಮೋದಿಗೆ ಪತ್ರ ಬರೆದಿದ್ದರು. ಪರೀಕ್ಷೆಯಲ್ಲಿ ಉತ್ತೀರ್ಣರಾದ ಅಭ್ಯರ್ಥಿಗಳು ಒಬಿಸಿ ನಾನ್–ಕ್ರೀಮಿ ಲೇಯರ್ (ಎನ್ಸಿಎಲ್) ಸ್ಥಿತಿಯ ಪರಿಶೀಲನೆಗೆ ಸಂಬಂಧಿಸಿದ ಪ್ರಕ್ರಿಯೆಯಲ್ಲಿ ಗಮನಾರ್ಹ ಅಡೆತಡೆಗಳನ್ನು ಎದುರಿಸುತ್ತಿದ್ದಾರೆ. ಇದು ಅವರ ಗೊತ್ತುಪಡಿಸಿದ ಸೇವೆಗಳಿಗೆ ಸೇರುವುದನ್ನು ತಡೆಯುತ್ತಿದೆ ಎಂದು ಟ್ಯಾಗೋರ್ ಪತ್ರದಲ್ಲಿ ತಿಳಿಸಿದ್ದರು.

ತಮ್ಮ ಪತ್ರದಲ್ಲಿ, ಅಭ್ಯರ್ಥಿಗಳ ಪೋಷಕರ ವರ್ಗ **III/IV** ಎಂಬುವುದನ್ನು ದೃಢೀಕರಿಸಲು ರಾಜ್ಯ ಸರ್ಕಾರಗಳು ನೀಡಿದ ಸಮಾನತೆಯ ಪ್ರಮಾಣಪತ್ರಗಳನ್ನು ತಿರಸ್ಕರಿಸುವುದರ ಸುತ್ತ ಉದ್ಭವಿಸಿರುವ ಒಟ್ಟು ಸಮಸ್ಯೆಯ ಕುರಿತು ಟ್ಯಾಗೋರ್ ಗಮನ ಸೆಳೆದಿದ್ದರು. ಕಳೆದ ಕೆಲ ತಿಂಗಳ ಹಿಂದೆ 2022ರ ಬ್ಯಾಚ್ನ ಪ್ರೊಬೇಷನರಿ ಐಎಎಸ್ ಅಧಿಕಾರಿ ಪೂಜಾ ಖೇಡ್ಕರ್ ಅವರ ಒಬಿಸಿ ಎನ್ಸಿಎಲ್ ಪ್ರಮಾಣ ಪತ್ರಕ್ಕೆ ಸಂಬಂಧಿಸಿದಂತೆ ಒಬಿಸಿ ಕೋಟಾ ನಿಯಂತ್ರಣ ನಿಯಮದ ಸಮಸ್ಯೆ ಉಂಟಾಗಿತ್ತು.

ಸಿಬ್ಬಂದಿ ಮತ್ತು ತರಬೇತಿ ಇಲಾಖೆ ಹೊರಡಿಸಿದ 1993ರ ಕಚೇರಿ ಜ್ಞಾಪಕ ಪತ್ರವು ಒಬಿಸಿ–ಎನ್ಸಿಎಲ್ ವರ್ಗೀಕರಣಕ್ಕೆ ಮಾರ್ಗಸೂಚಿಗಳನ್ನು ನೀಡಿದೆ. ಅದರಲ್ಲಿ ರಾಜ್ಯ ನೀಡಿದ ಪ್ರಮಾಣಪತ್ರಗಳನ್ನು ತಿರಸ್ಕರಿಸುವುದನ್ನು ಕಡ್ಡಾಯಗೊಳಿಸುವ ಯಾವುದೇ ಸ್ಪಷ್ಟ ಷರತ್ತುಗಳು ಇಲ್ಲ. ಆದರೂ, ಪ್ರಾಯೋಗಿಕವಾಗಿ ಈ ಪ್ರಮಾಣಪತ್ರಗಳನ್ನು ಅಧಿಕಾರಿಗಳು ತಿರಸ್ಕರಿಸುತ್ತಿದ್ದಾರೆ. ಇದರಿಂದ ಅನೇಕ ಒಬಿಸಿ ಅಭ್ಯರ್ಥಿಗಳು ಅನ್ಯಾಯವಾಗಿ ಅನರ್ಹರಾಗುತ್ತಿದ್ದಾರೆ ಎಂದು ಮಾಣಿಕ್ಕಂ ಟ್ಯಾಗೋರ್ ತನ್ನ ಪತ್ರದಲ್ಲಿ ವಿವರಿಸಿದ್ದಾರೆ.

ಸಂಬಳ ಮತ್ತು ಕೃಷಿ ಆದಾಯವನ್ನು ಕೆನೆಪದರ ಮಿತಿಗೆ ಪರಿಗಣಿಸಿರುವುದು ಅಸಮಂಜಸ. ಇದು ಸಾರ್ವಜನಿಕ ವಲಯದ ಉದ್ಯಮಗಳು, ಸಾರ್ವಜನಿಕ ವಲಯದ ಬ್ಯಾಂಕುಗಳು ಮತ್ತು ಇತರ ಸಾರ್ವಜನಿಕ ವಲಯದ ಸಂಸ್ಥೆಗಳಲ್ಲಿ ಪೋಷಕರು ಉದ್ಯೋಗದಲ್ಲಿರುವ ಅಭ್ಯರ್ಥಿಗಳ ಮೇಲೆ ಅಸಾಮಾನವಾಗಿ ಪರಿಣಾಮ ಬೀರುತ್ತಿದೆ ಎಂದು ಟ್ಯಾಗೋರ್ ಹೇಳಿದ್ದಾರೆ.

ಪೋಷಕರು ಸಾರ್ವಜನಿಕ ವಲಯದಲ್ಲಿ ಮಾಡುವ ಅಭ್ಯರ್ಥಿಗಳಿಗೆ ಒಬಿಸಿ–ಎನ್ಸಿಎಲ್ ಸ್ಥಾನಮಾನಕ್ಕೆ ಆದಾಯ ಮಾನದಂಡಗಳ ಏಕರೂಪದ ವ್ಯಾಖ್ಯಾನವನ್ನು ಜಾರಿಗೊಳಿಸಲು, ಪಾಲಕರು ಖಖಖ/ಖಗ ವರ್ಗದವರು ಎಂದು ಅಭ್ಯರ್ಥಿಗಳಿಗೆ ರಾಜ್ಯ ಸರ್ಕಾರ ನೀಡುವ ಸಮಾನತೆಯ ಪ್ರಮಾಣಪತ್ರಗಳ ಸ್ವೀಕಾರಕ್ಕೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರವು ಅಂತರ್ಗತ ನೀತಿಯನ್ನು ರೂಪಿಸಬೇಕು. ಸಾರ್ವಜನಿಕ ವಲಯದ ಸಂಸ್ಥೆಗಳನ್ನು ಸಮಾನವಾಗಿ ಪರಿಗಣಿಸಬೇಕು. ಸೇವಾ ಹಂಚಿಕೆ ಮತ್ತು ಒಬಿಸಿ ಪರಿಶೀಲನಾ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಸುಧಾರಿಸಬೇಕು ಎಂದು ಟ್ಯಾಗೋರ್ ಒತ್ತಾಯಿಸಿದ್ದಾರೆ.

ಬುಧವಾರದ ಈ ಕುರಿತು ಎಕ್ಸ್ ಪೋಸ್ಟ್ ಹಾಕಿದ್ದ ಟ್ಯೋಗೋರ್ ಮೋದಿಯವರು 2017 ರಿಂದ ಒಬಿಸಿ ಕೆನೆಪದರ ಆದಾಯದ ಮಿತಿಯನ್ನು ಏಕೆ ಹೆಚ್ಚಿಸಿಲ್ಲ ಹಣದುಬ್ಬರ ಮತ್ತು ಬದಲಾಗುತ್ತಿರುವ ಆರ್ಥಿಕ ವಾಸ್ತವಗಳನ್ನು ಸರಿದೂಗಿಸಿಕೊಳ್ಳಲು ಬದಲಾವಣೆಗಳನ್ನು ತರದೆ ಏಳು ವರ್ಷಗಳು ಕಳೆಯಿತು. ಒಬಿಸಿಗಳಿಗೆ ದ್ರೋಹ ಮಾಡುತ್ತಿರುವವರು ಯಾರು ಎಂದು ಪ್ರಶ್ನಿಸಿದ್ದಾರೆ.

# ಪತ್ರಕರ್ತರ ಸಮ್ಮೇಳನ:ಲಾಂಛನ ಅನಾವರಣ



**ಬೆಂಗಳೂರು, ನ. 14 :** ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ, ಜಿಲ್ಲಾ ಸಂಘ ಮತ್ತು ಜಿಲ್ಲಾಡಳಿತ ತುಮಕೂರು ವತಿಯಿಂದ ಕರ್ನಾಟಕ ಸುವರ್ಣ ಸಂಭ್ರಮ ನೆನಪಿನ ರಾಜ್ಯ ಮಟ್ಟದ ಕ್ರೀಡಾಕೂಟದ ಲಾಂಛನವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಗುರುವಾರ ಕಾವೇರಿಯಲ್ಲಿ ಅನಾವರಣಗೊಳಿಸಿ ಕ್ರೀಡಾಕೂಟಕ್ಕೆ ಶುಭ ಹಾರೈಸಿದರು.

ತುಮಕೂರಿನಲ್ಲಿ ಡಿಸೆಂಬರ್ ನಲ್ಲಿ ಆಯೋಜಿಸಲಿರುವ ರಾಜ್ಯ ಮಟ್ಟದ ಪತ್ರಕರ್ತರ ಸಮ್ಮೇಳನಕ್ಕೆ ಜಿಲ್ಲಾ ಉಸ್ತುವಾರಿ ಸಚಿವರುಗಳಾದ ಡಾ. ಜಿ. ಪರಮೇಶ್ವರ ಅವರ ನೇತೃತ್ವದಲ್ಲಿ ಅಗತ್ಯ ಪೂರ್ವ ಸಿದ್ಧತೆಯನ್ನು ನಡೆಸುತ್ತಿದ್ದು ಉದ್ಘಾಟಿಸಲು ಸಮಯವಕಾಶ ಕೊಡಬೇಕೆಂದು ಮುಖ್ಯಮಂತ್ರಿಗಳನ್ನು ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ನೇತೃತ್ವದ ನಿಯೋಗ ಮನವಿ ಮಾಡಿತು.

ಡಿಸೆಂಬರ್ ನಲ್ಲಿ ಸಮ್ಮೇಳನ ಮಾಡಿದರೆ ಅಧಿವೇಶನ ಇರುವುದರಿಂದ ಬರುವುದು ಕಷ್ಟವಾಗಬಹುದು. ಜನವರಿಯಲ್ಲಿ ಮಾಡಿದರೆ ಖಂಡಿತವಾಗಿ ಬರುತ್ತೇನೆ. ಅಗತ್ಯ ಸಹಕಾರವನ್ನು ಕೊಡಲು ತಿಳಿಸುತ್ತೇನೆ ಸಿಎಂ ಸಿದ್ದರಾಮಯ್ಯ ತಿಳಿಸಿದರು. ಕ್ರೀಡಾಕೂಟ ಯಶಸ್ವಿಯಾಗಿ ನಡೆಯಲಿ ಎಂದು ಮತ್ತೊಮ್ಮೆ ಶುಭ ಹಾರೈಸಿದರು.

ಸಂಘದ ಜಿಲ್ಲಾಧ್ಯಕ್ಷ ಚಿ. ನಿ. ಪುರುಷೋತ್ತಮ್ ಹಾಗೂ ರಾಷ್ಟ್ರೀಯ ಮಂಡಳಿ ಸದಸ್ಯರಾದ ಅನು ಶಾಂತರಾಜು, ಟಿ.ಎನ್. ಮಧುಕರ್, ಡಿ.ಎಂ.ಸತೀಶ್ ಮತ್ತು ಪದಾಧಿಕಾರಿಗಳು ನಿಯೋಗದಲ್ಲಿದ್ದರು. ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಕೆ.ವಿ. ಪ್ರಭಾಕರ್ ಅವರನ್ನು ಕ್ರೀಡಾಕೂಟಕ್ಕೆ ಆಹ್ವಾನಿಸಲಾಯಿತು. ವಾರ್ತಾ ಇಲಾಖೆ ಹಿರಿಯ ಸಹಾಯಕ ನಿರ್ದೇಶಕರಾದ ಹಿಮಂತರಾಜು ಕ್ರೀಡಾ ಸಮಿತಿ ಮುಖ್ಯ ಸಂಚಾಲಕರಾದ ಸತೀಶ್ ಹಾರೋಗೆರೆ, ಯಶಸ್ ಪದ್ಮನಾಭ್, ಎಸ್. ಹರೀಶ್ ಆಚಾರ್ಯ ಮತ್ತಿತರರು ಹಾಜರಿದ್ದರು.



ಬೆಂಗಳೂರು ವಿಶ್ವವಿದ್ಯಾಲಯದ ಕಾನೂನು ಅಧ್ಯಯನ ವಿಭಾಗದ ವತಿಯಿಂದ ಕನ್ನಡ ಕಲರವ ಕಾರ್ಯಕ್ರಮ ಆಚರಿಸಲಾಯಿತು. ಜಾನಪದ, ಸಾಂಸ್ಕೃತಿಕ ಪ್ರದರ್ಶನಗಳ ಮೂಲಕ ಕನ್ನಡದ ಹಿರಿಮೆಯನ್ನು ಸಾರಲಾಯಿತು. ಈ ಸಂದರ್ಭದಲ್ಲಿ ಕುಲಪತಿ ಡಾ.ಜಯಕರ್ ಎಸ್.ಎಂ., ಡಾ.ಎಂ.ಆರ್.ಲಕ್ಷ್ಮಣ್‌ಪ್ರಸಾದ್, ನಟ ಶ್ರೀನಗರ ಕಿಟ್ಟಿ, ಉಪವಿಭಾಗಾಧಿಕಾರಿ ರಜನಿಕಾಂತ್, ಡೀನರು ಡಾ.ವಿ.ಸುದೇಶ್,ಪ್ರಾಂಶುಪಾಲ ಡಾ.ಎನ್.ದಶರಥ್,ಅಧ್ಯಕ್ಷರು ಡಾ.ಸತೀಶ್ ಗೌಡ, ಡಾ.ನಾಗೇಶ್,ಡಾ.ಗಿರೀಶ್ ರಾವ್ ಎನ್ ಸೇರಿದಂತೆ ಶಿಕ್ಷಕರು,ವಿದ್ಯಾರ್ಥಿಗಳು ಭಾಗಿಯಾಗಿದ್ದರು.

# ಮಹಾರಾಷ್ಟ್ರ ವಿಧಾನಸಭೆ ಚುನಾವಣೆಯ ಅಖಾಡಕೆ ಡಿ.ಕೆ.ಶಿ



**ಬೆಂಗಳೂರು, ನ. 14:** ಕರ್ನಾಟಕದ ಮೂರು ಕ್ಷೇತ್ರಗಳ ವಿಧಾನಸಭಾ ಉಪ ಚುನಾವಣೆಯ ಬಳಿಕ, ಡಿಸಿಎಂ ಡಿಕೆ ಶಿವಕುಮಾರ್ ಮಹಾರಾಷ್ಟ್ರ ವಿಧಾನಸಭೆ ಚುನಾವಣೆಯ ಅಖಾಡಕ್ಕೆ ಇಳಿದಿದ್ದಾರೆ. ನಾಳೆಯಿಂದ ಮೂರು ದಿನಗಳ ಕಾಲ ಮಹಾರಾಷ್ಟ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳ ಪರ ಅಬ್ಬರದ ಪ್ರಚಾರ ಮಾಡಲಿದ್ದಾರೆ.

ನಾಳೆ ಬೆಳಿಗ್ಗೆ 9.55ಕ್ಕೆ ಬೆಂಗಳೂರು ಕೆಂಪೇಗೌಡ ವಿಮಾನ ನಿಲ್ದಾಣದಿಂದ ವಿಮಾನದ ಮೂಲಕ ಮುಂಬೈಗೆ ತೆರಳಲಿದ್ದಾರೆ. ಮಧ್ಯಾಹ್ನ 12 ಗಂಟೆಗೆ ಮುಂಬೈ ಏರ್ಪೋರ್ಟ್ ತಲುಪಲಿರುವಂತ ಅವರು, ಅಲ್ಲಿಂದ ರಸ್ತೆಯ ಮೂಲಕ ಸಾಗಿ ಮುಂಬೈ ವೆಸ್ಟ್ ವಿಧಾನಸಭಾ ಕ್ಷೇತ್ರವಾದಂತ ಬಿವಂಡಿಯಲ್ಲಿ ಪ್ರಚಾರ ನಡೆಸಲಿದ್ದಾರೆ.ಸಂಜೆ 5 ಗಂಟೆಗೆ ಚಾಂದಿವಲಿ ವಿಧಾನಸಭಾ ಕ್ಷೇತ್ರದಲ್ಲಿ ಚುನಾವಣಾ ಪ್ರಚಾರ ನಡೆಸಲಿರುವಂತ ಅವರು, ರಾತ್ರಿ 7.55ಕ್ಕೆ ಮುಂಬೈನಿಂದ ವಿಮಾನದಲ್ಲಿ ಹೊರಟು, ಬೆಂಗಳೂರನ್ನು ರಾತ್ರಿ 9.55ಕ್ಕೆ ತಲುಪಲಿದ್ದಾರೆ.

16-ರಂದು ಮರು ದಿನ ಬೆಳಿಗ್ಗೆ 9 ಗಂಟೆಗೆ ಹೆಚ್ ಎಎಲ್ ಏರ್ ಪೋರ್ಟ್ ನಿಂದ ವಿಶೇಷ ಏರ್ ಕ್ರಾಫ್ಟ್ ಮೂಲಕ ಮಹಾರಾಷ್ಟ್ರದ ಸೊಲ್ಲಾಪುರ ವಿಮಾನ ನಿಲ್ದಾಣವನ್ನು ಬೆಳಿಗ್ಗೆ 11 ಗಂಟೆಗೆ ತಲುಪಲಿದ್ದಾರೆ. ಮಧ್ಯಾಹ್ನ 3 ಗಂಟೆಗೆ ಜಟ್ ವಿಧಾನಸಭಾ ಕ್ಷೇತ್ರದಲ್ಲಿ ಪ್ರಚಾರ ನಡೆಸಲಿದ್ದಾರೆ.

ಸಂಜೆ 6 ಗಂಟೆಗೆ ಅಕ್ಕಲಕೋಟ್ ವಿಧಾನಸಭಾ ಕ್ಷೇತ್ರ, ರಾತ್ರಿ 8 ಗಂಟೆಗೆ ಸೋಲಾಪುರ ವಿಧಾನಸಭಾ ಕ್ಷೇತ್ರದಲ್ಲಿ ಮತಬೇಟೆಯಲ್ಲಿ ತೊಡಗಲಿದ್ದಾರೆ. ನ. 16ರಂದು ಸೊಲಾಪುರದಲ್ಲಿಯೇ ಉಳಿದುಕೊಳ್ಳಲಿರುವಂತ ಡಿಸಿಎಂ ಡಿ.ಕೆ ಶಿವಕುಮಾರ್, ದಿನಾಂಕ 17-ಭಾನುವಾರ ಬೆಳಿಗ್ಗೆ 11 ಗಂಟೆಯಿಂದ ರಾತ್ರಿ 10 ಗಂಟೆಯವರೆಗೆ ಲಾತೂರು ವಿಧಾನಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿಯ ಪರವಾಗಿ

# 50 ಕೋಟಿ ರೂಪಾಯಿ ಆರೋಪಕ್ಕೆ ಸಿಟಿ ರವಿ ತಿರುಗೇಟು



**ಬೆಂಗಳೂರು, ನ, 14;** ಕಾಂಗ್ರೆಸ್ಸಿನ 50 ಶಾಸಕರಿಗೆ ಬಿಜೆಪಿ 50 ಕೋಟಿ ರೂಪಾಯಿ ಆಫರ್ ನೀಡಿದೆ ಎಂದು ಸಿಎಂ ಸಿದ್ದರಾಮಯ್ಯ ಬಿಜೆಪಿ ವಿರುದ್ಧ ಗಂಭೀರವಾದ ಆರೋಪ ಮಾಡಿದ್ದಾರೆ. ಈ ಒಂದು ಆರೋಪಕ್ಕೆ ಬಿಜೆಪಿ ಎಂಎಲ್‌ಸಿ ಸಿಟಿ ರವಿ ತಿರುಗೇಟು ನೀಡಿದ್ದು, ಶಾಸಕರನ್ನು ಖರೀದಿ ಮಾಡೋಕೆ ಅವರೇನು ಕುದುರೆಯೋ ಕತ್ತೆಯೋ ಅಥವಾ ದನಾನೋ ಎಂದು ಕಿಡಿಕರಿದ್ದಾರೆ. ಯಾರು ಯಾರನ್ನ ಯಾವಾಗ ಖರೀದಿಸಿದಲು ಯತ್ನಿಸಿದರು ಸಾಕ್ಷಿಗಳು ಇದ್ದರೆ ದೂರು ಕೊಡಿ ಸಿಎಂ ಸ್ಥಾನದ ಜವಾಬ್ದಾರಿ ಮರೆತು ಸಿದ್ದರಾಮಯ್ಯ ಆರೋಪಿಸುತ್ತಿದ್ದಾರೆ. ಬಿಜೆಪಿ ಮೇಲೆ ತಪ್ಪ ಅಭಿಪ್ರಾಯ ಮೂಡಿಸಲು ಷಡ್ಯಂತರ ನಡೆಸುತ್ತಿದ್ದಾರೆ.

ನಿಮ್ಮ ಇತ್ತೀಚಿನ ನಡವಳಿಕೆ ನೋಡಿದಾಗ ದಿನತ್ಯ ಸುಳ್ಳು ಹೇಳುವುದು ನಿಮ್ಮ ರಾಜಕೀಯ ಬದುಕಿನ ಭಾಗ ಆಗಿದೆ ಎಂದು ವಾಗ್ದಾಳಿ ನಡೆಸಿದ್ದಾರೆ. ಸುಳ್ಳು ಹೇಳದೇ ಇದ್ದರೆ ನಿಮಗೆ ತಿಂದ ಅನ್ನ ಜೀರ್ಣ ಆಗಲ್ಲ. ಸುಳಿನಿಂದಲೇ ನಿಮ್ಮ ರಾಜಕೀಯ ಬದುಕು ಪ್ರಾರಂಭವಾಗಿದೆ. ಸುಳಿನಿಂದಲೇ ನಿಮ್ಮ ದಿನಚರಿ ಮುಕ್ತಾಯ ಆಗುತ್ತದೆ ಅನಿಸುತ್ತದೆ. ನಮ್ಮ ಪಕ್ಷದ ಮೇಲೆ ಸುಳ್ಳು ಆರೋಪ ಮಾಡಿದ್ದೀರಿ. ನಿಮ್ಮ ಬಳಿ 137 ಶಾಸಕರು ಇದ್ದಾರೆ ಅಲುಗಾಡಿಸಲು ಆಗಲ್ಲ. ಹೊರಗಡೆಯಿಂದ ನಿಮ್ಮನ್ನು ಅಲುಗಾಡಿಸಲು ಯಾರಿಗೂ ಆಗಲ್ಲ. ನಿಮ್ಮ ಪಕ್ಷದಲ್ಲಿ ಯಾರಾದರೂ ಅಲುಗಾಡಿಸಬೇಕೆ ಹೊರತು, ಬೇರೆಯವರಿಂದ ಹಲುಗಾಡಿಸಲು ಸಾಧ್ಯವಿಲ್ಲ ಎಂದು ಸಿಟಿ ರವಿ ಹೇಳಿದರು.

# ಕಾಂಗ್ರೆಸ್ ಆರೋಪ ಹಸಿ ಸುಳ್ಳು: ಸುನೀಲ್ ಕುಮಾರ್

**ಬೆಂಗಳೂರು, ನ. 14:** ಬೆಳಗಾವಿಯ ಅಧಿವೇಶನ ಹೊಸ ಮುಖ್ಯಮಂತ್ರಿಯೊಂದಿಗೆ ನಡೆಯಲಿದೆ. ರಾಜ್ಯದಲ್ಲಿ ಮುಖ್ಯಮಂತ್ರಿಗಳನ್ನು ಕಾಂಗ್ರೆಸ್ ಹೈಕಮಾಂಡ್ ಬದಲಿಸಲಿದೆ ಎಂಬಂಥ ಬೆಳವಣಿಗೆ ನಡೆಯುತ್ತಿರುವಂತಿದೆ ಎಂದು ಎಂದು ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಮತ್ತು ಶಾಸಕ ಸುನೀಲ್ ಕುಮಾರ್ ಅವರು ಹೇಳಿದರು.

ಈ ಕುರಿತು ಮಾಧ್ಯಮಗಳ ಜೊತೆಗೆ ಮಾತನಾಡಿದ ಅವರು, ಉಪ ಚುನಾವಣೆಯ ಫಲಿತಾಂಶ ಬರುವುದಕ್ಕಿಂತ ಮುಂಚೆಯೇ ಸೋಲಿನ ಮುನ್ಸೂಚನೆ ಸಿಕ್ಕಿರುವ ಹಿನ್ನೆಲೆಯಲ್ಲಿ ತನ್ನ ಸ್ಥಾನಕ್ಕೆ ಚ್ಯುತಿ ಬರುವ ಭಾವನೆಯನ್ನು ಕಣ್ಮುಂದೆ ಇಟ್ಟುಕೊಂಡು ಮುಖ್ಯಮಂತ್ರಿ ಸಿದ್ದರಾಮಯ್ಯನವರು 'ನಮ್ಮ ಶಾಸಕರನ್ನು ಬಿಜೆಪಿಯವರು ಖರೀದಿಸುತ್ತಿದ್ದಾರೆ ಎಂಬ ಹುಸಿ ಸುಳ್ಳನ್ನು ಹೇಳುತ್ತಿದ್ದಾರೆ ಎಂದು ಶಾಸಕ ಸುನೀಲ್ ಕುಮಾರ್ ಅವರು ಟೀಕಿಸಿದರು. ಕಾಂಗ್ರೆಸ್ಸಿನ ಬೆಳವಣಿಗೆಗಳು, ನಾಯಕರ ಒಳ ಸಭೆಗಳು ಮುಖ್ಯಮಂತ್ರಿಗಳ ಕುರ್ಚಿಗೆ ಆಪತ್ತು ತರುತ್ತದೆ. ಮುಖ್ಯಮಂತ್ರಿಯವರು ಇಲ್ಲಿನತನಕ ತನ್ನ ಅಧಿಕಾರಾವಧಿಯಲ್ಲಿ ನೂರು ಸುಳ್ಳು ಹೇಳಿದ್ದು, ಇದು ನೂರ ಒಂದನೇ ಸುಳ್ಳು ಎಂದು ಅಂದುಕೊಳ್ಳುವುದಾಗಿ ತಿಳಿಸಿದರು. ಆಡಳಿತ ಪಕ್ಷವನ್ನು ಬೆದರಿಸಲು ಪ್ರತಿಪಕ್ಷದ ಹೆಗಲ ಮೇಲೆ ಬಂದೂಕು ಇಟ್ಟುಕೊಂಡು ಆಡಳಿತ ಪಕ್ಷದ ಶಾಸಕರು, ಹೈಕಮಾಂಡನ್ನು ಹೆದರಿಸುವ ಪ್ರಯತ್ನ ಮುಖ್ಯಮಂತ್ರಿಯವರ ಈ ಹೇಳಿಕೆ ಹಿಂದಿದೆ ಎಂದು ಸುನೀಲ್ ಕುಮಾರ್ ತಿಳಿಸಿದರು.

# ತಿಂಗಳಲ್ಲಿ ಎಸ್.ನಿಜಲಿಂಗಪ್ಪ ಅವರ ಮನೆ ಖರೀದಿಸಿ ನೋಂದಣಿ: ಸಚಿವ ಶಿವರಾಜ್ ತಂಗಡಗಿ



**ಬೆಂಗಳೂರು, ನ. 14:** ಮಾಜಿ ಮುಖ್ಯಮಂತ್ರಿ ದಿವಂಗತ ಎಸ್.ನಿಜಲಿಂಗಪ್ಪ ಅವರ ಚಿತ್ರದುರ್ಗದಲ್ಲಿ ವಾಸವಿದ್ದ ಮನೆಯನ್ನು ಸರ್ಕಾರ ಶೀಘ್ರ ಖರೀದಿಸಿ, ಒಂದು ತಿಂಗಳಲ್ಲಿ ನೋಂದಣಿ ಮಾಡಿಸುವಂತೆ ಕನ್ನಡ ಮತ್ತು ಸಂಸ್ಕೃತಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಚಿವ ಶಿವರಾಜ್ ತಂಗಡಗಿ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ನಿಜಲಿಂಗಪ್ಪ ಅವರ ಮನೆ ಖರೀದಿಸಿ ಸಂರಕ್ಷಿಸಲು ಹಾಗೂ ಅಭಿವೃದ್ಧಿಗೊಳಿಸುವ ಸಂಬಂಧ ಸಚಿವರು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಅಧಿಕಾರಿಗಳು ಮತ್ತು ಚಿತ್ರದುರ್ಗ ಜಿಲ್ಲಾಧಿಕಾರಿ ಅವರ ಜತೆ ಗುರುವಾರ ವಿಕಾಸಸೌಧ ತಮ್ಮ ಕಚೇರಿಯಲ್ಲಿ ಸಭೆ ನಡೆಸಿದರು.

ನಿಜಲಿಂಗಪ್ಪ ಅವರ ಮನೆ ಖರೀದಿ ಹಾಗೂ ಸಂರಕ್ಷಣೆ ಸಂಬಂಧ ಈಗಾಗಲೇ ಸರ್ಕಾರ ಐದು ಕೋಟಿ ಅನುದಾನವನ್ನು ಬಿಡುಗಡೆಗೊಳಿಸಿದ್ದರೂ ತಡವಾಗುತ್ತಿರುವ ಬಗ್ಗೆ ಸಚಿವರು ಅಧಿಕಾರಿಗಳಿಂದ ಮಾಹಿತಿ ಪಡೆದರು. ಈ ಹಿಂದೆ ಮನೆ ಖರೀದಿ ಸಂಬಂಧ ತಾಂತ್ರಿಕ ಕಾರಣಗಳು ಎದುರಾಗಿತ್ತು. ಇದೀಗ ನಿಜಲಿಂಗಪ್ಪ ಅವರ ಪುತ್ರ ಹಾಗೂ ಅವರ ಸಂಬಂಧಿಗಳ ಜತೆ ಚರ್ಚೆ ನಡೆಸಿದ್ದು, ಮನೆ ಖರೀದಿ ಪ್ರಕ್ರಿಯೆಗೆ ಮುಂದಾಗಿದ್ದೇವೆ ಎಂದು ಅಧಿಕಾರಿಗಳು ಸಚಿವರ ಗಮನಕ್ಕೆ ತಂದರು. ಇದಕ್ಕೆ ಪ್ರತಿಕ್ರಿಯಿಸಿದ ಸಚಿವರು, ಕಾನೂನುತ್ಮಾಕವಾಗಿ ವ್ಯವಹಾರಿಸಿ ಕೂಡಲೇ ಮನೆ ಖರೀದಿಸಿ ಎಂದು ತಾಕೀತು ಮಾಡಿದರು. ಸಭೆ ಬಳಿಕ ಮಾತನಾಡಿದ ಸಚಿವ ಶಿವರಾಜ್ ತಂಗಡಗಿ, ನಿಜಲಿಂಗಪ್ಪ ಅವರ ಮನೆ ಖರೀದಿ ಹಿನ್ನೆಲೆಯಲ್ಲಿ ಕಾನೂನು ಇಲಾಖೆಯಿಂದ ಅಭಿಪ್ರಾಯ ಪಡೆಯಲಾಗಿದೆ. ನಿಜಲಿಂಗಪ್ಪ ಅವರು ವಾಸವಿದ್ದ ಕೋಟೆ ನಾಡಿನ ಮನೆ ಖಾತೆಯು ಅವರ 3ನೇ ಪುತ್ರ ಎಸ್.ಎನ್.ಕಿರಣ್ ಶಂಕರ್ ಅವರ ಹೆಸರಿನಲ್ಲಿತ್ತು. ನಿಜಲಿಂಗಪ್ಪ ಅವರು ಬರೆದಿಟ್ಟಿರುವ ವಿಲ್ ನಂತೆ ಮನೆ ಖಾತೆ ಪ್ರಸ್ತುತ ನಿಜಲಿಂಗಪ್ಪ ಅವರ ಮೊಮ್ಮಗ ವಿನಯ್ ಬಿನ್ ಎಸ್.ಎ.ಕಿರಣ್ ಶಂಕರ್ ಅವರ ಹೆಸರಿನಲ್ಲಿದ್ದು, ಸಂಪೂರ್ಣ ಇದೀಗ ಆಸ್ತಿಗೆ ವಿನಯ್ ಮಾಲೀಕತ್ವ ಹೊಂದಿದ್ದಾರೆ. ಈ ಸಂಬಂಧ ಅಧಿಕಾರಿಗಳು ಕಿರಣ್ ಅವರೊಂದಿಗೆ ಚರ್ಚೆ ನಡೆಸಿದ್ದು, ತಿಂಗಳಲ್ಲಿ ಮನೆ ಪ್ರಕ್ರಿಯೆ ಪೂರ್ಣಗೊಳ್ಳಲಿದೆ ಎಂದು ಮಾಹಿತಿ ನೀಡಿದರು.


ಮನೆ ಖರೀದಿಸಿ ಸಂರಕ್ಷಿಸಲು ಮತ್ತು ಅಭಿವೃದ್ಧಿಪಡಿಸಲು ಐದು ಕೋಟಿ ಹಣವನ್ನು ಬಿಡುಗಡೆ ಮಾಡಲಾಗಿದೆ. ಈ ಪೈಕಿ ಅಂದಾಜು 4.18 ಕೋಟಿ ಹಣದಲ್ಲಿ ಮನೆ ಖರೀದಿಸಲು ತೀರ್ಮಾನಿಸಲಾಗಿದ್ದು, ಮನೆ ಅಭಿವೃದ್ಧಿಗೆ 81,50 ಲಕ್ಷ ಹಣ ವೆಚ್ಚ ಮಾಡಲಾಗುವುದು ಎಂದು ಸಚಿವರು ವಿವರಿಸಿದರು.

ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಕಾರ್ಯದರ್ಶಿ ಎನ್. ಮಂಜುಳಾ, ಚಿತ್ರದುರ್ಗ ಜಿಲ್ಲಾಧಿಕಾರಿ ವೆಂಕಟೇಶ್, ಇಲಾಖೆ ನಿರ್ದೇಶಕಿ ಡಾ.ಧರಣಿ ದೇವಿ ಮಾಲಗತ್ತಿ, ಜಂಟಿ ನಿರ್ದೇಶಕ ಅಶೋಕ್ ಛಲವಾದಿ ಹಾಗೂ ಇನ್ನಿತರ ಅಧಿಕಾರಿಗಳು ಹಾಜರಿದ್ದರು.

**ಕರ್ನಾಟಕದ ಏಕೀಕರಣದ ಹೋರಾಟದ ಮುಂಚೂಣಿ ನಾಯಕರಾಗಿದ್ದ ಎಸ್.ನಿಜಲಿಂಗಪ್ಪ ಅವರು ರಾಜ್ಯದ ಮುಖ್ಯಮಂತ್ರಿಯಾಗಿ ಅನೇಕ ಕೊಡುಗೆಗಳನ್ನು ನೀಡಿದ್ದಾರೆ. ನಾಡಿಗಾಗಿ ಬದುಕನ್ನೇ ಮುಡಿಪಾಗಿಟ್ಟ ಮಾಜಿ ಮುಖ್ಯಮಂತ್ರಿಗಳ ಮನೆಯನ್ನು ಖರೀದಿಸಿ ಸ್ಮಾರಕವಾಗಿಸುವ ಕಾರ್ಯ ನನ್ನ ಅವಧಿಯಲ್ಲಿ ಆಗುತ್ತಿರುವುದು ಸಂತಸ ತರಿಸಿದೆ.**

**– ಶಿವರಾಜ್ ಎಸ್. ತಂಗಡಗಿ**

## ನಿಜಲಿಂಗಪ್ಪನವರ ಮನೆ ಸ್ಮಾರಕ ನಿರ್ಮಾಣಕ್ಕೆ 5 ಕೋಟಿ ರೂ. ಅನುದಾನ



ಮಾಜಿ ಮುಖ್ಯಮಂತ್ರಿ ಕರ್ನಾಟಕರತ್ನ, ದಿವಂಗತ ಎಸ್. ನಿಜಲಿಂಗಪ್ಪ ಅವರ ಚಿತ್ರದುರ್ಗದ ಮನೆಯನ್ನು ಸರ್ಕಾರದಿಂದ ಖರೀದಿಸಿ ಸ್ಮಾರಕವಾಗಿ ಸಂರಕ್ಷಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ಸಮ್ಮತಿಸಿದ್ದಾರೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ತಿಳಿಸಿದ್ದಾರೆ. ಈ ಸಂಬಂಧ ಗುರುವಾರ ಸಿಎಂ ಜೊತೆ ಮಾತುಕತೆ ನಡೆಸಿದ್ದು, ನಿಜಲಿಂಗಪ್ಪನವರ ಮನೆಯನ್ನು ಖರೀದಿಸಿ, ನವೀಕರಿಸಿ ಅದನ್ನು ಸ್ಮಾರಕವಾಗಿ ಕಾಪಾಡಲು 5 ಕೋಟಿ ರೂ. ಅನುದಾನ ಬಿಡುಗಡೆ ಮಾಡಲು ಹಣಕಾಸು ಸಚಿವರೂ ಆದ ಮುಖ್ಯಮಂತ್ರಿ ಸಿದ್ದರಾಮಯ್ಯ ಒಪ್ಪಿಗೆ ಸೂಚಿಸಿದ್ದಾರೆ. ಇದಕ್ಕಾಗಿ ಅವರಿಗೆ ಧನ್ಯವಾದ ಅರ್ಪಿಸುವುದಾಗಿ ತಿಳಿಸಿದರು. ನಿಜಲಿಂಗಪ್ಪ ಅವರು ಏಕೀಕರಣದ ಬಳಿಕ ಮೈಸೂರು ರಾಜ್ಯದ (ಕರ್ನಾಟಕ) ಪ್ರಥಮ ಮುಖ್ಯಮಂತ್ರಿಗಳಾಗಿದ್ದು, ತಮ್ಮ ಸರಳ, ಸಜ್ಜನಿಕೆಯಿಂದ ಇಡೀ ರಾಜ್ಯದ ಜನಮನ ಗೆದ್ದಿದ್ದರು. ಅವರ ಮನೆಯನ್ನು ಸ್ಮಾರಕ ಮಾಡುವುದಾಗಿ ಈ ಹಿಂದೆಯೇ ಸರ್ಕಾರ ಘೋಷಿಸಿತ್ತು. ಈಗ ಆ ಪ್ರಕ್ರಿಯೆಗೆ ಚಾಲನೆ ನೀಡಲಾಗುವುದು ಎಂದು ಈಶ್ವರ ಖಂಡ್ರೆ ತಿಳಿಸಿದರು.

# ಬಗರ್‌ಹುಕುಂ: ಅರ್ಜಿಗಳ ವಿಲೇವಾರಿಗೆ ನ.25 ಗಡುವು: ಕೃಷ್ಣ ಬೈರೇಗೌಡ ಎಚ್ಚರಿಕೆ



**ಬೆಂಗಳೂರು, ನ. 14 :** ಬಡವರಿಗೆ ಭೂ ಮಂಜೂರುಗೊಳಿಸುವ "ಬಗರ್ ಹುಕುಂ" ಅರ್ಜಿಗಳ ಪೈಕಿ ಅರ್ಹ-ಅನರ್ಹ ಅರ್ಜಿಗಳನ್ನು ರಾಜ್ಯದ ಎಲ್ಲಾ ತಹಶೀಲ್ದಾರರೂ ಈ ತಿಂಗಳ 25 ರ ಒಳಗೆ ವಿಂಗಡಿಸಿ ಜಿಲ್ಲಾಧಿಕಾರಿಗಳಿಗೆ ನೀಡಬೇಕು. ತಪ್ಪಿದರೆ ಎಲ್ಲರಿಗೂ ಶೋಕಾಸ್ ನೊಟೀಸ್ ನೀಡಲಾಗುವುದು ಎಂದು ಸಚಿವ ಕೃಷ್ಣ ಬೈರೇಗೌಡ ಅವರು ಅಧಿಕಾರಿಗಳನ್ನು ಎಚ್ಚರಿಸಿದರು. ಸಚಿವ ಕೃಷ್ಣ ಬೈರೇಗೌಡ ಅವರು ರಾಜ್ಯದ ಎಲ್ಲಾ ತಹಶೀಲ್ದಾರರ ಜೊತೆ ವಿಕಾಸಸೌಧದಿಂದ ಗುರುವಾರ ವಿಡಿಯೋ ಕಾನ್ಫರೆನ್ಸ್ ಮೂಲಕ ಸಭೆ ನಡೆಸಿ ಬಗರ್ ಹುಕುಂ ಅರ್ಜಿ ವಿಲೇ ಪ್ರಗತಿ ಪರಿಶೀಲನೆ ನಡೆಸಿದರು."ಬಗರ್ ಹುಕುಂ" ಬಡವರ ಕೆಲಸ. ಬಡ ರೈತರಿಗೆ ಶೀಘ್ರ ಭೂ ಮಂಜೂರು ಮಾಡಬೇಕು ಎಂದು ರೈತಪರ ಸಂಘಟನೆಗಳು ದಶಕಗಳಿಂದ ಹೋರಾಡುತ್ತಿವೆ. ಈ ಬಗ್ಗೆ ಸರ್ಕಾರಕ್ಕೂ ಬದ್ಧತೆ ಇದ್ದು, ರೈತ ಹೋರಾಟಗಾರರ ದ್ವನಿಗೆ ಕಿವಿಗೊಡುವ ಅವರ ಸಮಸ್ಯೆಯನ್ನು ಆಲಿಸಿ ಪರಿಹರಿಸುವ ಉತ್ತರದಾಯಿತ್ವ ನನ್ನ ಮೇಲೂ ಇದೆ" ಎಂದರು. ಮುಂದುವರೆದು, "ಬಗರ್ ಹುಕುಂ ಕೆಲಸಗಳಿಗೆ ಚುರುಕು ಮುಟ್ಟಿಸಬೇಕು ಎಂಬ ಕಾರಣದಿಂದಲೇ ನಾನು ಕಳೆದ ಒಂದು ವರ್ಷದಿಂದ ವ್ಯಯಕ್ತಿಕವಾಗಿ ಎಲ್ಲಾ ಜಿಲ್ಲೆಗಳಿಗೂ ಪ್ರವಾಸ ಕೈಗೊಂಡು ಪ್ರಗತಿ ಪರಿಶೀಲನಾ ಸಭೆ ನಡೆಸುತ್ತಿದ್ದೇನೆ. ರಾಜ್ಯದ ಎಲ್ಲಾ ತಹಶೀಲ್ದಾರರ ಜೊತೆ ಪ್ರತಿ ತಿಂಗಳೂ ವಿಡಿಯೋ ಕಾನ್ಫರೆನ್ಸ್ ಮೂಲಕವೂ ಸಭೆ ನಡೆಸಿ ಪ್ರಗತಿ ಪರಿಶೀಲಿಸುತ್ತಿದ್ದೇನೆ. ಆದರೂ ಕೆಲವು ತಹಶೀಲ್ದಾರರು ಬಡವರ ಕೆಲಸದ ಬಗ್ಗೆ ಅಸಡ್ಡೆ ಧೋರಣೆ ತೋರುತ್ತಿರುವುದು ವಿಷಾದನೀಯ" ಎಂದು ತೀವ್ರ ಅಸಾಮಾಧನ ಹೊರಹಾಕಿದರು.

"ಬಡವರ ಕೆಲಸದ ಬಗ್ಗೆ ಅಧಿಕಾರಿ ವರ್ಗದಿಂದ ಈ ಮಟ್ಟದ ಅಸಡ್ಡೆಯನ್ನು ನಾನು ನಿರೀಕ್ಷಿಸಿರಲಿಲ್ಲ. ರಾಜ್ಯದ ಒಟ್ಟಾರೆ 14 ಲಕ್ಷ ರೈತರು ಬಗರ್ ಹುಕುಂ ಅಡಿ ಭೂ ಮಂಜೂರಾತಿ ಕೋರಿ ಅರ್ಜಿ ಸಲ್ಲಿಸಿದ್ದಾರೆ. ಆದರೆ, ಈ ಅರ್ಜಿಗಳ ಪೈಕಿ ಅರ್ಹ ಅರ್ಜಿ ಯಾವುದು? ಅನರ್ಹ ಅರ್ಜಿ ಯಾವುದು? ಎಂದು ಪರಿಶೀಲಿಸಲು ಅಧಿಕಾರಿಗಳಿಗೆ ಒಂದೂವರೆ ವರ್ಷ ಬೇಕಾ" ಎಂದು ಸಚಿವರು ಕಿಡಿಕಾರಿದರು. ಮುಂದುವರೆದು, "ಇದೇ ನವೆಂಬರ್ ತಿಂಗಳ 25 ರ ಒಳಗೆ ತಹಶೀಲ್ದಾರರು ಅರ್ಹ-ಅನರ್ಹ ಅರ್ಜಿಗಳನ್ನು ವಿಂಗಡಿಸಿ ಪಟ್ಟಿ ಮಾಡಿ ಜಿಲ್ಲಾಧಿಕಾರಿಗಳಿಗೆ ಸಲ್ಲಿಸಬೇಕು. ಎಲ್ಲಾ ಜಿಲ್ಲಾಧಿಕಾರಿಗಳು ನವೆಂಬರ್.26 ರ ಬೆಳಗ್ಗೆಯೇ ಇಡೀ ಜಿಲ್ಲೆಯ ಪಟ್ಟಿಯನ್ನು ಒಂದುಗೂಡಿಸಿ ನನಗೆ ಸಲ್ಲಿಸಬೇಕು. ಡಿಸೆಂಬರ್ ಮೊದಲ ವಾರದಲ್ಲಿ ಶಾಸಕರ ನೇತೃತ್ವದಲ್ಲಿ ಸಭೆ ನಡೆಸಿ ಅರ್ಹರಿಗೆ ಡಿಜಿಟಲ್ ಭೂ ಸಾಗುವಳಿ ಚೀಟಿ ನೀಡಬೇಕು" ಎಂದು ಅವರು ತಾಕೀತು ಮಾಡಿದರು. ರಾಜ್ಯಾದ್ಯಂತ ಬಗರ್ ಹುಕುಂ ಅಡಿ ಭೂ ಮಂಜೂರಾತಿ ಕೋರಿ 14ಲಕ್ಷಕ್ಕೂ ಅಧಿಕ ಅರ್ಜಿಗಳು ಸಲ್ಲಿಕೆಯಾಗಿವೆ.

ಈ ಪೈಕಿ ಅನರ್ಹ ಅರ್ಜಿಗಳ ಸಂಖ್ಯೆಯೇ ಅಧಿಕವಾಗಿದೆ. ಹೀಗಾಗಿ ಅರ್ಜಿಗಳನ್ನು ಅನರ್ಹ ಎಂದು ನಿರ್ಧರಿಸಲು ಕೆಲವು ಮಾನದಂಡಗಳನ್ನು ನಿಗದಿಪಡಿಸಲಾಗಿದೆ.ಅರ್ಜಿದಾರರು ನಿರ್ದಿಷ್ಟ ಪ್ರದೇಶದಲ್ಲಿ ಸಾಗುವಳಿ ಮಾಡುತ್ತಿಲ್ಲ, ನಿರ್ದಿಷ್ಟ ಪ್ರದೇಶದಲ್ಲಿ ಗೋಮಾಳ ಭೂಮಿ ಅಧಿಕ ಇಲ್ಲ, ಅರಣ್ಯ ಭೂಮಿಯನ್ನು ಕೋರಿ ಸಾಗುವಳಿಗೆ ಅರ್ಜಿ ಸಲ್ಲಿಸಿದ್ದರೆ, ಅರ್ಜಿದಾರರ ಹೆಸರಿನಲ್ಲಿ ಈಗಾಗಲೇ 4.38 ಎಕರೆಗೂ ಅಧಿಕ ಜಮೀನು ಇದ್ದರೆ, ಅರ್ಜಿದಾರರು ಭೂಮಿ ಕೋರಿ ಅರ್ಜಿ ಸಲ್ಲಿಸಿರುವ ಪ್ರದೇಶದಲ್ಲಿ ವಾಸ ಇಲ್ಲದಿದ್ದರೆ, ಅರ್ಜಿಯೇ ನಕಲು ಆಗಿದ್ದರೆ ಅಥವಾ ಅರ್ಜಿದಾರರು ಅಧಿಕಾರಿಗಳ ಕೈಗೆ ಸಿಗದಿದ್ದರೆ ಅಂತಹ ಅರ್ಜಿಗಳನ್ನು ಅನರ್ಹ ಎಂದು ಪರಿಗಣಿಸಲಾಗುವುದು. ಇದರ ಹೊರತಾಗಿ ಬೇರೆ ಸ್ವರೂಪದ ಸಮಸ್ಯೆಗಳು ಕಂಡುಬಂದರೆ ಅದನ್ನೂ ಸಹ ಪಟ್ಟಿಮಾಡಿ ಜಿಲ್ಲಾಧಿಕಾರಿಗಳಿಗೆ ನೀಡುವಂತೆ ಸಚಿವ ಕೃಷ್ಣ ಬೈರೇಗೌಡ ಅವರು ತಹಶೀಲ್ದಾರರಿಗೆ ಸೂಚಿಸಿದರು.

**ಮಾಲೂರು ತಹಶೀಲ್ದಾರರಿಗೆ ನೋಟೀಸ್:**-ಬಗರ್ ಹುಕುಂ ಅರ್ಜಿ ವಿಲೇ ಕೆಲಸದಲ್ಲಿ ಅಸಡ್ಡೆ ತೋರಿದ ಮಾಲೂರು ತಾಲೂಕು ತಹಶೀಲ್ದಾರ್ ರಮೇಶ್ ಅವರಿಗೆ ಶೋಕಾಸ್ ನೋಟೀಸ್ ನೀಡುವಂತೆ ಕಂದಾಯ ಇಲಾಖೆ ಪ್ರಧಾನ ಕಾರ್ಯದರ್ಶಿಗಳಾದ ರಾಜೇಂದ್ರ ಕುಮಾರ್ ಕಟಾರಿಯಾ ಅವರಿಗೆ ಸಚಿವ ಕೃಷ್ಣ ಬೈರೇಗೌಡ ಅವರು ಇಂದಿನ ಸಭೆಯಲ್ಲಿ ಸೂಚಿಸಿದರು.ಕೋಲಾರ ಜಿಲ್ಲೆ ಮಾಲೂರು ತಾಲೂಕಿನಲ್ಲಿ ಬಗರ್ ಹುಕುಂ ಅಡಿ ಭೂ ಮಂಜೂರಾತಿ ಕೋರಿ 10,771 ಅರ್ಜಿಗಳು ಸಲ್ಲಿಕೆಯಾಗಿವೆ.

ಆದರೆ, ಈವರೆಗೆ ಸ್ಥಳ ಪರಿಶೀಲನೆಗೊಂಡಿರುವ ಅರ್ಜಿಗಳ ಸಂಖ್ಯೆ ಕೇವಲ 55 ಮಾತ್ರ. ಹೀಗಾಗಿ ವಿಡಿಯೋ ಕಾನ್ಫರೆನ್ಸ್ ಸಭೆ ಆರಂಭವಾಗುತ್ತಿದ್ದಂತೆ ಸಚಿವ ಕೃಷ್ಣ ಬೈರೇಗೌಡ ಅವರು ಮಾಲೂರು ತಹಶೀಲ್ದಾರ್ ರಮೇಶ್ ಅವರ ಬಳಿ ಮಾತನಾಡಲು ಯತ್ನಿಸಿದರು. ಆದರೆ, ಅವರು ಸಭೆಗೆ ಒಂದು ಗಂಟೆ ತಡವಾಗಿ ಬಂದರು. ಅಲ್ಲದೆ, ಸಚಿವರ ಪ್ರಶ್ನೆಗಳಿಗೆ ಉತ್ತರಿಸಲೂ ತಡವರಿಸಿದರು. ಹೀಗಾಗಿ ಅವರಿಗೆ ಕೂಡಲೇ ಶೋಕಾಸ್ ನೋಟೀಸ್ ನೀಡುವಂತೆ ಸಚಿವರು ಸೂಚಿಸಿದರು.

ಉತ್ತಮ ಕೆಲಸ ಮಾಡುವವರಿಗೆ ಸನ್ಮಾನದ ಭರವಸೆ:-ಬಗರ್ ಹುಕುಂ ಬಡವರ ಕೆಲಸವಾಗಿದ್ದು, ಅತ್ಯುತ್ತಮವಾಗಿ ಕೆಲಸ ನಿರ್ವಹಿಸುವ ತಹಶೀಲ್ದಾರರುಗಳಿಗೆ ಪ್ರಶಂಸನೀಯ ಪತ್ರ ನೀಡಿ ಸನ್ಮಾನಿಸಲಾಗುವುದು ಎಂದು ಸಚಿವ ಕೃಷ್ಣ ಬೈರೇಗೌಡ ಅವರು ಭರವಸೆ ನೀಡಿದರು.

ಇಂದಿನ ಸಭೆಯಲ್ಲಿ ಉತ್ತರ ಕನ್ನಡ ಜಿಲ್ಲೆಯ ಶಿರಸಿ ತಾಲೂಕಿನ ತಹಶೀಲ್ದಾರ್ ಶ್ರೀಧರ್ ಶೇಖರ್ ಮುಂದಲಮನಿ ಹಾಗೂ ಮುಂಡಗೋಡು ತಾಲೂಕು ತಹಶೀಲ್ದಾರ್ ಮುಂಡಗೋಡು ಶಂಕರ್ ಗೌಡಿ ಅವರ ಪ್ರಶಂಸಿಸಿದ ಸಚಿವರು, "ಹಲವರು ಕೆಲಸ ಮಾಡಿ ಅಂದ್ರೆ ಬಗರ್ ಹುಕುಂ ಆಯಪ್ ಸಹಕರಿಸುತ್ತಿಲ್ಲ, ನೆಟ್ವರ್ಕ್ ಇಲ್ಲ ಎಂದು ಇಲ್ಲ ಸಲ್ಲದ ಕಾರಣ ನೀಡುತ್ತಾರೆ.

ಆದರೆ, ನೆಟ್ವರ್ಕ್ ಇಲ್ಲ ಗುಡ್ಡಗಾಡು ಅರಣ್ಯ ಪ್ರದೇಶದಲ್ಲಿ ಅಧಿಕಾರಿಗಳು ಹೇಗೆ ಶೇ.80ರಷ್ಟು ಬಗರ್ ಹುಕುಂ ಅರ್ಜಿ ವಿಲೇ ಮಾಡಲು ಸಾಧ್ಯವಾಯಿತು ಇಲ್ಲಿ ಸಾಧ್ಯವಾಗುವುದಾದರೆ ಬೇರೆ ತಾಲೂಕುಗಳಲ್ಲೂ ಏಕೆ ಸಾಧ್ಯವಿಲ್ಲ ಎಂದು ಪ್ರಶ್ನೆ ಮಾಡಿದ ಸಚಿವರು ಬಗರ್ ಹುಕುಂ ವಿಚಾರದಲ್ಲಿ ಉತ್ತಮ ಸೇವೆ ಸಲ್ಲಿಸುವ ಕಾಲಮಿತಿಯೊಳಗೆ ಅರ್ಜಿ ವಿಲೇಗೊಳಿಸುವ ಅಧಿಕಾರಿಗಳನ್ನು ಬೆಂಗಳೂರಿಗೆ ಖುದ್ದಾಗಿ ಕರೆದು ಮುಂದಿನ ತಿಂಗಳ ಸಭೆಯಲ್ಲಿ ಪ್ರಶಂಸನಾ ಪತ್ರ ನೀಡಿ ಸನ್ಮಾನಿಸಲಾಗುವುದು" ಎಂದು ಭರವಸೆ ನೀಡಿದರು.

## 108 ಸಿಬ್ಬಂದಿಗಳಿಗೆ ಸರ್ಕಾರದಿಂದ ವೇತನ ಬಾಕಿ ಉಳಿಸಿಕೊಂಡಿಲ್ಲ

# ಆರ್. ಅಶೋಕ್ ಅರೆಬರೆ ಮಾಹಿತಿ ಪಡೆದು ತಪ್ಪು ಮಾತನಾಡುವುದು ಸರಿಯಲ್ಲ: ದಿನೇಶ್ ಗುಂಡೂರಾವ್



**ಬೆಂಗಳೂರು, ನ, 14;** 108 ಆರೋಗ್ಯ ಕವಚದ ಅಂಬ್ಯುಲೆನ್ಸ್ ಚಾಲಕರಿಗೆ ಸರ್ಕಾರದ ಕಡೆಯಿಂದ ಯಾವುದೇ ವೇತನ ಬಾಕಿ ಉಳಿಸಿಕೊಂಡಿಲ್ಲ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಸ್ಪಷ್ಟಪಡಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಂಬ್ಯುಲೆನ್ಸ್ ಚಾಲಕರಿಗೆ ನ್ಯಾಯಯುತವಾಗಿ ಸಿಗಬೇಕಾದ ವೇತನವನ್ನ ಕಾಲ ಕಾಲಕ್ಕೆ ಸರಿಯಾಗಿ ಸಂಬಂಧಿಸಿದ ಏಜನ್ಸಿಯವರಿಗೆ ಸರ್ಕಾರ ನೀಡುತ್ತಾ ಬಂದಿದೆ ಎಂದರು.

ಚಾಲಕರ ವೇತನ ಬಾಕಿ ಉಳಿಸಿಕೊಳ್ಳದಂತೆ ಇ.ಎಂ.ಆರ್ ಏಜನ್ಸಿಯವರಿಗೂ ಕಟ್ಟುನಿಟ್ಟಾಗಿ ಆದೇಶಿಸಲಾಗಿದೆ. ಅಗಸ್ಟ್, ಸೆಪ್ಟೆಂಬರ್ ತಿಂಗಳ ವೇತನವನ್ನ ಏಜನ್ಸಿಯವರು ಚಾಲಕರಿಗೆ ಪಾವತಿ ಮಾಡಿದ್ದಾರೆ. ಅಕ್ಟೋಬರ್ ತಿಂಗಳ ವೇತನ ಪಾವತಿ ಕೂಡ ಪ್ರಗತಿಯಲ್ಲಿದ್ದು ಶೀಘ್ರದಲ್ಲಿ ಪಾವತಿಸುವಂತೆ ಸೂಚಿಸಲಾಗಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಸ್ಪಷ್ಟಪಡಿಸಿದರು.

ವಿಪಕ್ಷ ನಾಯಕರಾದ ಆರ್. ಅಶೋಕ್ ಅರೆಬರೆ ಮಾಹಿತಿ ಪಡೆದು ಅನಗತ್ಯ ಗೊಂದಲ ಸೃಷ್ಟಿಸುತ್ತಿದ್ದಾರೆ. ಒಬ್ಬ ವಿಪಕ್ಷ ನಾಯಕರಾಗಿ ವಾಸ್ತವಾಂಶ ಅರಿತು ಮಾತನಾಡಬೇಕು. 108 ಸಮಸ್ಯೆ ಆರಂಭವಾಗಿದ್ದೇ ಬಿಜೆಪಿ ಸರ್ಕಾರದ ಅವಧಿಯಲ್ಲಿ. ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಬಳಿಕ ಏಜನ್ಸಿ ಹಾಗೂ ಚಾಲಕರ ನಡುವಿನ ಸಮಸ್ಯೆಯನ್ನ ಇಲಾಖೆ ಮಧ್ಯಸ್ಥಿಕೆ ವಹಿಸಿ ಸರಿಪಡಿಸುತ್ತಿದೆ. ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲಿ 108 ವ್ಯವಸ್ಥೆಯಲ್ಲಿ ಒಂದಿಷ್ಟು ಲೋಪದೋಷಗಳು ಆಗಿರುವುದು ನಿಜ. 108 ಸಿಬ್ಬಂದಿಗಳಿಗೆ ಕನಿಷ್ಠಿ ವೇತನದ ಜಾರಿಗೊಳಿಸಿದ್ದಲ್ಲದೇ ಸರ್ಕಾರದ ಅನುಮತಿ ಇಲ್ಲದೇ ನಿಯಮಬಾಹಿರವಾಗಿ ಶೇ 45 ರಷ್ಟು ವೇತನ ಹೆಚ್ಚಳ ಮಾಡಲಾಗಿತ್ತು ಎಂದರು.

ಇದೀಗ 108 ಸಿಬ್ಬಂದಿಗಳು ಶೇ 45 ರಷ್ಟು ವೇತನ ಹೆಚ್ಚಳ ಮಾಡಿರುವುದನ್ನ ಕಡಿತಗೊಳಿಸದಂತೆ ಬೇಡಿಕೆ ಇಡುತ್ತಿದ್ದಾರೆ. ನಮ್ಮ ಸರ್ಕಾರ ನಿಯಮಾನುಸಾರ ಕನಿಷ್ಠ ವೇತನ ನೀಡಲು ಬದ್ಧವಾಗಿದ್ದು, ಅದರಂತೆ ಅನುದಾನವನ್ನ ನೀಡುತ್ತಾ ಬಂದಿದೆ. ಪ್ರತಿಯೊಬ್ಬ ಅಂಬ್ಯುಲೆನ್ಸ್ ಚಾಲಕರಿಗೆ 35 ಸಾವಿರಕ್ಕೂ ಹೆಚ್ಚು ವೇತನ ದೊರೆಯುತ್ತಿದೆ. ಇದರ ಮೇಲೂ ಮೂಲ ವೇತನದಲ್ಲಿ ಶೇ 45 ರಷ್ಟು ಹೆಚ್ಚಳ ಮಾಡುವ ಬಗ್ಗೆ ಸಿಬ್ಬಂದಿಗಳು ಬೇಡಿಕೆ ಇಟ್ಟಿದ್ದು, ನಿಯಮಬಾಹಿರವಾಗಿ ಈ ಕ್ರಮ ಕೈಗೊಳ್ಳಲು ಸದ್ಯದ ಪರಿಸ್ಥಿತಿಯಲ್ಲಿ ಸಾಧ್ಯವಿಲ್ಲ ಎಂದರು.

2024-25 ನೇ ಸಾಲಿನಲ್ಲಿ 108-ಆರೋಗ್ಯ ಕವಚ ಯೋಜನೆಗೆ ಆರ್ಥಿಕ ಇಲಾಖೆಯಿಂದ ಆರೋಗ್ಯ ಇಲಾಖೆಗೆ ರೂ. 260.33 ಕೋಟಿಗಳ ಅನುದಾನವನ್ನು ಆಯವ್ಯಯದಲ್ಲಿ ಅನುಮೋದನೆಯಾಗಿದ್ದು ಸೇವಾದಾರರೊಂದಿಗೆ ಮಾಡಿಕೊಂಡಿರುವ ಒಡಂಬಡಿಕೆಯನ್ವಯ ವಾರ್ಷಿಕ ರೂ. 162.40 ಕೋಟಿಗಳ ಅನುದಾನವನ್ನು ಬಿಡುಗಡೆಗೊಳಿಸಲಾಗುತ್ತಿದೆ. ಆರೋಗ್ಯ ಇಲಾಖೆ ಹಾಗೂ ಇ.ಎಂ.ಆರ್.ಐ ಗ್ರೀನ್ ಹೆಲ್ತ್ ಸಂಸ್ಥೆಯವರೊಂದಿಗೆ ಮಾಡಿಕೊಂಡಿರುವ ಒಡಂಬಡಿಕೆಯನ್ವಯ ಪ್ರತಿ ತ್ರೈಮಾಸಿಕಕ್ಕೆ 40.60 ಕೋಟಿಗಳಂತೆ ವಾರ್ಷಿಕ ರೂ. 162.40 ಕೋಟಿಗಳ ಅನುದಾನವನ್ನು ಕಾಲ ಕಾಲಕ್ಕೆ ಬಿಡುಗಡೆಗೊಳಿಸಲಾಗುತ್ತಿದೆ ಎಂದರು.


ಹಿಂದಿನ ಸರ್ಕಾರವಿದ್ದ ವೇಳೆ ವ್ಯವಸ್ಥೆಯಲ್ಲಾದ ಲೋಪವನ್ನ ನಮ್ಮ ಸರ್ಕಾರ ಸರಿಪಡಿಸುತ್ತಿದೆ. ಟೆಂಡರ್ ಗಳನ್ನ ಕರೆಯದೇ ಜಿವಿಕೆ ಇಎಂಆರ್ ಸಂಸ್ಥೆಯೊಂದಿಗೆ ಒಡಂಬಡಿಕೆಯ ಮೂಲಕವೇ 108 ವ್ಯವಸ್ಥೆಯನ್ನ ಮುಂದುವರಿಸಿಕೊಂಡು ಬರಲಾಗಿದೆ. ನಮ್ಮ ಸರ್ಕಾರ ಬಂದ ಬಳಿಕ ನಿಯಮನುಸಾರ ಟೆಂಡರ್ ಕರೆಯಲು ಕ್ರಮ ಕೈಗೊಳ್ಳುತ್ತಿದೆ. ವ್ಯವಸ್ಥೆಯಲ್ಲಾದ ಲೋಪಗಳನ್ನ ಸರಿಪಡಿಸುತ್ತಿರುವಾಗ ಸಿಬ್ಬಂದಿಗಳು ಸಹಕರಿಸಬೇಕು ಎಂದು ಸಚಿವ ದಿನೇಶ್ ಗುಂಡೂರಾವ್ ಇದೇ ವೇಳೆ ಮನವಿ ಮಾಡಿದ್ದಾರೆ.



ಬೆಂಗಳೂರಿನ ಜಿಕೆವಿಕೆಯಲ್ಲಿ ಗುರುವಾರ ಆರಂಭಗೊಂಡ ಕೃಷಿ ಮೇಳ ದಲ್ಲಿ ಕಂಡು ಬಂದ ದೃಶ್ಯ.

# ಒಕ್ಕಲಿಗರ ಬೆಂಬಲ ಇರೋ ವಂಶದ ಕುಡಿ ವಿರುದ್ಧ ನನ್ನ ಸ್ಪರ್ಧೆ: ಸಿ.ಪಿ.ಯೋಗೇಶ್ವರ್

**ರಾಮನಗರ, ನ.14–** ರಾಜ್ಯದಲ್ಲಿ ತೀವ್ರ ರಾಜಕೀಯ ಪೈಪೋಟಿ ಹಾಗೂ ಕುತೂಹಲಕ್ಕೆ ಕಾರಣವಾಗಿದ್ದ ಚನ್ನಪಟ್ಟಣ ವಿಧಾನ ಸಭಾ ಕ್ಷೇತ್ರದ ಉಪ ಚುನಾವಣೆಮುಗಿದಿದೆ. ಚುನಾವಣೆ ಬಳಿಕ ಕಾಂಗ್ರೆಸ್ ಅಭ್ಯರ್ಥಿ ಸಿಪಿ ಯೋಗೇಶ್ವರ್ ಅವರು ಪ್ರತಿಕ್ರಿಯೆ ನೀಡಿದ್ದು, ಉಪಚುನಾವಣೆ ಸಂಬಂಧ ನಾನು ಯಾವುದೇ ಕಾನ್ಫಿಡೆನ್ಸ್ ಕಳೆದು ಕೊಂಡಿಲ್ಲ. ದೈತ್ಯ ಶಕ್ತಿ, ಒಕ್ಕಲಿಗರ ಬೆಂಬಲ ಇರೋ ವಂಶದ ಕುಡಿ ವಿರುದ್ಧ ಸ್ಪರ್ಧೆ ಮಾಡಿದ್ದೇನೆ ಎಂದು ಹೇಳಿದ್ದಾರೆ.



ಒಂದು ಲಕ್ಷಕ್ಕಿಂತ ಅಧಿಕ ಮತ ಬೇಕುಈ ಕುರಿತು ಚನ್ನಪಟ್ಟಣದಲ್ಲಿರುವ ಮನೆಯಲ್ಲಿ ಸಿಪಿ ಯೋಗೇಶ್ವರ್ ಅವರು ಮಾತನಾಡಿದ್ದು, ಕಳೆದ ಚುನಾವಣೆ ಕಾಂಗ್ರೆಸ್ ಪಡೆದ ಮತ 15 ಸಾವಿರ ಆಗಿದೆ. ಆದರೆ ಈಗ ನಾವು ಒಂದು ಲಕ್ಷಕ್ಕಿಂತ ಅಧಿಕ ಮತ ಪಡೆದರೆ ಗೆಲುವು ನಮಗೆ ಸಿಗುತ್ತೆ. ಈವರೆಗೂ ನನ್ನ ಎಲ್ಲಾ ಚುನಾವಣೆಯಲ್ಲೂ 80ರಿಂದ 90 ಸಾವಿರ ಮತಗಳನ್ನು ಪಡೆಯುತ್ತಿದ್ದೆ. ಆದರೆ ಈಗ ನಾನು ಕಾಂಗ್ರೆಸ್ ಅಭ್ಯರ್ಥಿ ಆಗಿದ್ದೇನೆ. ಬಿಜೆಪಿ–ಜೆಡಿಎಸ್ ಎರಡು ಇಲ್ಲಿ ವರ್ಕ್ ಆಗಬಹುದು. ಹಾಗಾಂತ ನನಗೆ ಹತಾಶೆ ಇಲ್ಲ. ನಾನು ಕಾಂಗ್ರೆಸ್ ಸೇರುವ ಅನಿವಾರ್ಯ ಸ್ಥಿತಿಯನ್ನ ಕುಮಾರಸ್ವಾಮಿ ನಿರ್ಮಾಣ ಮಾಡಿದ್ದಾರೆ. ಆದ್ದರಿಂದ ನಾನು ಕಟ್ಟಿದ ಬಿಜೆಪಿ ಬಿಟ್ಟು ಕಾಂಗ್ರೆಸ್ಗೆ ಸೇರುವ ಪರಿಸ್ಥಿತಿ ಬಂತು ಎಂದು ಯೋಗೇಶ್ವರ್ತಿಳಿಸಿದ್ದಾರೆ.

ನನ್ನ ರಾಜಕೀಯ ಜೀವನ ಐಪಿಎಲ್ ಮ್ಯಾಚ್ ಆಗಿದೆ!ಚನ್ನಪಟ್ಟಣ ಉಪ ಚುನಾವಣೆ ಸಂಬಂಧನ ಹೇಳುವುದಾದರೆ, ಈಗ ಕಡಿಮೆ ಸಮಯದಲ್ಲಿ ನಾನು ಸಂಘಟನೆ ಮಾಡಿದ್ದೇನೆ. ನನ್ನ ರಾಜಕೀಯ ಜೀವನ ಒಂಥರಾ ಐಪಿಎಲ್ ಮ್ಯಾಚ್ ರೀತಿ ಆಗಿದೆ. ಒಂದೊಂದು ಸೀಸನ್ ನಲ್ಲಿ ಒಂದೊಂದು ಟೀಮ್ ನಲ್ಲಿ ಆಟ ಆಡುವಂತಾಗಿದೆ. ದೇವೇಗೌಡರು ಒಂದು ದೈತ್ಯ ಶಕ್ತಿ. ದೇವೇಗೌಡರಿಗೆ, ಕುಮಾರಸ್ವಾಮಿಗೆ ಬೈದರೆ ಸಹಿಸದ ಸಮುದಾಯ ಇದೆ. ಜನ ದೇವೇಗೌಡರು, ಕುಮಾರ ಸ್ವಾಮಿರನ್ನ ಮಾತ್ರ ಸಮುದಾಯದ ನಾಯಕ ಅಂತ ಗುರುತಿಸುತ್ತಾರೆ. ನಮ್ಮನ್ನ ಸಮುದಾಯದ ಲೀಡರ್ ಅಂತ ಯಾವಾಗ ಸ್ವೀಕಾರ ಮಾಡ್ತಾರೋ ಗೊತ್ತಿಲ್ಲ ಎಂದು ಸಿಪಿ ಯೋಗೇಶ್ವರ್ ಹೇಳಿದ್ದಾರೆ.

ಕಾಂಗ್ರೆಸ್ ಸಚಿವರ ಜಮೀರ್ ಅಹ್ಮದ್ ಖಾನ್ ಹೇಳಿಕೆಯಿಂದ ಒಕ್ಕಲಿಗ ಬೆಲ್ಟ್ ಫುಲ್ ಟೈಟ್ ಆಗಿದ್ದು, ಎಚ್ಡಿ ದೇವೇಗೌಡರ ಪ್ರಚಾರದಿಂದ ನಿಖಿಲ್ಗೆ ಪ್ಲಸ್ ಆಗಲಿದೆ. ಜಮೀರ್ ಕುಮಾರಸ್ವಾಮಿ ಬಗ್ಗೆ ನಿಂದನಾತ್ಮಕ ಹೇಳಿಕೆ ನೀಡಿರೋದು ಕೂಡ ನಿಖಿಲ್ ಪ್ಲಸ್ ಆಗುವ ಸಾಧ್ಯತೆ ಇದೆ. ಈ ಲೆಕ್ಕಾಚಾರದಿಂದ ನಿಖಿಲ್ ಕುಮಾರಸ್ವಾಮಿಗೆ ಸಾಧರಣ ಗೆಲುವು ಸಿಗುವ ಸಾಧ್ಯತೆ ಇದೆ ಎಂದು ಹೇಳಲಾಗುತ್ತಿದೆ. ಇನ್ನು ಮುಸ್ಲಿಂ ಮತದಾರರು ಭಾಗಶಃ ಕಾಂಗ್ರೆಸ್ ಕಡೆಗೆ ಒಲವು ತೋರಿಸಿದ್ದು, ಮತ್ತೊಂದು ಕಡೆ ಒಕ್ಕಲಿಗ, ಲಿಂಗಾಯತ, ಬ್ರಾಹ್ಮಣ ಸೇರಿ ಮೇಲ್ವರ್ಗದ ಸಣ್ಣ ಜಾತಿಗಳ ಬಲ ಜೆಡಿಎಸ್ಗೆ ಸಿಗಲಿದೆ. ಇದರಿಂದಾಗಿ ನಿಖಿಲ್ ಗೆಲುವಿಗೂ ಚಾನ್ಸ್ ಇದೆ ಎಂಬ ಲೆಕ್ಕಾಚಾರ ಹಾಕಲಾಗಿದೆ. ಒಟ್ಟಿನಲ್ಲಿ ನವೆಂಬರ್ 23ರಂದು ಯಾರ ಗೆಲುವು. ಯಾರ ಸೋಲು ಎಂಬ ಭವಿಷ್ಯ ನಿರ್ಧಾರವಾಗಲಿದೆ. ದಳಪತಿ–ಡಿಕೆ ಬ್ರದರ್ಸ್ಗೆ ಪ್ರತಿಷ್ಠೆಯ ಕಣವಾಗಿರುವ ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದಲ್ಲಿ ಎನ್ಡಿಎ ಅಭ್ಯರ್ಥಿ ನಿಖಿಲ್ ಕುಮಾರಸ್ವಾಮಿ ಮತ್ತು ಕಾಂಗ್ರೆಸ್ ಅಭ್ಯರ್ಥಿ ಸಿಪಿ ಯೋಗೇಶ್ವರ್ ಮಧ್ಯೆ ನೇರ ಹಣಾಹಣಿ ನಿರ್ಮಾಣವಾಗಿದೆ.

## ನ. 17 ರಿಂದ 24 ರ ವರೆಗೆ ಐ.ಟಿ.ಎಫ್. ಕ್ರೀಡಾಕೂಟ

# ಸೂಕ್ತ ವ್ಯವಸ್ಥೆ: ಸಮಿತಿ ಮುಖ್ಯಸ್ಥರಿಗೆ ಜಿಲ್ಲಾಧಿಕಾರಿ ಫೌಜಿಯಾ ತರನ್ನುಮ್ ಸೂಚನೆ

**ಕಲಬುರಗಿ, ನ.14–** ಪ್ರತಿಷ್ಠಿತ ಅಂತರಾಷ್ಟ್ರೀಯ ಐ.ಟಿ.ಎಫ್. 2024 ಪಂದ್ಯಾವಳಿಯನ್ನು ನಗರದ ಚಂದ್ರಶೇಖರ ಪಾಟೀಲ್ ಜಿಲ್ಲಾ ಕ್ರೀಡಾಂಗಣದಲ್ಲಿ ಇದೆ ತಿಂಗಳು ನವೆಂಬರ್ 17 ರಿಂದ 24 ರವರೆಗೆ ನಡೆಯಲಿದ್ದು, ಕ್ರೀಡಾಕೂಟವನ್ನು ಜಿಲ್ಲಾಡಳಿತದಿಂದ ನಡೆಸಲು ಹಲವಾರು ಪೂರ್ವ ಸಿದ್ಧತೆ ಕ್ರಮ ಕೈಗೊಳ್ಳಲು ಸಮಿತಿಯ ಮುಖ್ಯಸ್ಥರಿಗೆ ಜಿಲ್ಲಾಧಿಕಾರಿ ಬಿ ಫೌಜಿಯಾ ತರನ್ನುಮ್ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಹಲ ವಾರು ಸಮಿತಿಗಳನ್ನು ರಚಿಸಿದ್ದು. ಸಮಿತಿಗಳ ಪ್ರಕಾರ ಏನೇನೋ ಕೆಲಸಗಳಾಬೇಕು ಪೂರ್ವ ಸಿದ್ಧತೆ ಬಗ್ಗೆ ಸಂಬಂಧಿಸಿದ ಅಧಿಕಾರಿಗಳಿಗೆ ಕೆಲಸ ಮಾಡು ವಂತೆ ಖಡಕ ಸೂಚನೆ ನೀಡಿದರು.

# ಆಧ್ಯಾತ್ಮಿಕ ಅನುಭೂತಿಯ ಪ್ರತ್ಯಕ್ಷಾನುಭವ ನೀಡಿದ ವಿಶಿಷ್ಟ ರಂಗರೂಪ – ಅದ್ವೈತ ಭಾಸ್ಕರ ಶಂಕರ

ಕರ್ನಾಟಕಕ್ಕೆ ತನ್ನದೇ ಆದ ವಿಶಿಷ್ಟ ಸಾಂಸ್ಕೃತಿಕ, ಸಾಹಿತ್ಯ, ಐತಿಹಾಸಿಕ, ಆಧ್ಯಾತ್ಮಿಕ ಪರಂಪರೆ ಇದೆ. ಕರ್ನಾಟಕದ ಹಿರಿಮೆ –ಗರಿಮೆಗಳನ್ನು ತಮ್ಮ ತಮ್ಮ ಕ್ಷೇತ್ರಗಳಲ್ಲಿ ಪ್ರತಿಬಿಂಬಿಸಿ ಪ್ರಾತಃಸ್ಮರಣೀಯರಾಗಿರುವ ಎಲ್ಲ ಪೂಜನೀಯರ ಬದುಕು, ಸಾಧನೆ, ಸಂದೇಶಗಳನ್ನು ಅರಿಯಬೇಕು ಹಾಗೂ ಅಧ್ಯಯನ ಮಾಡಬೇಕು. ಇದು ನಮ್ಮೆಲ್ಲರಿಗೂ ಸ್ಫೂರ್ತಿಯ ಸೆಲೆಯಾಗಿ ನಮ್ಮ ಮುಂದಿನ ಪೀಳಿಗೆಗೆ 'ಕರ್ನಾಟಕದ ಭವ್ಯ ಸಾಂಸ್ಕೃತಿಕ ಪರಂಪರೆಯನ್ನು ಪರಿಚಯಿಸಿ, ಅವರೂ ಉತ್ತಮ ಸಂಸ್ಕಾರ ಹಾಗೂ ಚಾರಿತ್ರ್ಯವನ್ನು ಹೊಂದುವಂತಾಗಬೇಕು. ಇದೇ ನಾವು ನಮ್ಮ ನಾಡು, ನುಡಿಗೆ ಸಲ್ಲಿಸುವ ನಮ್ಮ ಉತ್ತಮ ಕೈಂಕರ್ಯ ಎಂದು ವಿದ್ಯಾವಾಚಸ್ಪತಿ ಡಾ. ಅರಳುಮಲ್ಲಿಗೆ ಪಾರ್ಥಸಾರಥಿಯವರು ಶ್ರೀಕೃಷ್ಣ ವಿದ್ಯಾಸಂಸ್ಥೆಯ ಸಭಾಂಗಣದಲ್ಲಿ ಏರ್ಪಸಿದ್ದ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಂಡ ಎಲ್ಲರಲ್ಲೂ ಮನವಿ ಮಾಡಿದರು. ಇಂಥ ಕಾರ್ಯಕ್ರಮಗಳಿಗೆ ಪ್ರೋತ್ಸಾಹ ನೀಡುತ್ತಿರುವ ಡಾ.ರುಕ್ಮಾಂಗದ ನಾಯ್ದುರವರನ್ನೂ ಹಾಗೂ ವಿಶೇಷ ರಂಗರೂಪಕಗಳನ್ನು ಪ್ರದರ್ಶಿಸುತ್ತಿರುವ ಡಾ.ವಿ.ನಾಗರಾಜ್‌ರವರನ್ನೂ ಅಭಿನಂದಿಸಿದರು.





ಶ್ರೀವಿವೇಕಾನಂದ ಕಲಾಕೇಂದ್ರದವರು ಇದೇ ಉದ್ದೇಶವನ್ನಿಟ್ಟುಕೊಂಡು ಭಕ್ತಿಪೂರ್ವವಾಗಿ ಪ್ರಸ್ತುತಪಡಿಸಿದ ವಿನೂತನ 'ಅದ್ವೈತ ಭಾಸ್ಕರ ಶಂಕರ? ಹಾಗೂ 'ಚೆಲುವ ಕನ್ನಡ ನಾಡು ರಂಗರೂಪಕಗಳು ಅದ್ಭುತವಾಗಿ ಮೂಡಿಬಂದು, ಸಭಾಂಗಣದಲ್ಲಿ ನೆರೆದಿದ್ದ ಎಲ್ಲರಲ್ಲೂ ವಿಶಿಷ್ಟ ಆಧ್ಯಾತ್ಮಿಕ ಅನುಭೂತಿಯ ಪ್ರತ್ಯಕ್ಷಾನುಭವವನ್ನು ನೀಡುವುದರಲ್ಲಿ ಯಶಸ್ವಿಯಾಯಿತು.

ಶಂಕರಾಚಾರ್ಯರ ಬಾಲ್ಯ, ಸಂನ್ಯಾಸ, ಸನಾನತ ಧರ್ಮದ ಪುನರುದ್ಧಾರ, ಅದಕ್ಕೆ ಸಂಬಂಧಪಟ್ಟಂತೆ ಅವರ ಬದುಕಿನಲ್ಲಿ ನಡೆದ



ಘಟನೆಗಳು, ಸವಾಲುಗಳು, ಭಾರತದಾದ್ಯಂತ ಅವರ ಸಂಚಾರ, ನಾಲ್ಕು ದಿಕ್ಕುಗಳಲ್ಲೂ ನಾಲ್ಕು ಮಠಗಳ ಸ್ಥಾಪನೆ. ಅದರ ಮೂಲಕ ಧರ್ಮಕಾರ್ಯ ಮಾತ್ರವಲ್ಲದೆ, ಜನತೆಯನ್ನು ಒಗ್ಗೂಡಿಸಿ, ಅವರಲ್ಲಿದ್ದ ಅಂಧಶ್ರದ್ಧೆ, ತಾಮಸ ಪ್ರವೃತ್ತಿಗಳನ್ನು ನಿರ್ಮೂಲನಗೊಳಿಸಿ, ಸಾತ್ವಿಕ ಗುಣಪದ್ಧತಿಗಳನ್ನು ಅಳವಡಿಸಿಕೊಳ್ಳಲು ಅನುವು ಮಾಡಿಕೊಟ್ಟರು. ಮನುಕುಲವೆಲ್ಲಾ ಒಂದೇ ಮೇಲು–ಕೀಳು ಭಾವನೆಗಳಿಂದ ಹೊರಬಂದು ಉತ್ತಮ ಸಂಸ್ಕಾರ ಪಡೆಯುವುದೇ ಅಹಂ ಬ್ರಹ್ಮಾಸ್ಮಿ ಎಂಬ ಶಂಕರರ ಅದ್ವೈತ ತತ್ತ್ವದ ಸಂದೇಶವನ್ನು ಸಾರುವಲ್ಲಿ ಈ ಪ್ರಯೋಗ ಸಾರ್ಥಕ್ಯತೆಯನ್ನು ಪಡೆಯಿತು.

ಶಂಕರಾಚಾರ್ಯರಾಗಿ ನವಯುವಕ ಗುಹಾನಂದಶರ್ಮ ಮತ್ತು ಆರ್ಯಾಂಭೆಯಾಗಿ ಇದೇ ಪಿಯು ಕಾಲೇಜಿನ ಕನ್ನಡ ಉಪನ್ಯಾಸಕಿ ಶ್ರೀಮತಿ ಜಯಶೀಲರವರು, ದೇವಿಯಾಗಿ ಶ್ರೀಮತಿ ಗೀತಾ, ಕಾಳಿಯಾಗಿ ವಿದ್ಯಾರ್ಥಿನಿ ಸಿಂಚನರವರ ಅದ್ಭುತ ಅಭಿನಯದೊಂದಿಗೆ, ಇತರ ಕಲಾವಿದರೆಲ್ಲರ ಪಾತ್ರನಿರ್ವಹಣೆ ಎಲ್ಲರ ಮೆಚ್ಚುಗೆಗೆ ಪಾತ್ರವಾಯಿತು. ಸಂದರ್ಭಾನುಸಾರ ಸುಮಧುರ ಹಾಗೂ ಸುಶ್ರಾವ್ಯವಾಗಿ ಮೂಡಿಬಂದ ಶಂಕರಾಚಾರ್ಯ ವಿರಚಿತ ಜ್ಞಾನಪ್ರದ ಶ್ಲೋಕಗಳು ಶ್ರೋತೃಗಳನ್ನು ಭಾವಪರವಶಗೊಳಿಸಿತು. ದೃಶ್ಯಾನುಸಾರದ ರಂಗಪರಿಕರಗಳು, ನೆರಳುಬೆಳಕಿನ ವ್ಯವಸ್ಥೆ, ಉತ್ತಮ ಪ್ರಸಾಧನ ಹಾಗೂ ಸಂಭಾಷಣಾ ನಿರ್ವಹಣ ಕೌಶಲ್ಯವೆಲ್ಲದರಲ್ಲೂ, ಡಾ|| ನಾಗರಾಜರವರ ಪರಿಕಲ್ಪನೆಯಲ್ಲಿ ಮೂಡಿಬಂದ ಈ ರಂಗರೂಪಕಗಳು 'ಅದ್ಭುತ ದೃಶ್ಯಕಾವ್ಯಗಳಾಗಿ ಮೂಡಿಬಂದು ಹಿರಿಯರು ಹಾಗೂ ಯುವಜನತೆಯಲ್ಲಿ ಸನಾತನ ಜಾಗೃತಿಯನ್ನು ಮೂಡಿಸುವಲ್ಲಿ ಯಶಸ್ವಿಯಾಯಿತು.

ವಿದ್ಯಾಪೀಠದಲ್ಲಿರುವ ಶ್ರೀಕೃಷ್ಣ ಅಂತರಾಷ್ಟ್ರೀಯ ವಿದ್ಯಾಸಂಸ್ಥೆಯಲ್ಲಿ ಈ ಕಾರ್ಯಕ್ರಮ ಆಯೋಜನೆಗೊಂಡಿತ್ತು.

ಸಂಸ್ಥೆಯ ಸಂಸ್ಥಾಪಕರಾದ ಡಾ|| ರುಕ್ಮಾಂಗದ ನಾಯ್ದು, ಆಡಳಿತಾಧಿಕಾರಿಗಳಾದ ಶ್ರೀ ಮನೋಹರ್ ಹಾಗೂ ಪದವಿ ಕಾಲೇಜಿನ ಪ್ರಾಂಶುಪಾಲರಾದ ಡಾ|| ಉಷಾ ಹಾಗೂ ಬೋಧನವರ್ಗ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದು ಎಲ್ಲರು ತಲ್ಲೀನರಾಗಿ ವೀಕ್ಷಿಸಿ, ಮನಸಾರೆ ಮೆಚ್ಚಿದರು.

– ಡಾ|| ಮುರಳೀಧರನ್

# ವಿವಿಧ ಕಾಮಗಾರಿಗಳಿಗೆ ಚಾಲನೆ ನೀಡಿದ ಶಾಸಕ ನಾರಾ ಭರತ್ ರೆಡ್ಡಿ

**ಬಳ್ಳಾರಿ, ನ.14–** ಅಲ್ಪಸಂಖ್ಯಾತರ ಕಾಲೋನಿಗಳ ಮೂಲಭೂತ ಸೌಕರ್ಯ ಕಲ್ಪಿಸುವ ಉದ್ದೇಶದಿಂದ ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿಯವರು ವಿವಿಧ ವಾರ್ಡ್'ಗಳಲ್ಲಿ ಕಾಮಗಾರಿಗಳಿಗೆ ಭೂಮಿ ಪೂಜೆ ನೆರವೇರಿಸುವ ಮೂಲಕ ಚಾಲನೆ ನೀಡಿದರು. ಅಂದಾಜು ಒಟ್ಟು 5 ಕೋಟಿ ರೂ.ಗಳ ವಿವಿಧ ಕಾಮಗಾರಿಗಳಿಗೆ ಗುರುವಾರ ನಗರದ ವಿವಿಧ ವಾರ್ಡ್'ಗಳಲ್ಲಿ ಚಾಲನೆ ನೀಡಲಾಯಿತು.

ಮೊದಲಿಗೆ ವಾರ್ಡ್ ನಂ.04ರ ಗುಗ್ಗರಹಟ್ಟಿಯಲ್ಲಿ 95.70 ಲಕ್ಷ ರೂ.ಗಳ ಸಿಸಿ ರಸ್ತೆ ಕಾಮಗಾರಿಗೆ ಚಾಲನೆ ನೀಡಲಾಯಿತು.ನಂತರ ವಾರ್ಡ್ ನಂ.6ರ ಗರೀಬ್ ನವಾಜ್ ಕಾಲೋನಿಯಲ್ಲಿ



ಅಂದಾಜು ವೆಚ್ಚ 82.32 ಲಕ್ಷ ರೂ.ಗಳ ಕಾಮಗಾರಿಗೆ ಚಾಲನೆ ನೀಡಲಾಯಿತು. ಅದೇ ರೀತಿ 14ನೇ ವಾರ್ಡ್ ನ ಮಿಲ್ಲರ್ ಪೇಟೆಯಲ್ಲಿ ಸಿಸಿ ರಸ್ತೆ ಮತ್ತು ಚರಂಡಿ ಕಾಮಗಾರಿಗೆ (ಅಂದಾಜು 52.45 ಲಕ್ಷ ರೂ.ಗಳು) ಚಾಲನೆ ನೀಡಲಾಯಿತು.

ವಾರ್ಡ್ ನಂ.9 ವೆಂಕಟರಮಣ ಕಾಲೋನಿಯಲ್ಲಿ ಅಂದಾಜು ವೆಚ್ಚ 35.58 ಲಕ್ಷ ರೂ.ಗಳ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಲಾಯಿತು.


ವಾರ್ಡ್ ನಂ.17ರ ಅಂಜಿನಪ್ಪ ನಗರದಲ್ಲಿ ಅಂದಾಜು ವೆಚ್ಚ 182.83 ಲಕ್ಷ ರೂ.ಗಳ ಸಿಸಿ ರಸ್ತೆ, ಒಳ ಹಾಗೂ ಹೊರ ಚರಂಡಿ ಕಾಮಗಾರಿಗೆ ಚಾಲನೆ ನೀಡಲಾಯಿತು.ವಾರ್ಡ್ ನಂ.15 ಇಲಾಹಿ ಬೀದಿಯಲ್ಲಿ ಅಂದಾಜು ವೆಚ್ಚ 14.72 ಲಕ್ಷ ರೂ.ಗಳ ಸಿಸಿ ರಸ್ತೆ ಕಾಮಗಾರಿಗೆ ಚಾಲನೆ ನೀಡಲಾಯಿತು.

# ಗುರುವೇ ಸರ್ವಸ್ವವೆಂದ ಅಸಾಮಾನ್ಯರ ಗುರು ಗುರುನಾನಕ್

ಕರುಣೆಯೇ ಮಸೀದಿ ಭಕ್ತಿಯೇ ಚಾಪೆ ಸಹನೆ ಸನ್ನಡತೆಗಳೇ ಉಪವಾಸ ನಡೆವ ಒಳ್ಳೆಯ ದಾರಿ ,ಕೃತಿಯೇ ಕಾಬಾ ಯಾತ್ರೆ ಪ್ರಾರ್ಥನೆಯೇ ಜಪಮಣಿ ಎಂದು ಜಗತ್ತಿಗೇ ಸತ್ಯದ ಅರಿವು ಮೂಡಿಸಿ ಮೌಢ್ಯವ ತೊಲಗಿಸಲು ಸದಾ ಟೊಂಕ ಕಟ್ಟಿ ನಿಂತು.

ಎಲ್ಲರೊಳು ತಾನೊಬ್ಬನಾಗಿ ಜಗವೆಲ್ಲ ಹೆಪ್ಪುಗಟ್ಟಿದ ಜಾತಿ ಧರ್ಮದ ಸರಪಳಿಯ ಕಳಚಿ ಸಮಾನತೆಯ ಸಾರುತ ಎಲ್ಲ ಧರ್ಮಿಯರೊಡನೆ ಅರಿತು ಬೆರೆತು ವಿವಿಧ ವಿಷಯಗಳನು ಚಿಂತನೆಗೆ ಒಳಪಡಿಸಿ ಮಾನವೀಯ ನೆಲೆಗಟ್ಟಿನಲ್ಲಿ ನಿಲುವನ್ನು ನೇರವಾಗಿ ಸ್ಪಷ್ಟಪಡಿಸುತ ಜನರಿಗೆ ಬದುಕಿನ ಸೂತ್ರಗಳನ್ನು ಹೇಳುತ ಡಂಭಾಚಾರಗಳನ್ನು ಖಂಡಿಸುತ ನೈಜತ್ವ ಅರಿಕೆ ಮಾಡಿ ಜನಮಾನಸದಿ ನೆಲೆಯಾಗಿ ನಿಂತ ಮಹಾನ ಸಂತ ಸಹಾನುಭೂತಿ ಧೈರ್ಯಶಾಲಿ ಮರ್ಧದ ಸಂಸ್ಥಾಪಕ ಗುರು ನಾನಕ್ ರು.

ಬಾಲ್ಯದಿಂದಲೇ ಎಲ್ಲರೊಡನೆ ಬೆರೆತು ಕೂಡಿ ನಲಿಯುತ ಅದರಲ್ಲಿಯೂ ಹಿಂದೂ ಮುಸ್ಲಿಂ ಮಕ್ಕಳೊಂದಿಗೆ ಆತ್ಮೀಯ ಒಡನಾಟ ಬೆಸೆಯಿತು.ಜೊತೆಗೆ ಆ ಧರ್ಮಗಳು ಇವರ ಮೇಲೆ ಪ್ರಭಾವ ಬೀರಿ ಇವರನ್ನು ಚಿಂತನಾಶೀಲತೆಯತ್ತ ವಾಲಿಸಿ ತಮ್ಮೊಳಗೆ ಪ್ರಶ್ನಿಸಿಕೊಳ್ಳುತ ತಮ್ಮದೇ ಆದ ಅಭಿಪ್ರಾಯವನ್ನು ವ್ಯಕ್ತಪಡಿಸುತ್ತಿದ್ದರು.ಜನರಿಗೆ ಸತ್ಯದ ಸಾಕ್ಷಾತ್ಕಾರ ಮಾಡಿಸುತ ಕಥೆಗಳ ಮೂಲಕ ಅವರೊಳಗೆ ಸತ್ಯದ ದರ್ಶನ ಮಾಡಿಸುತ್ತಿದ್ದರು.ಒಂದು ಕಥೆ ನೆನಪಾಗುತ್ತೆ.ಒಮ್ಮೆ ಒಬ್ಬ ಶ್ರೀಮಂತನ ಮನೆಗೆ ನಾನಕ್ ರು ತೆರಳಿರುತ್ತಾರೆ. ಆಗ ಅವನಿಗೆ ಸೂಜಿಯನ್ನು ನೀಡಿ ನಿಮ್ಮ ಬಳಿ ಇಟ್ಟುಕೊಳ್ಳಿ ಆಮೇಲೆ ಸ್ವಲ್ಪ ದಿನಗಳ ನಂತರ ಮರಳಿ ಕೊಡುವಿರಂತೆ ಎಂದು ನಿರ್ಗಮಿಸಿದರು ನಾನಕ್.ನಂತರ ಅವನ ಹೆಂಡತಿ ಇದನ್ನೆಕ್ಕೆ ಇಟ್ಟುಕೊಂಡಿರಿ ಅವನು ಮುದುಕ ಸತ್ತರೆ ನೀವು ಶಾಶ್ವತವಾಗಿ ಅವನ ಋಣದಲ್ಲಿ ಇದ್ದಂತೆ ಎಂದು ಹೇಳಿದಾಗ ತಡವರಿಸಿ



ನಾನಕ್ ರನ್ನು ಅರಿಸಿ ಹೋದ ಸಿಕ್ಕ ಮೇಲೆ ಇದನ್ನು ನಾನು ಒಯ್ಯಲು ಬಯಸುವುದಿಲ್ಲ ನೀನು ಮುದುಕ ಸತ್ತರೆ ಸಾಲದ ಹೊರೆ ನನ್ನ ಮೇಲಿರುತ್ತದೆ ತೆಗೆದುಕೊಳ್ಳಿ ಇದನ್ನು ಎಂದಾಗ ನಾನಕ್ ರು ಹೇಳುತ್ತಾರೆ"ಸೂಜಿ ಸ್ವರ್ಗಕ್ಕೆ ಒಯ್ಯಲು ಸಾಧ್ಯವಿಲ್ಲ ಎಂದು ನಿನಗೆ ಗೊತ್ತಾಗಿದೆ ತಾನೇ ಹಾಗೆ ನೀವು ಶೇಖರಿಸುತ್ತಿರುವ ಇತರ ವಸ್ತುಗಳು ಬಗ್ಗೆ ನಿನ್ನ ನಿಲುವೇನು ಎಂದಾಗ ವ್ಯಕ್ತಿಗೆ ಅರಿವಾಗ ನಾನಕ್ ರ ಚರಣಕೆ ಎರಗಿ ನಂತರ ಮನೆಗೆ ತೆರಳಿ ತನಗೆ ಬೇಕಾದದ್ದನ್ನು ಇಟ್ಟುಕೊಂಡು ಉಳಿದದ್ದನ್ನು ಸಮಾಜದ ಜನರಿಗೆ ನೀಡಲು ಹೋದನು.ಇದು ಒಂದು ಕಥೆಯೇ ಗುರುನಾನಕ್ ರ ಚಿಂತನೆ,ತತ್ವ,ಆಲೋಚಿಸುವ ರೀತಿ,ಬೋಧನೆಗಳು ಮಹಾನ್ ಸಮಾಜದ ಹಿತ ಚಿಂತಕ ಎಂಬುದು ಸ್ಪಷ್ಟ.

ಮಾನವ ತನ್ನತನದ ಬಗ್ಗೆ ಯೋಚಿಸುತ್ತ ಕುಳಿತರೆ ಸಮಾಜ ಮತ್ತು ರಾಷ್ಟ್ರಕ್ಕೆ ವಿಪತ್ತು ಕಟ್ಟಿಟ್ಟ ಬುತ್ತಿ .ಪ್ರಪಂಚ ವಿರಳ ಸಂಪನ್ಮೂಲ ಹೊಂದಿದ್ದು ತನಗೆ ಬೇಕಾದಷ್ಟೂ ಮಾತ್ರ ಬಳಸಿ ಉಳಿದದ್ದು ಸಮಾಜಕ್ಕೆ ಅರ್ಪಿಸಿದರೆ ಯಾವ ನೋವು ಕಲಹವೂ ಬಾರದು.ನನ್ನ ಸಾಮರ್ಥ್ಯ ನನ್ನನ್ನು ಅಲ್ಲದೆ ಇತರರಿಗೂ ವಿನಿಯೋಗವಾಗಿ ಸಕಲರ ಯೋಗಕ್ಷೇಮಕ್ಕೆ ಉಪಯೋಗಿಸಬೇಕು ಇಲ್ಲದಿರೆ ಲೋಕಕ್ಕೆ ಆಪತ್ತು.ಈ ಜಗದಲ್ಲಿ ನಿಜವಾಗಿಯೂ ಸುನಾಮಿ ಭೂಕಂಪ ಯಾವುದು ಇಲ್ಲ ಇವೆಲ್ಲವೂ ಮಾನವನ ಅತಿರೇಕ ಅಜ್ಞಾನ. ಅಜ್ಞಾನವೇ ವಿಪತ್ತು ಜ್ಞಾನವೇ ಎಲ್ಲಕ್ಕೂ ಪರಿಹಾರ ಎಂದು ಜಗತ್ತಿನ ಕಣ್ಣು ತೆರೆಸಿದ ಮಹಾಚೇತನರು ನಾನಕ್ ರು.

ಇವರು ಏಪ್ರಿಲ್ 15 1469ರಲ್ಲಿ ರಾವಿಯಲ್ಲಿ ಜನಿಸಿದರು ಬಾಲ್ಯದಲ್ಲೇ ತುಂಬಾ ಜಾಣ ರಾಗಿದ್ದು, ಓದುವಾಗಲೇ ಅದರ ಅರ್ಥ,ಪದ್ಯದ ಭಾವ ಎಲ್ಲವನು ತಟ್ಟನೆ ಗ್ರಹಿಸುವ ಸಾಮರ್ಥ್ಯ ಬಲು ಚುರುಕಾಗಿತ್ತು.ಆದರೆ ಶಾಲೆಯನು ಸರಿಯಾಗಿ ಕಲಿಯದೆ ಅತ್ತ ಇತ್ತ ಕಾಡಲ್ಲಿ ಅಲೆಯುತ್ತ ಧನಗಳನ್ನು ಕಾಯುತ್ತ ಪದ್ಯಗಳನ್ನು ಹಾಡುತ್ತಿದ್ದರು.ಯಾವುದೇ ಕಾರ್ಯವನ್ನು ಗಮನವಿಟ್ಟು ಮಾಡುತ್ತಿರಲಿಲ್ಲ ತನ್ನದೇ ಯಾದ ಕಲ್ಪನಾ ಲೋಕದಲ್ಲಿ ಸಂಚರಿಸುತ್ತಾ ಯೋಚನೆಯಲ್ಲಿ ತೊಡಗುತ್ತಿದ್ದರು.ಹೀಗೆ ಪ್ರತಿಯೊಂದರಲ್ಲಿ ಅರ್ಥವ ಹುಡುಕಿದರೂ ದೊರೆಯದಿದ್ದರೆ ಪ್ರಶ್ನಿಸುತ್ತಿದ್ದರು.ಮದುವೆ ಆದ ಮೇಲಾದರೂ ಪ್ರಶ್ನಿಸುವುದ ಬಿಡಬಹುದೆಂದು ಮದುವೆ ಮಾಡಿದರೂ ಸಂಸಾರ ಸಾಗಿಸಲು ದುಡಿಮೆಗಾಗಿ ಅಂಗಡಿ ಇಟ್ಟಿಕೊಟ್ಟರೂ ಬಡವರಿಗೆ ದಾನ ಮಾಡಿದ .ಹೀಗೆ ಊರು ಬಿಟ್ಟು ತೆರಳಿ ಲೋಕವ ಸುತ್ತುತ್ತ ನಡೆದರು.

ಗುರುವೇ ಎಲ್ಲವೂ ಗುರುವಿನಿಂದಲೆ ಸರ್ವಸ್ವವೂ ಎನ್ನುತ್ತ ಗುರು ಪರಂಪರೆಯ ಹಾದಿಯಲ್ಲಿ ತಮ್ಮ ಬದುಕನು ರೂಪಿಸಿಕೊಳ್ಳುತ (10 ಗುರುಗಳು) ಗುರುಗಳ ಸಮೂಹದಿಂದಲೇ ಜಗತ್ತಲ್ಲಿ ತಲೆ ಎತ್ತಿ ನಿಂತು ಗುರುವಿನ ಮಹತ್ವ ಶಕ್ತಿಯನ್ನು ಅರಿಯುತ ಸ್ಥಾಪಿತವಾದದ್ದೇ ಸಿಖ್ ಪಂಥ.ಗುರುವೇ ಜಗದ ನಿರ್ಮಾತೃ ಗುರುವನ್ನೇ ಮಾನವ ಸ್ವರೂಪಿಯನ್ನಾಗಿ ನಂಬಿದ ಪಂಥದ ಸ್ಥಾಪಕರು.ಬದುಕಿನ ಹೊಸ ಹಾದಿಯಲಿ ಸಾಗುತ ಆಶಯಗಳನ್ನು ಜನರಲ್ಲಿ ಬಿತ್ತುತ್ತ ದೇವರು– ಗುರು ಒಂದೇ ಎಂದು ಹೇಳುತ ಗುರುವನ್ನು ನೆನೆದರೆ ಸಾಕು ಎಲ್ಲವೂ ಕಣ್ಣು ಮುಂದೇನೆ ದರ್ಶನವಾಗುತ್ತೆ ಎಂದರು.ಒಟ್ಟು ಹತ್ತು ಜನ ಗುರುಗಳ ಬೋಧನೆಗಳನ್ನು ಒಳಗೊಂಡ ಅತ್ಯಮೂಲ್ಯ ಅನುಭಾವಿಕ ಕೃತಿಯೇ "ಗುರುಗ್ರಂಥ ಸಾಹೇಬ್"ಇವರ ಪರಮ ಗುರುವಿದು.ಇದು ಸಕಾಲ ಧರ್ಮಗಳ ವಿಚಾರಗಳನ್ನು,ಎಲ್ಲ ವರ್ಗದ ಜನರ ನಿಲುವುಗಳು,ಸಿಖ್ ಗುರುಗಳ ಬದುಕಿನಾಮೃತ ಉಣಿಸುವ ಪದ್ಯಗಳು ಜೊತೆಗೆ ಹಿಂದೂ ಮುಸ್ಲಿಂ ಸನ್ಯಾಸಿಗಳ ಅಭಿಪ್ರಾಯಗಳನ್ನು ಒಳಗೊಂಡಿರುವುದರಿಂದ ಇದು ಬಹಳ ಮಹತ್ವ ಪಡೆದುಕೊಂಡಿದೆ. ಇದೆಲ್ಲವೂ ಗುರುನಾನಕ್ ರ ಜೀವನವವನ್ನು ನಮಗೆಲ್ಲ ದಯಪಾಲಿಸುತ್ತದೆ.

ಬಾಬರ್ ದಾಳಿಯ ಸಂದರ್ಭದಲ್ಲಿ ಗುರುನಾನಕ್ ಮತ್ತು ಇವರ ಗೆಳೆಯರನ್ನು ಬಂಧಿಸಿದ್ದರು.ಇವರು ನಿತ್ಯ ಹಾಡುತ ಹಾಡಿನ ಸಾಗರವನ್ನೇ ಹರಿಸಿದ್ದಕ್ಕೆ ಬೆರಗಾಗಿ ಅಧಿಕಾರಿ ಇವರ ಮಹಿಮೆ ಅರಿತು ಬಿಡುಗಡೆಗೊಳಿಸಿ ಕರ ಮುಗಿದನು.ಇದು ಗುರುನಾನಕ್ ರ ದೈವ ಸ್ವರೂಪ ದರ್ಶನಕ್ಕೆ ಸಾಕ್ಷಿ ಘಟನೆ.

ಸಮಾಜ ಉದ್ಧರಿಸುತ, ಗುರುವೇ ಸಕಲ ಸಂಪದವು,ಗುರುವೇ ಬದುಕು ಎಂದು ಬದುಕಿ ಬಾಳಿ ಎಲ್ಲ ಧರ್ಮಿಯರಿಗೆ ಜೀವನದ ಪಾಠ ಕಲಿಸಿದ ಸಮಾಜದ ಸಂತ.ಇವರ ನೆನಪಿಗೆ ಹಿಂದೂ ಮುಸ್ಲಿಮರು ಒಗ್ಗಟ್ಟಿನಿಂದ ರಾವಿ ನದಿ ದಡದ ಮೇಲೆ ಸ್ಮಾರಕ ಕಟ್ಟಿದ್ದಾರೆ.

ಗುರುನಾನಕ್ ನಡೆದಂತೆ ನುಡಿದು ನುಡಿದಂತೆ ಬದುಕಿದ ವರು ಜನಸಾಮಾನ್ಯ ರೊಡನೆ ಸಾಮಾನ್ಯ ರಾಗಿ ಬದುಕಿಗೆ ಬೆಳಕಾದ ವರು. ಪ' ೦ ಜಾ ಬಿ ನ' ಜನರಿಗೆ ಆರಾಧ್ಯ ದೈವವಾದರು ಗುರು ಗುರು ನಾನಕ್.



– ಅವಿನಾಶ ಸೆರೆಮನಿ

# ಮೈಸೂರು ಹೆದ್ದಾರಿಗೆ ಹೊಂದಿರುವ ಜಾಗದಲ್ಲಿ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಸಿದ್ಧತೆ

**ಮಂಡ್ಯ, ನ.14–** 87 ನೇ ಅಖಿಲ ಭಾರತ ಕನ್ನಡ ಸಾಹಿತ್ಯವು ಡಿಸೆಂಬರ್ 20, 21, 22 ರಂದು ಅಕ್ಕರೆಯ ಸಕ್ಕರೆಯ ನಾಡು ಮಂಡ್ಯ ಜಿಲ್ಲೆಯಲ್ಲಿ ನಡೆಯಲಿದೆ. ಅಖಿಲ ಭಾರತ ಸಾಹಿತ್ಯ ಸಮ್ಮೇಳನವನ್ನು ಅದ್ದೂರಿ ಹಾಗೂ ಅರ್ಥಪೂರ್ಣವಾಗಿ ಆಚರಿಸಲು ಈಗಲೂ ಮೂರು ತಿಂಗಳಿನಿಂದಲೂ ಸಿದ್ದತೆಗಳು ನಡೆದಿವೆ. ಮಂಡ್ಯದಲ್ಲಿ ಎಲ್ಲಿ ಸಾಹಿತ್ಯ ಸಮ್ಮೇಳನ ನಡೆಸಬೇಕು. ಒಂದು ಲಕ್ಷಕ್ಕೂ ಅಧಿಕ ಕನ್ನಡ ಪ್ರೇಮಿಗಳು ಬಂದರೆ ಅವರು ಕುಳಿತು ಕಾರ್ಯಕ್ರಮ ವೀಕ್ಷಿಸಲು ಸೂಕ್ತ ಸ್ಥಳಕ್ಕೆ ಹುಡುಕಾಟ ನಡೆದಿತ್ತು. ಈಗಲೂ ಬೆಂಗಳೂರು ಹಾಗೂ ಮೈಸೂರು ಹೆದ್ದಾರಿಗೆ ಹೊಂದಿಕೊಂಡಂತೆ ಇರುವ ವಿಶಾಲ ಜಾಗದಲ್ಲಿ ಸಮ್ಮೇಳನ ನಡೆಯಲಿದೆ. ಈ ಸ್ಥಳದಲ್ಲಿಯೇ ಸಮ್ಮೇಳನ ಆಯೋಜಿಸಲು ಅನುಮತಿ ನೀಡಿರುವುದರಿಂದ ವೇದಿಕೆ ಹಾಗೂ ಇತರೆ ಸಿದ್ದತೆಗಳು ಶುರುವಾಗಲಿವೆ. ಮಂಡ್ಯದಲ್ಲಿ ಆಯೋಜನೆಗೊಂಡಿರುವ ಸಾಹಿತ್ಯ ಸಮ್ಮೇಳನಕ್ಕಾಗಿ ವಿಶಾಲ ಹಾಗೂ ಸುರಕ್ಷಿತ ಜಾಗದ ಹುಡುಕಾಟ ನಡೆದಿತ್ತು. ಪರಿಶೀಲನೆಗೆ ತಾಂತ್ರಿಕ ಸಮಿತಿ ರಚಿಸಲಾಗಿತ್ತು. ತಾಂತ್ರಿಕ ಸಮಿತಿ ನೀಡಿದ ವರದಿ ಅನ್ವಯ ಬೆಂಗಳೂರು ಮೈಸೂರು ರಾಷ್ಟ್ರೀಯ ಹೆದಾರಿಯ ಸಾಂಜೋ ಆಸ್ಪತ್ರೆ ಹಾಗೂ ಅಮರಾವತಿ ಹೋಟೇಲ್ ಹಿಂಭಾಗದ ವಿಶಾಲ ಜಾಗದಲ್ಲಿ ಸಮ್ಮೇಳನ ಡಿಸೆಂಬರ್ ಮೂರನೇ ವಾರ ನಡೆಯಲಿದೆ.ಸಮ್ಮೇಳನಕ್ಕೆ ಬರುವವರಿಗೆ ಇದೇ ಸೂಕ್ತ ಜಾಗವೆಂದು ಅಂತಿಮಗೊಳಿಸಲಾಗಿದೆ ಎಂದು ಮಂಡ್ಯ ಜಿಲ್ಲಾ ಉಸ್ತುವಾರಿ ಹಾಗೂ ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ತಿಳಿಸಿದ್ದಾರೆ.

# ವಕ್ಫ್ ತಿದ್ದುಪಡಿ ವಿರೋಧಿಸಿದರೆ ಗಂಭೀರ ಪರಿಣಾಮ ಕಾಂಗ್ರೆಸ್ ಸಂಸದರಿಗೆ ಯತ್ನಾಳ್ ಎಚ್ಚರಿಕೆ

**ಬೆಳಗಾವಿ, ನ.14–** ವಕ್ಫ್ ವಿವಾದ ಹಿನ್ನೆಲೆಯಲ್ಲಿ ರೈತರಿಗೆ ನೀಡಿದ್ದ ನೋಟಿಸ್‌ಗಳನ್ನು ಹಿಂಪಡೆದ ವಿಚಾರವಾಗಿ ಬೆಳಗಾವಿಯಲ್ಲಿ ವಿಜಯಪುರ ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಪ್ರತಿಕ್ರಿಯೆ ನೀಡಿದ್ದು, ನೋಟಿಸ್‌ಗಳನ್ನು ಹಿಂಪಡೆದಿದ್ದು ಶಾಶ್ವತವಲ್ಲ. ಆದರೆ ಕೇಂದ್ರ ಸರ್ಕಾರದ ವಕ್ಫ್ ತಿದ್ದುಪಡಿಗೆ ಏನಾದರೂ ವಿರೋಧ ವ್ಯಕ್ತಪಡಿಸಿದರೆ ಕಾಂಗ್ರೆಸ್ ಸಂಸದರು ರಾಜ್ಯದಲ್ಲಿ ಓಡಾಡಲು ಕಠಿಣವಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ನಮ್ಮ ಹೋರಾಟದಿಂದ ವಕ್ಫ್ ನೋಟಿಸ್ ಹಿಂಪಡೆಯುತ್ತಿದ್ದಾರೆ. ಆದರೆ ಅದು ಶಾಶ್ವತ ಅಲ್ಲ. ಎಲ್ಲವನ್ನು ರದ್ದು ಮಾಡಬೇಕು. ಗೆಜೆಟ್ ನೋಟಿಫಿಕೇಶನ್ ಮಾಡಿದ್ದು ಎಲ್ಲಾ ರದ್ದುಪಡಿಸಬೇಕು. ಕೇಂದ್ರ ಸರ್ಕಾರ ವಕ್ಫ್ ಕಾಯ್ದೆಗೆ ತಿದ್ದುಪಡಿಯನ್ನು ತರುತ್ತಿದೆ. ಒಂದು ವೇಳೆ ಕಾಯ್ದೆಗೆ ವಿರೋಧಿಸಿದರೆ ರೈತರು ಧರಣಿ ಮಾಡುತ್ತಾರೆ.ಕರ್ನಾಟಕದ ಕಾಂಗ್ರೆಸ್ ಸಂಸದರ ಮನೆಯ ಮುಂದೆ ಧರಣಿ ಮಾಡುತ್ತಾರೆ ಎಂದು ತಿಳಿಸಿದರು.

ಅಕಸ್ಮಾತ್ ಬಿಲ್‌ಗೆ ವಿರೋಧ ಮಾಡಿದರೆ, ಕೈ ಎಂಪಿಗಳು ಕರ್ನಾಟಕ ದಲ್ಲಿ ಓಡಾಡುವುದೇ ಕಠಿಣ ಆಗುತ್ತದೆ ಎಂದು ಎಚ್ಚರಿಕೆ ನೀಡಿದರು.ರೈತರ ಜಮೀನು, ಗುಡಿ ಗುಂಡಾರ ಮಠದ ಜಾಗ ಹೋಗುತ್ತಿವೆ. ನಮಾಜ್ ಮಾಡಲು ನಮ್ಮವರು ಸ್ಮಶಾನ ಭೂಮಿ ಕೊಟ್ಟರೆ, ಆ ಎಲ್ಲಾ ಭೂಮಿ ನಮ್ಮದು ಅನ್ನೋ ಸ್ಥಿತಿ ಬಂದಿದೆ. ಒಂದಿಂಚು ಭೂಮಿ ಮೇಲೆ ವಕ್ಫ್ ಅನ್ನೋದು ಇರಬಾರದು.

ಕರ್ನಾಟಕದ ಕಾಂಗ್ರೆಸ್ ಸಂಸದರು ಕಾಯ್ದೆಯ ಪರ ಮತ ಹಾಕಬೇಕು. ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ರೈತರು ಅವರಿಗೆ ಬುದ್ಧಿ ಕಲಿಸುತ್ತಾರೆ ಎಂದು ತಿಳಿಸಿದರು.ಪಂಚಮಸಾಲಿ ಸಮಾಜಕ್ಕೆ ಮೀಸಲಾತಿ ಹೋರಾಟ ವಿಚಾರವಾಗಿ ಸಿದ್ದರಾಮಯ್ಯ ಅಧಿಕಾರಕ್ಕೆ ಬಂದು ಒಂದುವರೆ ವರ್ಷ ಆಯಿತು. ಎಷ್ಟೋ ಸಲ ಸಿಎಂ ಸಿದ್ದರಾಮಯ್ಯ ಅವರು ಆಶ್ವಾಸನೆ ಕೊಟ್ಟರು. ಮೊದಲ ಸಭೆಯಲ್ಲಿ ಅವರು ನಕರಾತ್ಮಕವಾಗಿ ಮಾತನಾಡಿದರು. ಅದಕ್ಕೆ ನಮ್ಮ ಗುರುಗಳು ನಮ್ಮ ಮುಖಂಡರು ಸೇರಿಕೊಂಡು ಟ್ರ್ಯಾಕ್ಟರ್ ತಗೊಂಡು ಸದನ ನಡೆಯದಂತೆ ಪ್ರತಿಭಟನೆ ಮಾಡುತ್ತೇವೆ. ಬೆಳಗಾವಿಯಲ್ಲಿ ಸದನ ನಡೆದಂತೆ ಪ್ರತಿಭಟನೆ ಮಾಡುತ್ತೇವೆ. ಅಷ್ಟರಲ್ಲಿ ಮುಖ್ಯಮಂತ್ರಿ ಗುರುಗಳನ್ನು ಕರೆದು ಮಾತಾಡಬೇಕು ಮೀಸಲಾತಿ ಬಗ್ಗೆ ನಮ್ಮ ನಿಲುವು ಏನೆಂದು ಸ್ಪಷ್ಟಪಡಿಸಬೇಕು. ನೋಟಿಫಿಕೇಶನ್ ಮಾಡಿದರೆ ಡಿಸೆಂಬರ್ 9ರ ಹೋರಾಟ ಸ್ಥಗಿತ ಆಗುತ್ತದೆ.

# ಎಲ್ಲರಲ್ಲಿ ಅಕ್ಷರ ಸಂಸ್ಕೃತಿ ಬೆಳೆಯಲಿ: ಕುಲಪತಿ ಪ್ರೊ.ಬಿರಾದಾರ



ಬೀದರ್‌ನಲ್ಲಿ ಹಿರಿಯ ಸಾಹಿತಿ ಪಂಚಾಕ್ಷರಿ ಪುಣ್ಯಶೆಟ್ಟಿ ಬರೆದ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಪುಸ್ತಕ ಬೀದರ್ ವಿಶ್ವವಿದ್ಯಾಲಯದ ಕುಲಪತಿ ಡಾ.ಬಿ.ಎಸ್.ಬಿರಾದಾರ್ ಬಿಡುಗಡೆಗೊಳಿಸಿದರು.

**ಬೀದರ್, ನ. 14–** ಇಂದಿನ ಆಧುನಿಕ ಕಾಲಘಟ್ಟದಲ್ಲಿ ಯುವ ಸಮುದಾಯದಲ್ಲಿ ಅಕ್ಷರ ಪ್ರೀತಿ, ಸಂಸ್ಕೃತಿ ಬೆಳೆಸುವ ಅಗತ್ಯತೆ ಇದೆ ಎಂದು ಬೀದರ್ ವಿಶ್ವವಿದ್ಯಾಲಯದ ಕುಲಪತಿ ಡಾ.ಬಿ.ಎಸ್.ಬಿರಾದಾರ್ ಹೇಳಿದರು.


ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಬೀದರ್, ವಿಸನ್ ಟೂಲ್ಸ್ ಮತ್ತು ಟೆಕ್ನಾಲಜಿ ಪುಣೆ ಸಹಯೋಗದಲ್ಲಿ ಇಲ್ಲಿ ಹಮ್ಮಿಕೊಂಡ ಪಂಚಾಕ್ಷರಿ ಪುಣ್ಯಶೆಟ್ಟಿ ಅವರು ಬರೆದ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಪುಸ್ತಕ ಬಿಡುಗಡೆಗೊಳಿಸಿ ಅವರು ಮಾತನಾಡಿದರು.

ಸಾಮಾನ್ಯವಾಗಿ ಜೀವನ ಚರಿತ್ರೆ ವ್ಯಕ್ತಿ ಜೀವನ ಆಧರಿತವಾಗಿರುತ್ತವೆ. ಆದರೆ, ಹಿರಿಯ ಸಾಹಿತಿ ಪಂಚಾಕ್ಷರಿ ಪುಣ್ಯಶೆಟ್ಟಿ ಅವರು ಬರೆದ ಪುಸ್ತಕ ಭಿನ್ನವಾಗಿ ಸಮಕಾಲಿನ ಒಡನಾಡಿಗಳ ಅಭಿಪ್ರಾಯ ಕೇಂದ್ರಿತ ಜೀವನ ಚರಿತ್ರೆ ಆಗಿರುತ್ತವೆ. ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಪುಸ್ತಕ ಅಪರೂಪದ ಮಹಾತ್ವಕಾಂಕ್ಷಿ ಕೃತಿ ಆಗಿದೆ. ಇಂತಹ ಕೃತಿ ಇಷ್ಟರಲ್ಲೇ ಹೊರಬರಲಿ ಎಂದು ಆಶಿಸಿದರು.

ಶಾಲು ಹೊದಿಸುವ ಕಾರ್ಯಕ್ರಮದಲ್ಲಿ ಸಾಂಸ್ಕೃತಿಕ ಸ್ಪರ್ಶ ನೀಡಿರುವುದು ಸಂತಸ ತರಿಸಿದೆ. ಈ ಕಾರ್ಯಕ್ರಮ ಎಲ್ಲರಿಗೂ ಮಾದರಿಯಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಬಸವಕಲ್ಯಾಣ ಅನುಭವ ಮಂಟಪ ಟ್ರಸ್ಟ್‌ನ ಅಧ್ಯಕ್ಷ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಮಾತನಾಡಿ, ಹಣ ಗಳಿಕೆ ಮಾಡುವುದು ಎಲ್ಲರಿಗೂ ಗೊತ್ತಿದೆ. ಆದರೆ, ಖರ್ಚು ಮಾಡುವ ಮನಸ್ಸು ಎಲ್ಲರಿಗೂ ಇರುವುದಿಲ್ಲ. ಆದರೂ ಕೂಡ ಬಸವರಾಜ ಪಾಟೀಲ್ ಬಲ್ಲೂರ ಅವರು ಪುಸ್ತಕ ಪ್ರಕಟಣೆಗೆ ದಾಸೋಹ ನೀಡುವ ಮೂಲಕ ಶಾಲು ಹೊದಿಸುವ ಕಾರ್ಯಕ್ರಮ ಅರ್ಥಪೂರ್ಣವನ್ನಾಗಿಸಿದ್ದಾರೆ. ಇಂತಹ ಅಕ್ಷರ ಪ್ರೀತಿ ಎಲ್ಲರಲ್ಲಿ ಬೆಳೆಯಲಿ ಎಂದು ಆಶಿಸಿದರು.

ಭಾಲ್ಕಿ ಹಿರೇಮಠ ಸಂಸ್ಥಾನದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ನೇತೃತ್ವ ವಹಿಸಿದ್ದರು. ಜಿಲ್ಲಾ ಕಸಾಪ ಅಧ್ಯಕ್ಷ ಸುರೇಶ ಚನ್ನಶೆಟ್ಟಿ ಅಧ್ಯಕ್ಷತೆ ವಹಿಸಿದ್ದರು. ಸಾಹಿತಿ ಈಶ್ವರಯ್ಯ ಕೊಡಂಬಲ್ ಪುಸ್ತಕ ಪರಿಚಯ ಮಾಡಿಕೊಟ್ಟರು. ಬೀದರ್ ಡಿಸಿಸಿ ಬ್ಯಾಂಕ್ ಮಾಜಿ ಅಧ್ಯಕ್ಷ ಉಮಾಕಾಂತ ನಾಗಮಾರಪಳ್ಳಿ, ಬಸವ ಕೇಂದ್ರದ ಅಧ್ಯಕ್ಷ ಶರಣಪ್ಪ ಮಿಠಾರೆ, ಅಭಿಯಂತ ಶಿವರಾಜ ಪಾಟೀಲ್ ಬಲ್ಲೂರ, ಡೈಮಂಡ್ ಕಾಲೇಜಿನ ಪ್ರಾಚಾರ್ಯ ಗಣೇಶ ಜೋಜನೆ, ಶರಣಪ್ಪ ಬಲ್ಲೂರ, ಶಿವಕುಮಾರ ಕಟ್ಟೆ, ಕಾವೇರಿ ಪಾಟೀಲ್ ಬಲ್ಲೂರ, ಅಭಿನವ, ವಿರಾಟ ಬಲ್ಲೂರ, ಡಾ.ಭತಮೂರ್ಗೆ ಚಂದ್ರಪ್ಪ, ಕಲಾವಿದ ಡಿ.ಕೆ.ಬಡಿಗೇರ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಬಸವರಾಜ ಪಾಟೀಲ್ ಬಲ್ಲೂರ ಸ್ವಾಗತಿಸಿದರು. ಟಿ.ಎಂ.ಮಚ್ಚೆ, ವೈಜಿನಾಥ ಸಜ್ಜನಶೆಟ್ಟಿ ನಿರೂಪಿಸಿದರು. ಶಿವಶಂಕರ ಟೋಕರೆ ವಂದಿಸಿದರು.



ಕ್ರಿಸ್ ಗೋಪಾಲಕೃಷ್ಣನ್, ಶಿಬುಲಾಲ್, ಪ್ರತಿಮಾ ಮೂರ್ತಿ, ಕೆ.ದಿನೇಶ್ ಮತ್ತು ಇತರರು ಗುರುವಾರ ಬೆಂಗಳೂರಿನಲ್ಲಿ ಇನ್ಫೋಸಿಸ್ ಪ್ರಶಸ್ತಿ 2024 ವಿಜೇತರನ್ನು ಘೋಷಿಸಿದರು.

# ಭ್ರೂಣಲಿಂಗ ಪತ್ತೆ ಅಪರಾಧ, ಜಾಗೃತಿ ಅಗತ್ಯ: ಸಿಇಓ



ರಾಯಚೂರಿನ ಭಾರತೀಯ ವೈದ್ಯಕೀಯ ಸಂಘ(ಐಎಂಎ) ಸಭಾಂಗಣದಲ್ಲಿ ಏರ್ಪಡಿಸಿದ್ದ ಕಾಯ್ದೆಗಳ ಕುರಿತು ಕಾರ್ಯಾಗಾರವನ್ನು ಜಿಪಂ ಸಿಇಒ ಪಾಂಡ್ವೆ ರಾಹುಲ್ ತುಕರಾಮ ಚಾಲನೆ ನೀಡಿದರು.

**ರಾಯಚೂರು, ನ. 14–** ಹೆಣ್ಣು ಮಗುವಿನ ಮಹತ್ವ ಎಲ್ಲರೂ ಅರಿಯಬೇಕು. ಭ್ರೂಣಲಿಂಗ ಪತ್ತೆಯು ಕಾನೂನಿನ ಪ್ರಕಾರ ಅಪರಾಧ. ಕಾನೂನು ಉಲ್ಲಂಘಿಸಿದಲ್ಲಿ ಜೈಲು ಶಿಕ್ಷೆ ಮತ್ತು ದಂಡವಿದೆ. ಈ ಕುರಿತು ಜನರಲ್ಲಿ ವ್ಯಾಪಕವಾಗಿ ಜಾಗೃತಿ ಮೂಡಿಸಬೇಕು ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಪಾಂಡ್ವೆ ರಾಹುಲ್ ತುಕಾರಾಮ ಅವರು ಹೇಳಿದರು.

ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಐಎಂಎ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಭಾರತೀಯ ವೈದ್ಯಕೀಯ ಸಂಘ(ಐಎಂಎ) ಸಂಯುಕ್ತ ಆಶ್ರಯದಲ್ಲಿ ಕೆ.ಪಿ.ಎಂ.ಇ, ಪಿ.ಸಿ ಮತ್ತು ಪಿ.ಎನ್.ಡಿ.ಟಿ ಮತ್ತು ಪೋಕ್ಸೋ ಕಾಯ್ದೆಗಳ ಅನುಷ್ಠಾನ ಕುರಿತು ಖಾಸಗಿ ವೈದ್ಯರು, ಕಾರ್ಯಕ್ರಮ ಅನುಷ್ಠಾಧಿಕಾರಿಗಳು, ತಾಲೂಕ ಆರೋಗ್ಯ ಅಧಿಕಾರಿಗಳಿಗೆ ಹಾಗೂ ವೈದ್ಯಾಧಿಕಾರಿಗಳಿಗೆ ಏರ್ಪಡಿಸಿದ್ದ ಒಂದು ದಿನದ ಕಾರ್ಯಾಗಾರಕ್ಕೆ ಚಾಲನೆ ನೀಡಿ, ಮಾತನಾಡಿದರು. ಲಿಂಗಾನುಪಾತ ಸಮವಾಗಿರ ದಿದ್ದರೆ ಸಮಾಜದ ಸ್ವಾಸ್ಥ್ಯ ಹಾಳಾಗುವುದರ ಜೊತೆಗೆ, ಹೆಣ್ಣಿನ ಮೇಲೆ ದೌರ್ಜನ್ಯ ಉಂಟಾಗುವ ಸಾಧ್ಯತೆ ಇದೆ. ಭ್ರೂಣ ಲಿಂಗ ಪತ್ತೆ ಮತ್ತು ಭ್ರೂಣ ಹತ್ಯೆ ಶಿಕ್ಷಾರ್ಹ ಅಪರಾಧವಾಗಿದ್ದು, ಈ ಕುರಿತು ನಗರ ಮತ್ತು ಪಟ್ಟಣಗಳಲ್ಲಿ ಸಾರ್ವ ಜನಿಕರಿಗೆ ಕಾನೂನು ನಿಯಮಗಳನ್ನು ಹೇಗೆ ಪಾಲನೆಗಾಗಿ ಸಾರ್ವಜನಿಕ ಸ್ಥಳಗಳಲ್ಲಿ ಕಾಯ್ದೆಯ ಕುರಿತು ಹೆಚ್ಚು ಜಾಗೃತಿ ನೀಡಬೇಕಿದೆ ಎಂದು ಹೇಳಿದರು.

ಪಿಸಿಪಿಎನ್‌ಡಿಟಿ ಕಾಯ್ದೆಯ ಉಪ ನಿರ್ದೇಶಕರಾದ ಡಾ.ವಿವೇಕ ದೊರೈ ಅವರು ಮಾತನಾಡಿ, ತಂತ್ರಜ್ಞಾನದ ಬಳಕೆ ಮೂಲಕ ಪ್ರಸವ ಪೂರ್ವ, ನಂತರ ಲಿಂಗ ಆಯ್ಕೆ, ಹೆಣ್ಣು ಭ್ರೂಣ ಹತ್ಯೆ ತಡೆಯುವುದು ಗರ್ಭಪೂರ್ವ ಮತ್ತು ಪ್ರಸವಪೂರ್ವ ಭ್ರೂಣಲಿಂಗ ಪತ್ತೆ ಕಾಯ್ದೆಯ ಉದ್ದೇಶವಾಗಿದೆ. ಅಲ್ಲದೆ ಕೆ.ಪಿ.ಎಂ.ಇ, ಪಿ.ಸಿ ಮತ್ತು ಪಿ.ಎನ್.ಡಿ.ಟಿ ಮತ್ತು ಪೋಕ್ಸೋ ಕಾಯ್ದೆಗಳ ಕುರಿತು ವಿವಯಿರಿಸಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರ ಬಾಬು ಅವರು ಮಾತನಾಡಿ, ಜಿಲ್ಲೆಯಲ್ಲಿ ಯಾವುದೇ ಅಹಿತಕರ ಘಟನೆ ನಡೆಯದಂತೆ ನೋಡಿಕೊಳ್ಳಲು ಜಿಲ್ಲಾಧಿಕಾರಿಗಳು ಸೂಚನೆ ಮೇರೆಗೆ ಈ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿದ್ದು, ಎಲ್ಲ ವೈದ್ಯರು ಈ ಕಾರ್ಯಾಗಾರದ ಲಾಭವನ್ನು ಪಡೆಯಬೇಕು. ಅಲ್ಲದೆ ಜಿಲ್ಲೆಯಲ್ಲಿ ಯಾವುದೇ ಅಹಿತಕರ ಘಟನೆಗೆ ಸ್ಪಂದನೆ ನೀಡಬಾರದು ಎಂದು ಹೇಳಿದರು.

ಭಾರತೀಯ ವೈದ್ಯಕೀಯ ಸಂಘದ ಜಿಲ್ಲಾಧ್ಯಕ್ಷರಾದ ಡಾ.ಶೈಲೇಶ್ ಅಮರಖೇಡ್, ಪಿಸಿ ಪಿಎನ್‌ಡಿಟಿ ಜಿಲ್ಲಾ ಸಲಹಾ ಸಮಿತಿಯ ಅಧ್ಯಕ್ಷ ಡಾ.ಶಿವಪ್ಪ ಮಾಲಿ ಪಾಟೀಲ್, ರಿಮ್ಸ್ ಕಾಲೇಜಿನ ಪ್ರಾಚಾರ್ಯ ಡಾ.ಬಸವರಾಜ ಪಾಟೀಲ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ತರಬೇತಿ ಪ್ರಾಚಾರ್ಯ ಡಾ.ವೆಂಕಟೇಶ ನಾಯಕ, ಜಿಲ್ಲಾ ಆಯುಷ್ ಇಲಾಖೆಯ ಅಧಿಕಾರಿ ಡಾ.ಶಂಕರಗೌಡ ಎಸ್.ಪಾಟೀಲ್, ಡಾ.ಶಿವಕುಮಾರ್ ಹಾಗೂ ವೈದ್ಯರು ಭಾಗವಹಿಸಿದ್ದರು. ಲೇಪಾಕ್ಷಿ ಪ್ರಾರ್ಥಿಸಿದರು. ಬಸಯ್ಯ ಸ್ವಾಗತಿಸಿದರು.

## ಮಹಾದಾಸೋಹಿ ಪೂಜ್ಯ ಡಾ.ಶರಣಬಸವಪ್ಪ ಅಪ್ಪಾಜಿಗೆ ೯೦ನೇ ಜನ್ಮದಿನ

# ಲಕ್ಷ ಬಿಲ್ವಾರ್ಚನೆ–ವಿವಿಧ ಧಾರ್ಮಿಕ ಕಾರ್ಯಕ್ರಮದಲ್ಲಿ ಸಾವಿರಾರು ಭಕ್ತರು ಭಾಗಿ

**ಕಲಬುರಗಿ, ನ.14–** ನಗರದ ಶರಣಬಸವೇಶ್ವರ ದೇವಾಲಯದಲ್ಲಿ ಹಬ್ಬದ ವಾತಾವರಣ. ಶರಣಬಸವೇಶ್ವರ ಸಂಸ್ಥಾನದ 8ನೇ ಮಹಾ ದಾಸೋಹ ಪೀಠಾಧಿಪತಿ ಡಾ. ಶರಣಬಸವಪ್ಪ ಅಪ್ಪಾಜಿಯವರ 90ನೇ ಜನ್ಮದಿನಾಚರಣೆ ಅಂಗವಾಗಿ ಗುರುವಾರ ನಗರದ ಶರಣಬಸವೇಶ್ವರ ದೇವಾಲಯದ ಆವರಣದಲ್ಲಿ ಸಾವಿರಾರು ಭಕ್ತರು ಪೂಜ್ಯ ಡಾ. ಅಪ್ಪಾಜಿಯವರ ಆರೋಗ್ಯ, ದೀರ್ಘಾಯುಷ್ಯ ಹಾಗೂ ಸುಖ ಸಮೃದ್ಧಿಯ ಜೀವನಕ್ಕಾಗಿ ಶ್ರೀ ಶರಣಬಸವೇಶ್ವರರಿಗೆ "ಲಕ್ಷ ಬಿಲ್ವಾರ್ಚನೆ" ಮಾಡುವ ಮೂಲಕ ಧಾರ್ಮಿಕ ವಿಧಿವಿಧಾನಗಳಲ್ಲಿ ಭಾಗವಹಿಸಿದ್ದರು.

ಪೂಜ್ಯ ಡಾ. ಅಪ್ಪಾಜಿಯವರ ಜನ್ಮ ದಿನಾಚರಣೆಯ ಅಂಗವಾಗಿ ನಸುಕಿನ ಜಾವದಲ್ಲಿ ಭಕ್ತರು ದೇಗುಲದಲ್ಲಿ ಆಯೋಜಿಸಿರುವ "ಲಕ್ಷ ಬಿಲ್ವಾರ್ಚನೆ"ಯಲ್ಲಿ ಪಾಲ್ಗೊಳ್ಳಲು ಆರಂಭಿಸಿದರು. ನವೆಂಬರ್ 22ರಂದು ತಮ್ಮ 55 ನೇ ಜನ್ಮದಿನವನ್ನು ಆಚರಿಸಿಕೊಳ್ಳಲಿರುವ ಮಾತೋಶ್ರೀ ಪೂಜ್ಯ ಡಾ. ದಾಕ್ಷಾಯಿಣಿ ಅಪ್ಪಾಜಿ ಮತ್ತು ನವೆಂಬರ್ 1 ರಂದು ತಮ್ಮ 8ನೇ ಜನ್ಮದಿನವನ್ನು ಆಚರಿಸಿಕೊಂಡ ಸಂಸ್ಥಾನದ 9ನೇ ಪೀಠಾಧಿಪತಿ ಚಿರಂಜೀವಿ ಪೂಜ್ಯ ದೊಡ್ಡಪ್ಪ ಅಪ್ಪಾಜಿ, ತಮ್ಮ ಸಹೋದರಿಯರಾದ ಕು.ಭವಾನಿ ಹಾಗೂ ಕು.ಶಿಯವರು ಸೇರಿದಂತೆ ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಕಾರ್ಯದರ್ಶಿ ಬಸವರಾಜ ದೇಶಮುಖ ಅವರು ತಮ್ಮ ಕುಟುಂಬದ ಸದಸ್ಯರೊಂದಿಗೆ ಎಲ್ಲರ ಸುಧೀರ್ಘ ಜೀವನಕ್ಕಾಗಿ ದೇವರಲ್ಲಿ ಪ್ರಾರ್ಥಿಸಲು, ಧಾರ್ಮಿಕ ವಿಧಿವಿಧಾನಗಳಲ್ಲಿ ಭಾಗವಹಿಸಲು ದೇಗುಲಕ್ಕೆ ಬೆಳಿಗ್ಗೆಯೇ ಆಗಮಿಸಿದ್ದರು.



ಕಲಬುರಗಿಯ ಮಹಾದಾಸೋಹಿ ಶ್ರೀ ಶರಣಬಸವೇಶ್ವರ ಸಂಸ್ಥಾನದ ಪೀಠಾಧಿಪತಿ ಪೂಜ್ಯ ಡಾ.ಶರಣಬಸವಪ್ಪ ಅಪ್ಪಾ ಅವರಿಗೆ 90 ವರ್ಷ ಪೂರ್ಣಗೊಳಿಸಿರುವ ಹಿನ್ನೆಲೆಯಲ್ಲಿ ಮಹಾದಾಸೋಹದಲ್ಲಿ ಲಕ್ಷ ಬಿಲ್ವಾರ್ಚನೆ ಜರುಗಿತು.

ಬೆಳಗುಂಪಿ ಬ್ರಹನ್ಮಠದ ಷ. ಬ್ರ. ಅಭಿನವ ಪರ್ವತೇಶ್ವರ ಶಿವಾಚಾರ್ಯರರ ನೇತೃತ್ವದ ವಿವಿಧ ಧಾರ್ಮಿಕ ಮಠಾಧೀಶರು ಸೇರಿದಂತೆ ಇತರ ಪ್ರಮುಖರು ಲಕ್ಷ ಬಿಲ್ವಾರ್ಚನೆಯಲ್ಲಿ ಪಾಲ್ಗೊಂಡಿದ್ದರು. ಚಿರಂಜೀವಿ ದೊಡ್ಡಪ್ಪ ಅಪ್ಪಾಜಿ ಅವರು ಷ. ಬ್ರ. ಅಭಿನವ ಪರ್ವತೇಶ್ವರ ಶಿವಾಚಾರ್ಯರಿಗೆ ಪಾದಪೂಜೆ ಸಲ್ಲಿಸಿ ಗೌರವ ಸಲ್ಲಿಸಿದರು. ಮಾತೋಶ್ರೀ ಪೂಜ್ಯ ಡಾ. ದಾಕ್ಷಾಯಿಣಿ ಅವ್ವಾಜಿ ಮತ್ತು ಚಿರಂಜೀವಿ ದೊಡ್ಡಪ್ಪ ಅಪ್ಪಾಜಿಯವರು ಡಾ. ಅಪ್ಪಾಜಿ ಅವರ ಕುಟುಂಬದ ಇತರ ಸದಸ್ಯರೊಂದಿಗೆ ದೇವಾಲಯದ ಸಂಕೀರ್ಣದಲ್ಲಿ ಸುಧೀರ್ಘವಾದ ಸುಮಾರು ಮೂರು ಗಂಟೆಗಳ ಕಾಲ ಲಕ್ಷ ಬಿಲ್ವಾರ್ಚನೆ ನೆರವೇರಿಸಿದರು. ಪೂಜ್ಯ ಡಾ. ಅಪ್ಪಾಜಿಯವರ ಜನ್ಮ ದಿನಾಚರಣೆ ಅಂಗವಾಗಿ, ಷ. ಬ್ರ. ಅಭಿನವ ಪರ್ವತೇಶ್ವರ ಶಿವಾಚಾರ್ಯರ ನೇತೃತ್ವದಲ್ಲಿ ಹನ್ನೆರಡು ಮಕ್ಕಳಿಗೆ "ಅಯ್ಯಾಚಾರ" ಮತ್ತು "ಲಿಂಗಧಾರಣೆ" ಕಾರ್ಯಕ್ರಮ ನೆರವೇರಿತು. ನಂತರ ಧಾರ್ಮಿಕ ವಿಧಿವಿಧಾನಗಳ ಅಂಗವಾಗಿ 300ಕ್ಕೂ ಹೆಚ್ಚು ಭಕ್ತರಿಗೆ "ಲಿಂಗದೀಕ್ಷೆ" ನೀಡಲಾಯಿತು. ಕಲಬುರಗಿಯ ದಕ್ಷಿಣ ಮತಕ್ಷೇತ್ರದ ಶಾಸಕ ಅಲ್ಲಮಪ್ರಭು ಪಾಟೀಲ ಭೇಟಿ ನೀಡಿ ಲಕ್ಷ ಬಿಲ್ವಾರ್ಚನೆಯಲ್ಲಿ ಕೆಲಕಾಲ ಪಾಲ್ಗೊಂಡು ಮಾತೋಶ್ರೀ ಪೂಜ್ಯ ಡಾ. ದಾಕ್ಷಾಯಿಣಿ ಅವ್ವಾಜಿ ಹಾಗೂ ಪೂಜ್ಯ ಚಿರಂಜೀವಿ ದೊಡ್ಡಪ್ಪ ಅಪ್ಪಾಜಿಯವರ ಆಶೀರ್ವಾದ ಪಡೆದರು.

ವೀರಶೈವ ಲಿಂಗಾಯತ ಮಹಾ ವೇದಿಕೆ ವತಿಯಿಂದ ಸಂತ ಶರಣಬಸವೇಶ್ವರರಿಗೆ ಈ "ಲಕ್ಷ ಬಿಲ್ವಾರ್ಚನೆ" ಕಾರ್ಯಕ್ರಮ ನಡೆಯಿತು. ವೇದಿಕೆಯ ಪದಾಧಿಕಾರಿಗಳು ಮಾತೋಶ್ರೀ ಪೂಜ್ಯ ಡಾ. ದಾಕ್ಷಾಯಿಣಿ ಅವ್ವಾಜಿ, ಚಿರಂಜೀವಿ ಪೂಜ್ಯ ದೊಡ್ಡಪ್ಪ ಅಪ್ಪಾಜಿ ಹಾಗೂ ಶ್ರೀ ಬಸವರಾಜ ದೇಶಮುಖ ಅವರನ್ನು ಸನ್ಮಾನಿಸಿದರು.

# ರಾಷ್ಟ್ರಮಟ್ಟದ ಪತ್ರ ಲೇಖನ ಸ್ಪರ್ಧೆ–ಪಿ.ಚಿದಾನಂದ ಅಂಚೆ ಅಧೀಕ್ಷಕರು

ಬಳ್ಳಾರಿ ನ 14. ಜನಸಾಮಾನ್ಯರಲ್ಲಿ ಹಾಗೂ ವಿಧ್ಯಾರ್ಥಿಗಳಲ್ಲಿ ಪತ್ರ ಲೇಖನ ಅಭಿರುಚಿಯನ್ನು, ಬರವಣಿಗೆ ಕೌಶಲ್ಯವನ್ನು ಹಾಗೂ ದೇಶಪ್ರೇಮವನ್ನು ಜಾಗೃತಿಗೊಳಿಸಲು ಭಾರತೀಯ ಅಂಚೆ ಇಲಾಖೆಯು ದೇಶ್ಯಾದ್ಯಂತ ರಾಷ್ಟ್ರ ಮಟ್ಟದ ಮುಕ್ತ ಪತ್ರ ಲೇಖನ ಸ್ಪರ್ಧೆಯನ್ನು ಏರ್ಪಡಿಸಿದ್ದು.


The Joy of writing: Importance of letters in a Digital Age"/ ಬರವಣಿಗೆಯ ಸಂತೋಷ: ಡಿಜಿಟಲ್ ಯುಗದಲ್ಲಿ ಪತ್ರಗಳ ಪ್ರಾಮುಖ್ಯತೆ ಎಂಬ ವಿಷಯದ ಮೇಲೆ ೦4 ಅಳತೆಯ ಹಾಳೆಯಲ್ಲಿ 1000 ಪದಗಳ ಮಿತಿಯೊಳಗೆ ಬರೆದು ಲಕೋಟೆಯಲ್ಲಿ ಅಥವಾ ಅಂತರ್ದೇಶೀಯ ಪತ್ರದಲ್ಲಿ 00 ಪದಗಳಿಗೆ ಮೀರದಂತೆ ಬರೆದು, ಬಳ್ಳಾರಿ ವಿಭಾಗದ ಎಂದರೆ ವಿಜಯನಗರ ಮತ್ತು ಬಳ್ಳಾರಿ ಜಿಲ್ಲೆಯ ಸ್ಪರ್ಧಿಗಳು ಅಂಚೆ ಅಧೀಕ್ಷಕರು, ಬಳ್ಳಾರಿ ವಿಭಾಗ, ಬಳ್ಳಾರಿ 583102 ಇವರಿಗೆ ತಲುಪುವಂತೆ ಅಂಚೆ ಮೂಲಕ ಕಳುಹಿಸಿ ಕೊಡಬಹುದು.




# ಪಂಚಮಸಾಲಿಗೆ 2ಎ ಮೀಸಲಾತಿ ನಾನಾಗಿದ್ದರೆ ಸಿಎಂ ಕೊರಳ ಪಟ್ಟಿ ಹಿಡಿದು ಕೇಳುತ್ತಿದ್ದೆ: ಅಭಿನವ ಸಂಗನಬಸವ ಸ್ವಾಮೀಜಿ

**ವಿಜಯಪುರ, ನ.14–** ನಾನು ರಾಜಕಾರಣಿಯಲ್ಲ. ನಾನೇನಾದರೂ ಆಗಿದ್ದರೆ ಪಂಚಮಸಾಲಿ 2ಎ ಮೀಸಲಾತಿ ವಿಚಾರದಲ್ಲಿ ಸಿಎಂ ಸಿದ್ದರಾಮಯ್ಯ ಹೆಗಲ ಪಟ್ಟಿ ಹಿಡಿದು ಕೇಳುತ್ತಿದ್ದೆ ಎಂದು ಮನಗೂಳಿ ಹಿರೇಮಠದ ಅಭಿನವ ಸಂಗನಬಸವ ಶಿವಾಚಾರ್ಯ ಸ್ವಾಮೀಜಿ ಸಿಎಂ ವಿರುದ್ಧ ತೀವ್ರ ವಾಗ್ದಾಳಿ ನಡೆಸಿ, ಲಿಂಗಾಯ್ತ ವಿರೋಧಿ, ಕೇವಲ ಮುಸ್ಲಿಮರ ಬಾಲ ಬಿಡುವ ಸಿಎಂ ಸಿದ್ದರಾಮಯ್ಯ ಪಂಚಮಸಾಲಿಗೆ ಮೀಸಲಾತಿ ನೀಡಲ್ಲ ಎಂದು ಏಕವಚನದಲ್ಲೇ ಮುಖ್ಯಮಂತ್ರಿ ವಿರುದ್ಧ ಹರಿಹಾಯ್ದರು.

ವಿಜಯಪುರದ ಜಿಲ್ಲೆ ಕೊಲ್ಹಾರ ತಾಲೂಕಿನ ರೋಣಿಹಾಳ ಗ್ರಾಮದಲ್ಲಿ ಕಿತ್ತೂರು ರಾಣಿ ಚನ್ನಮ್ಮ ಯುವಕ ಸಂಘ ಹಾಗೂ ಕೊಲ್ಹಾರ ತಾಲ್ಲೂಕು ಪಂಚಮಸಾಲಿ ಸಮಾಜವತಿಯಿಂದ ಹಮ್ಮಿಕೊಂಡಿದ ಕಿತ್ತೂರ ರಾಣಿ ಚನ್ನಮ್ಮನ ಜಯಂತ್ಯೋತ್ಸವ ಸಮಾರಂಭದಲ್ಲಿ ಭಾಷಣ ಮಾಡಿದ ಅವರು, ಬೆಂಗಳೂರಿನಲ್ಲಿ ನಡೆದ ಸಭೆಯಲ್ಲಿ ಕೂಡಲಸಂಗಮ ಜಯಮೃತ್ಯುಂಜಯ



ಶ್ರೀಗಳ ಹೆಗಲ ಮೇಲೆ ಸಿದ್ದರಾಮಯ್ಯ ಹಾಕಿದ್ದರು. ನಾನಾಗಿದ್ರೆ ಸಿಎಂ ಸಿದ್ದರಾಮಯ್ಯ ಅವರ ಕಪಾಳಕ್ಕೆ ಹೊಡೆಯುತ್ತಿದೆ. ಆದರೆ, ಶ್ರೀಗಳು ಸುಮ್ಮನೆ ಇದ್ದರು ಎಂದು ಕಿಡಿಕಾರಿದರು. ಸಿಎಂ ಸಿದ್ದರಾಮಯ್ಯ ಮೀಸಲಾತಿ ನೀಡಲ್ಲ ಎಂದು ಶ್ರೀಗಳಿಗೆ ಹೇಳಿದ್ದೇ ಎಂದು ಏಕವಚನದಲ್ಲೇ ಮುಖ್ಯಮಂತ್ರಿ ವಿರುದ್ಧ ಕಿಡಿಕಾರಿದರು.

ಸಿದ್ಧರಾಮಯ್ಯ ಸಿಎಂ ಆದಾಗ ಗದ್ದಲ ಮಾಡುತ್ತಾರೆ. ಪಂಚಮಸಾಲಿ 2ಎ ಮೀಸಲಾತಿಯಲ್ಲಿ ಸಿದ್ದರಾಮಯ್ಯ ನಾಟಕಾ ಮಾಡಿಕೊಂಡು ಹೋಗುತ್ತಿದ್ದಾರೆ. ಸಿಎಂ ಸಿದ್ದರಾಮಯ್ಯ ಮೀಸಲಾತಿ ನೀಡಲ್ಲ. ಬೇರೆಯಾದರೂ ಸಿಎಂ ಆದಾಗ ಪಂಚಮಸಾಲಿಗೆ 2ಎ ಮೀಸಲಾತಿ ಸಿಗಬಹುದು. ಇವನು ಬಏಗ ತೊಲಗಬೇಕು ಎಂದು ಹೇಳಿದರು.

ಇತ್ತೀಚೆಗೆ ಪಂಚಮಸಾಲಿ ಸಮುದಾಯದ ಮೀಸಲಾತಿ ಸಂಬಂಧ ಸಿಎಂ ಸಿದ್ದರಾಮಯ್ಯ ನೇತೃತ್ವದಲ್ಲಿ ಸಭೆ ನಡೆದಿತ್ತು. ಈ ಸಭೆಯಲ್ಲಿ ಸ್ಪಷ್ಟ ತೀರ್ಮಾನ ಕೈಗೊಳ್ಳಲು ವಿಫಲವಾಗಿದೆ ಎಂದು ಪಂಚಮಸಾಲಿ ಪೀಠದ ಶ್ರೀ ಬಸವಜಯ ಮೃತ್ಯುಂಜಯ ಸ್ವಾಮೀಜಿ ತಿಳಿಸಿದ್ದರು.

ಪಂಚಮಸಾಲಿ ಮೀಸಲಾತಿ ಸಂಬಂಧ ಗೃಹ ಕಚೇರಿ ಕೃಷ್ಣಾದಲ್ಲಿ ಸಿಎಂ ಸಿದ್ದರಾಮಯ್ಯ ಜೊತೆ ಸಭೆ ನಡೆಸಿದ ಬಳಿಕ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಚುನಾವಣಾ ನೀತಿ ಸಂಹಿತೆ ಹಿನ್ನೆಲೆಯಲ್ಲಿ ಸಿಎಂ ಸಿದ್ದರಾಮಯ್ಯ ಅವರು ಯಾವುದೇ ಸ್ಪಷ್ಟ ಭರವಸೆ ನೀಡಿಲ್ಲ. ಮೀಸಲಾತಿ ಈಡೇರಿಸುವ ಬಗ್ಗೆ ಯಾವುದೇ ಸಮಯ ನಿಗದಿ ಮಾಡಿಲ್ಲ. ನಿಮ್ಮ ಜೊತೆ ಚರ್ಚೆಗೆ ಮುಕ್ತವಾಗಿದ್ದೇವೆ ಅಂದಿದ್ದಾರೆ. ಮುಂದೆ ಕಾನೂನು ತಜ್ಞರ ಜೊತೆ ಚರ್ಚಿಸಿ ಮುಂದಿನ ಹೋರಾಟದ ಬಗ್ಗೆ ತೀರ್ಮಾನಿಸುತ್ತೇವೆ ಎಂದು ಸಭೆಯಲ್ಲಿ ಯಾವುದೇ ನಿರೀಕ್ಷಿತ ಭರವಸೆ ಸಿಗದೇ ಇರುವ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದ್ದರು.

ತೀರ್ಮಾನ ಕೈಗೊಳ್ಳಲು ಒಂದು ಸಮಯ ನಿಗದಿ ಮಾಡಿ ಎಂದು ಮನವಿ ಮಾಡಿದೆವು. ಆದರೆ, ಸಿಎಂ ಶಾಶ್ವತವಾದ ಹಿಂದುಳಿದ ವರ್ಗಗಳ ಆಯೋಗದ ಪೂರ್ಣ ವರದಿ ಬಂದಿಲ್ಲ. ವರದಿ ಬಂದ ಬಳಿಕ ಯಾವಾಗ ಜಾರಿ ಎಂಬ ಬಗ್ಗೆ ದಿನಾಂಕ ಹೇಳಿ ಎಂದು ಮನವಿ ಮಾಡಿದರೂ ಸಿಎಂ ಅದಕ್ಕೆ ಒಪ್ಪಲಿಲ್ಲ. ಹಿಂದಿನ ಸರ್ಕಾರ ಘೋಷಿಸಿರುವ 2ಆ ಮೀಸಲಾತಿ ಜಾರಿಗೆ ತನ್ನಿ, ಇಲ್ಲವಾದರೆ 2೦ ಮೀಸಲಾತಿ ನೀಡಿ. ಅದೂ ಆಗಿಲ್ಲವಾದರೆ ಒಬಿಸಿಗಾದರೂ ಸೇರಿಸಿ ಎಂಬ ಬಗ್ಗೆ ಮನವಿ ಮಾಡಿದ್ದೇವೆ ಎಂದು ಶ್ರೀಗಳು ತಿಳಿಸಿದರು.

# ನಿರುದ್ಯೋಗ ಯುವಕ ಯುವತಿಯರಿಗಾಗಿ ನ.20. ರಂದು ಉದ್ಯೋಗ ಮೇಳ

**ಬಳ್ಳಾರಿ ನ.14–** ನಿರುದ್ಯೋಗ ಯುವಕ ಯುವತಿಯರಿಗಾಗಿ ಉದ್ಯೋಗ ಮೇಳವನ್ನು ಸಮರ್ಥನಂ ಅಂಗವಿಕಲರ ಸಂಸ್ಥೆ ಬಳ್ಳಾರಿ, ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಬಳ್ಳಾರಿ ಮತ್ತು ಬಿ.ಪಿ.ಎಸ್.ಸಿ. ಪ್ರೀ–ಯೂನಿವರ್ಸಿಟಿ ಕಾಲೇಜು, ಬಳ್ಳಾರಿ ಇವರುಗಳ ಸಂಯುಕ್ತ ಆಶ್ರಯದಲ್ಲಿ ದಿ.20.11.2024 ರಂದು ಬಿ.ಪಿ.ಎಸ್.ಸಿ. ಪ್ರೀ–ಯೂನಿವರ್ಸಿಟಿ ಕಾಲೇಜು, "ಜ್ಞಾನ ಮಂದಿರ ಪಟೇಲ್ ನಗರ್, ಅನಂತಪುರ ರೋಡ್, ಬಳ್ಳಾರಿಯಲ್ಲಿ ಹಮ್ಮಿ ಕೊಳ್ಳಲಾಗಿದೆ". ಸಮಯ ಬೆಳಿಗ್ಗೆ 9:00 ಘಂಟೆಯಿಂದ ಮಧ್ಯಾಹ್ನ 2:00 ಘಂಟೆಯ ವರೆಗೆ. ಈ ಉದ್ಯೋಗ ಮೇಳಕ್ಕೆ ವಯೂಮಿತಿ 18 ರಿಂದ 35 ವರ್ಷ ಇರಬೇಕು ಮತ್ತು ಶೈಕ್ಷಣಿಕ ವಿದ್ಯಾರ್ಹತೆಯು ಎಸ್.ಎಸ್.ಎಲ್.ಸಿ, ಐ.ಟಿ.ಐ, ಡಿಪ್ಲೊಮ್, ಪದವಿ ಪೂರ್ವ, ಪದವಿ ಮತ್ತು ಸ್ನಾತಕೋತ್ತರ ಪದವಿ ಪಡೆದಿರುವಂತಹ ಎಲ್ಲಾ ಉದ್ಯೋಗಾರ್ಥಿ ಅಭ್ಯರ್ಥಿಗಳು ಅರ್ಹರಾಗಿರುತ್ತಾರೆ. ಹಲವಾರು ಉದ್ಯೋಗಾಕಾಂಕ್ಷಿಗಳಿಗೆ ಉದ್ಯೋಗಾವಕಾಶಗಳನ್ನು ಹೆಚ್ಚಿಸುವುದು ಈ ಉದ್ಯೋಗ ಮೇಳದ ಉದ್ದೇಶವಾಗಿದೆ. ಈ ಮೇಳದಲ್ಲಿ 20ಕ್ಕೂ ಹೆಚ್ಚು ಉದ್ಯೋಗದಾತರ ಭಾಗವಹಿಸುವಿಕೆಯನ್ನು ನಾವು ನಿರೀಕ್ಷಿಸುತ್ತಿದ್ದೇವೆ. ಆದಕಾರಣ ಎಲ್ಲಾ ಅರ್ಹ ಅಭ್ಯರ್ಥಿಗಳು ತಮ್ಮ ಶೈಕ್ಷಣಿಕ ಸ್ವವಿವರಗಳೊಂದಿಗೆ ಆಗಮಿಸಿ ಈ ಉದ್ಯೋಗ ಮೇಳದ ಲಾಭವನ್ನು ಪಡೆದು ನಿಮ್ಮ ಉಜ್ವಲ ಭವಿಷ್ಯವನ್ನು ರೂಪಿಸಿಕೊಳ್ಳಬೇಕೆಂದು ಕಳಕಳಿಯಾಗಿ ವಿನಂತಿಸಿ ಕೋಳ್ಳುತ್ತಿದ್ದೇವೆ.

ವಿಕಲಚೇತನರ ಮತ್ತು ಹಿಂದುಳಿದವರ ಸಬಲೀಕರಣಕ್ಕಾಗಿ ಕೆಲಸ ಮಾಡುತ್ತಿದೆ. ಈ ಉದ್ಯೋಗ ಮೇಳವನ್ನು ಯಶಸ್ವಿಗೊಳಿಸಲು ತಮ್ಮ ಅಮೂಲ್ಯವಾದ ಬೆಂಬಲವನ್ನು ಬಯಸುತ್ತಿದ್ದೇವೆ. ನಿಮ್ಮ ಬೆಂಬಲವು ಅರ್ಹರನ್ನು ತಲುಪಲು ನಮಗೆ ಸಹಾಯ ಮಾಡುತ್ತದೆ ಮತ್ತು ವಿಕಲಚೇತನರು ಮತ್ತು ವಿಕಲೇತಚೇತನರು ಉದ್ಯೋಗ ಪಡೆಯುವುದರ ಮುಖಾಂತರ ತಮ್ಮ ಉಜ್ವಲ ಭವಿಷ್ಯವನ್ನು ರೂಪಿಸಿಕೋಳ್ಳುವಲ್ಲಿ ಪತ್ರಿಕೋದ್ಯಮದ ಸಹಾಯ ಸಹಕಾರ ಅಪಾರ ಕೊಡುಗೆಯಾಗಲಿದೆ. ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಬೇಕಾದ ಸಂಖ್ಯೆ: +91 9148792888 / 9148793888 / 9480812138.

# ಭತ್ತ ಖರೀದಿ ಕೇಂದ್ರ ಸ್ಥಾಪನೆಗೆ ಆಗ್ರಹಿಸಿದ ಮಾಜಿ ಶಾಸಕ ಸೋಮಲಿಂಗಪ್ಪ

**ಬಳ್ಳಾರಿ, ನ.14–** ಸಿರುಗುಪ್ಪ ಮಾಜಿ ಶಾಸಕರಾದ ಎಂ ಎಸ್ ಸೋಮಲಿಂಗಪ್ಪ ಅವರು ತಾಲೂಕು ದಂಡಾಧಿಕಾರಿಗಳಿಗೆ ಮನವಿ ಪತ್ರವನ್ನು ನೀಡಿದರು ಸಿರುಗುಪ್ಪ ತಾಲೂಕಿನಲ್ಲಿ 25 ಪರ್ಸೆಂಟ್ ಭತ್ತ ಕಟವಾಗಿದ್ದು, ಆದರೆ ರೈತರು ಬೆಳೆದ ಬೆಳೆಯು ಸೂಕ್ತ ಬೆಲೆ ಇಲ್ಲದಂತಾಗಿದೆ ಅತ್ಯಂತ ಕಡಿಮೆ ಬೆಲೆಯ 1800 ರಿಂದ 1900 ರೂಪಾಯಿಗಳಿಗೆ ಮಾರಾಟ ಮಾಡುವ ದುಸ್ತಿತಿ ಎದುರಾಗಿದೆ ಬೇರೆ ಎಲ್ಲಾ ತಾಲೂಕಿನಲ್ಲಿ ಭತ್ತ ಕರೆದಿ ಕೇಂದ್ರಗಳು ಆರಂಭಗೊಂಡಿದ್ದು ನಮ್ಮ ಸಿರುಗುಪ್ಪ ತಾಲೂಕಿನಲ್ಲಿ ಮಾತ್ರ ಇನ್ನೂ ಬತ್ತ ಕೇಂದ್ರಗಳು ಆರಂಭಗೊಂಡಿರುವುದಿಲ್ಲ, ಕೇಂದ್ರ ಸರ್ಕಾರವು ಈಗಾಗಲೇ ಸಣ್ಣ ಅಕ್ಕಿ ಭತ್ತಕ್ಕೆ ಪ್ರತಿ ಕ್ವಿಂಟಲ್ ಗೆ 2320 ದಪ್ಪ ಅಕ್ಕಿ ಭತ್ತಕ್ಕೆ 2300 ಬೆಲೆ ನಿಗದಿಪಡಿಸಿದ್ದು, ಇದೇ ಬೆಲೆಗೆ ರೈತರಿಂದ ಖರೀದಿಸಲು ಸೂಚಿಸಿದೆ ಆದರೆ ಘನ ಸರ್ಕಾರವು ಭತ್ತ ಕಟಾವಿಗೆ ಬಂದು ಶೇಕಡ 25 ರಿಂದ 30 ಭಾಗ ಕಟಾವು ಪೂರ್ಣಗೊಂಡಿದ್ದರು ನಮ್ಮ ತಾಲೂಕಿನಲ್ಲಿ ಮಾತ್ರ ಯಾವುದೇ ಭತ್ತ ಖರೀದಿ ಕೇಂದ್ರ ಸ್ಥಾಪನೆ ಗೊಂಡಿಲ್ಲ ಎಂದು ಆಗ್ರಹವನ್ನು ವ್ಯಕ್ತ ಪಡಿಸಿದರು.



ಈ ತಾಲೂಕಿನ ರೈತರ ದುರ್ದೈವವಾಗಿದೆ ಇದರಿಂದ ಸಾಮಾನ್ಯ ರೈತರು ಜನಸಾಮಾನ್ಯರಲ್ಲಿ ಸಾಲ ಸೂಲಾ ಮಾಡಿ ತಂದ ಹಣಕ್ಕೆ ಬಡ್ಡಿ ಪಾವತಿಸಬೇಕು ಅಂತ ಪರಿಸ್ಥಿತಿ ಎದುರಾಗಿದೆ, ಕಾರಣ ತಾವುಗಳು ತಕ್ಷಣ ಘನ ಸರ್ಕಾರದಿಂದ ರೈತರ ಭತ್ತ ಬೆಳೆಗೆ ಸೂಕ್ತ ಮಾರುಕಟ್ಟೆ ಬೆಲೆಯನ್ನು ಕೇಂದ್ರ ಸರ್ಕಾರ ನಿಗದಿಪಡಿಸಿದಂತೆ ಈ ತಕ್ಷಣ ಸಿರುಗುಪ್ಪ ತಾಲೂಕಿನಲ್ಲಿ ಭತ್ತ ಕರೆದ ಕೇಂದ್ರ ಸ್ಥಾಪಿಸಿ ರೈತರಿಂದ ತಕ್ಷಣ ಭತ್ತವನ್ನು ಖರೀದಿಸುವ ಪ್ರಕ್ರಿಯೆ ಆರಂಭಿಸಬೇಕು ಹಾಗೂ ತಾಲೂಕಿನಲ್ಲಿ ಅಕ್ರಮ ಮರಳು ಸಾಗಾಣಿಕೆ ತಡೆದು ನಿರ್ದಿಷ್ಟ ಬೆಲೆಗೆ ಜನಸಾಮಾನ್ಯ ನಾಗರಿಕರಿಗೂ ದೊರಕುವಂತೆ ಕ್ರಮ ವಹಿಸಬೇಕು ಎಂದರು.

ಪ್ರಸ್ತುತ ಪ್ರಧಾನಮಂತ್ರಿಯ ಆವಾಸ್ ಯೋಜನೆ ಮನೆಗಳು ಮಂಜೂರಾಗಿದ್ದು ನಿರ್ಮಾಣ ಮಾಡಲು ಮರಳು ಸಿಗದೇ ತೊಂದರೆ ಅನುಭವಿಸುತ್ತಿದ್ದಾರೆ, ನಮ್ಮ ಸಿರುಗುಪ್ಪ ತಾಲೂಕಿನಲ್ಲಿ ಒಟ್ಟು ಎಂಟು ಮರಳು ಕೇಂದ್ರ ಬಿಂದುಗಳನ್ನು ಗುರುತಿಸಿದ್ದು ಇಲ್ಲಿಂದ ಮರಳು ಖರೀದಿಸಲು ಯಾವುದೇ ಟೆಂಡರ್ ಪ್ರಕ್ರಿಯೆ ಜರುಗದೆ ಇರುವುದರಿಂದ ಮರಳು ಪಡೆಯಲು ಜನಸಾಮಾನ್ಯರಿಗೆ ತೊಂದರೆ ಅನುಭವಿಸುತ್ತಿದ್ದಾರೆ.

ಗರಸು ಸಾಗಣೆಗೂ ವಿಪರೀತ ನಿರ್ಬಂಧಗಳನ್ನು ಹೇರಿದ್ದು ರೈತರು ತಮ್ಮ ತಮ್ಮ ಹೊಲ ಗದ್ದೆಯ ಗರಿಸು ತೆಗೆದು ಬೇರೆಡೆಗೆ ಹಾಕಿಕೊಳ್ಳಲು ಸಹ ನಿರ್ಬಂಧಗಳನ್ನು ಹೇರಿದ್ದು ಶಾಸಕರ ಹಿಂಬಾಲಕರು ಬ್ರೋಕರ್ಗಳು ರಾತ್ರೋರಾತ್ರಿ ಅತ್ಯಂತ ಹೆಚ್ಚಿನ ಬೆಲೆಗೆ 2000 ರಿಂದ 3000 ಗಳವರೆಗೆ ಮಾರಾಟ ಮಾಡುತ್ತಿದ್ದು ಈ ತಕ್ಷಣ ಸಾಧಾರಿ ನಿರ್ಬಂಧವನ್ನು ಸಡಿಲಗೊಳಿಸತಕ್ಕದ್ದು ಇಲ್ಲವಾದಲ್ಲಿ ನಮ್ಮ ಪಕ್ಷದ ವತಿಯಿಂದ ಉಗ್ರವಾದ ಚಳುವಳಿ ಹೋರಾಟವನ್ನು ಹಮ್ಮಿಕೊಳ್ಳಲಾಗುವುದು ಎಂದು ಮಾಜಿ ಶಾಸಕರು ಎಂ ಎಸ್ ಸೋಮಲಿಂಗಪ್ಪ ಅಧಿಕಾರಿಗಳಿಗೆ ತಿಳಿಸಿದರು.

# ಅಮೆರಿಕದ ರಾಷ್ಟ್ರೀಯ ಗುಪ್ತಚರ ವಿಭಾಗದ ನಿರ್ದೇಶಕಿಯಾಗಿ ತುಳಸಿ ಗಬ್ಬಾರ್ಡ್ ನೇಮಕ



**ವಾಷಿಂಗ್ಟನ್,ನ.14:** ಅಮೆರಿಕದ ರಾಷ್ಟ್ರೀಯ ಗುಪ್ತಚರ ವಿಭಾಗದ ನಿರ್ದೇಶಕಿಯಾಗಿ ತುಳಸಿ ಗಬ್ಬಾರ್ಡ್ ಅವರನ್ನು ನಿಯೋಜಿತ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಆಯ್ಕೆ ಮಾಡಿದ್ದಾರೆ. ತುಳಸಿ ಗಬ್ಬಾರ್ಡ್ ಅಮೆರಿಕದ ಮೊದಲ ಹಿಂದೂ ಸಂಸದೆಯಾಗಿದ್ದು ಈ ಮೊದಲು ಡೆಮಾಕ್ರಟಿಕ್ ಪಕ್ಷದಲ್ಲಿದ್ದರು.

2022 ರಲ್ಲಿ ರಿಪಬ್ಲಿಕನ್ ಪಕ್ಷ ಸೇರಿದ ಇವರು ಡೊನಾಲ್ಡ್ ಟ್ರಂಪ್ ಅವರನ್ನು ಅಧ್ಯಕ್ಷ ಸ್ಪರ್ಧೆಗೆ ಅನುಮೋದಿಸಿದ್ದರು. ನ್ಯೂಯಾರ್ಕ್‌ನಲ್ಲಿರುವ ವಿಶ್ವ ವಾಣಿಜ್ಯ ಕ ೇ ಂ ದ ್ರ ದ ಮೇಲೆ ಸೆಪ್ಟೆಂಬರ್ 11, 2001ರಂದು ದಾಳಿ ನಡೆದ ಬಳಿಕ ಅಮೆರಿಕದ ಗುಪ್ತಚರ ಸಂಸ್ಥೆಗಳು ಒಟ್ಟಾಗಿ ಕೆಲಸ ಮಾಡಲು ಮತ್ತು ವೈಫಲ್ಯ ತಡೆಯಲು ಸಹಾಯ ಮಾಡಲು ರಾಷ್ಟ್ರೀಯ ಗುಪ್ತಚರ ವಿಭಾಗವನ್ನು 2004 ರಲ್ಲಿ ರಚಿಸಲಾಯಿತು. ವಿದೇಶಿ ಚುನಾವಣಾ ಹಸ್ತಕ್ಷೇಪ, ಸೈಬರ್ ಸಮಸ್ಯೆ, ಭಯೋತ್ಪಾದನೆ ಮತ್ತು ಬೇಹುಗಾರಿಕೆಯಂತಹ ಬೆದರಿಕೆಗಳ ಮೇಲೆ ಕೇಂದ್ರೀಕರಿಸಿ ಕೆಲಸ ಮಾಡುತ್ತದೆ. 20 ವರ್ಷಗಳ ಸೈನ್ಯದ ಶಾಖೆಯಾದ ನ್ಯಾಷನಲ್ ಗಾರ್ಡ್‌ನಲ್ಲಿ ಸೇವೆ ಸಲ್ಲಿಸಿರುವ ಇವರಿಗೆ ಭಾರತದ ಜೊತೆ ನೇರವಾದ ಸಂಬಂಧ ಇಲ್ಲ. ಆದರೆ ಇವರ ತಾಯಿ ಹಿಂದೂ ಧರ್ಮವನ್ನು ಪಾಲಿಸುತ್ತಿದ್ದ ಹಿನ್ನೆಲೆಯಲ್ಲಿ ಪುತ್ರಿಗೆ ತುಳಸಿ ಎಂದು ಹೆಸರನ್ನು ಇರಿಸಿದ್ದರು. ಬಾಲ್ಯದಲ್ಲಿ ಯೋಗ ಅಭ್ಯಾಸ ಮಾಡುತ್ತಿದ್ದ ಇವರು ಭಗವದ್ಗೀತೆಯಿಂದ ಆಧ್ಯಾತ್ಮಿಕ ವಿಷಯಗಳನ್ನು ಕಲಿತಿದ್ದಾರೆ. ವೈಷ್ಣವ ಹಿಂದೂ ಸಂಘಟನೆಯಾದ ಸೈನ್ಸ್ ಆಫ್ ಐಡೆಂಟಿಟಿ ಫೌಂಡೇಶನ್ ಮತ್ತು ಇಸ್ಕಾನ್ ಸಂಸ್ಥೆಯ ಪ್ರಭಾವದಿಂದಾಗಿ ತುಳಸಿ ಅವರು ಹಿಂದೂ ಜೀವನ ಪದ್ಧತಿಯಂತೆ ಜೀವಿಸುತ್ತಿದ್ದಾರೆ. 2015ರಲ್ಲಿ ಸಿನಿಮಾ ರಂಗದಲ್ಲಿ ಕೆಲಸ ಮಾಡುತ್ತಿರುವ ಅಬ್ರಹಾಂ ವಿಲಿಯಮ್ಸ್ ಅವರನ್ನು ಹಿಂದೂ ಸಂಪ್ರದಾಯದಂತೆ ವಿವಾಹವಾದರು. ಪತಿಯೂ ಹಿಂದೂ ಧರ್ಮವನ್ನು ಪಾಲಿಸುತ್ತಿದ್ದಾರೆ. ಸಂಸತ್ತಿನಲ್ಲಿ ಭಗವದ್ಗೀತೆಯ ಮೇಲೆ ಕೈಯಿಟ್ಟು ತುಳಸಿ ಪ್ರಮಾಣವಚನ ಸ್ವೀಕರಿಸಿದ್ದರು.

2014ರ ಅಮೆರಿಕ ಪ್ರವಾಸದ ಸಂದರ್ಭದಲ್ಲಿ ತುಳಸಿ ಗಬ್ಬಾರ್ಡ್ ಅವರು ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿಯಾಗಿ ಭಗವದ್ಗೀತೆ ಪುಸ್ತಕವನ್ನು ಉಡುಗೊರೆಯಾಗಿ ನೀಡಿದ್ದರು. ಅಷ್ಟೇ ಅಲ್ಲದೇ ಅಂತರಾಷ್ಟ್ರೀಯ ಯೋಗ ದಿನಾಚರಣೆಯ ಪ್ರಧಾನಿಯವರ ಪ್ರಸ್ತಾವನೆಗೆ ಅವರು ಬೆಂಬಲ ವ್ಯಕ್ತಪಡಿಸಿದ್ದರು.

# ಪಾಕ್: 12 ಭಯೋತ್ಪಾದಕರ ಹತ್ಯೆ



**ಪೇಶಾವರ,ನ.14:** ಪಾಕಿಸ್ತಾನದ ಭದ್ರತಾ ಪಡೆಗಳು ಖೈಬರ್ ಪಖ್ತುಂಖ್ವಾ ಮತ್ತು ಬಲೂಚಿಸ್ತಾನ ಪ್ರಾಂತ್ಯದಲ್ಲಿ ನಡೆಸಿದ ಎರಡು ಪ್ರತ್ಯೇಕ ಕಾರ್ಯಾಚರಣೆಗಳಲ್ಲಿ 12 ಭಯೋತ್ಪಾದಕರನ್ನು ಹತ್ಯೆಗೈದಿವೆ ಎಂದು ಸೇನೆಯು ಹೇಳಿದೆ.

ಖೈಬರ್ ಪಖ್ತುಂಖ್ವಾದ ಮಿರಾನ್ಶಾಹ ಜಿಲ್ಲೆಯಲ್ಲಿ ನವೆಂಬರ್ 12–13ರಂದು ನಡೆಸಿದ ಮೊದಲ ಕಾರ್ಯಾಚರಣೆಯಲ್ಲಿ ಎಂಟು ಉಗ್ರರನ್ನು ಸದೆಬಡಿಯಲಾಗಿದೆ. ಈ ಸಂದರ್ಭದಲ್ಲಿ ಆರು ಉಗ್ರರು ಗಾಯಗೊಂಡಿದ್ದಾರೆ ಎಂದು ಮಾಹಿತಿ ನೀಡಿದೆ.

ಭದ್ರತಾ ಪಡೆಗಳು ಬಲೂಚಿಸ್ತಾನದ ಕೆಛ್ ಜಿಲ್ಲೆಯಲ್ಲಿ ನಡೆಸಿದ ಎರಡನೇ ಕಾರ್ಯಾಚರಣೆ ವೇಳೆ ಭಯೋತ್ಪಾದಕರ ಅಡಗುದಾಣದ ಮೇಲೆ ದಾಳಿ ನಡೆಸಲಾಗಿತ್ತು. ಉಗ್ರರು ಮತ್ತು ಭದ್ರತಾ ಪಡೆಗಳಿಂದ ನಡೆದ ದಾಳಿ–ಪ್ರತಿದಾಳಿಯಲ್ಲಿ ಸೇನೆಗೆ ಅಗತ್ಯವಾಗಿ ಬೇಕಾಗಿದ್ದ ಸನಾ ಅಲಿಯಾಸ್ ಬರು ಸೇರಿದಂತೆ ನಾಲ್ವರು ಉಗ್ರರು ಹತರಾಗಿದ್ದಾರೆ ಎಂದು ತಿಳಿಸಿದೆ.

ಬರು, ಮಜೀದ್ ಬ್ರಿಗೇಡ್ ಪಡೆಯ ನೇಮಕಾತಿ ಏಜೆಂಟ್ ಆಗಿ ಅದರಲ್ಲೂ ಮುಖ್ಯವಾಗಿ ಆತ್ಮಾಹುತಿ ಬಾಂಬ್ ದಾಳಿಕೋರರ ನೇಮಕಾತಿ ಏಜೆಂಟ್ ಆಗಿ ಕಾರ್ಯನಿರ್ವಹಿಸುತ್ತಿದ್ದ ಎಂದು ಸೇನೆ ಹೇಳಿದೆ.

# ಶ್ರೀಲಂಕಾ ಸಂಸತ್ ಚುನಾವಣೆ ಬಿಗಿ ಭದ್ರತೆಯಲ್ಲಿ ಮತದಾನ



**ಕೊಲಂಬೊ,ನ.14:** ದ್ವೀಪರಾಷ್ಟ್ರ ಶ್ರೀಲಂಕಾದ ಸಂಸತ್ತಿಗೆ ಚುನಾವಣೆ ನಡೆಯುತ್ತಿದ್ದು, ಮತದಾನ ಆರಂಭವಾಗಿದೆ. ಅಧ್ಯಕ್ಷ ಅನುರಾ ಕುಮಾರ ದಿಸ್ಸನಾಯಕೆ ನೇತೃತ್ವದ ನ್ಯಾಷನಲ್ ಪೀಪಲ್ಸ್ ಪವರ್ ಪಕ್ಷಕ್ಕೆ ಇದು ಮೊದಲ ಅಗ್ನಿ ಪರೀಕ್ಷೆಯಾಗಿದೆ.

ದೇಶದಾದ್ಯಂತ 13,314 ಮತಗಟ್ಟೆಗಳಲ್ಲಿ ಮತದಾನ ನಡೆಯುತ್ತಿದೆ. ಸ್ಥಳೀಯ ಕಾಲಮಾನ ಬೆಳಗ್ಗೆ 7 ಗಂಟೆಗೆ ಮತದಾನ ಆರಂಭವಾಗಿದ್ದು, ಸಂಜೆ 4 ಗಂಟೆಯವರೆಗೆ ನಡೆಯಲಿದೆ. ಮತದಾನ ಮುಗಿದ ಕೂಡಲೇ ಮತ ಎಣಿಕೆ ಪ್ರಕ್ರಿಯೆ ಆರಂಭವಾಗಲಿದೆ ಎಂದು ಚುನಾವಣಾ ಅಧಿಕಾರಿಗಳು ತಿಳಿಸಿದ್ದಾರೆ.

225 ಸದಸ್ಯ ಬಲದ ಸಂಸತ್ತಿಗೆ ಚುನಾವಣೆ ನಡೆಯುತ್ತಿದ್ದು, 17 ಲಕ್ಷ ಮತದಾರರು ಹಕ್ಕು ಚಲಾಯಿಸಲು ಅರ್ಹರಾಗಿದ್ದಾರೆ.

ಭದ್ರತೆಗಾಗಿ ಸುಮಾರು 90 ಸಾವಿರ ಪೊಲೀಸ್ ಮತ್ತು ಮಿಲಿಟರಿ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ.

ಕಳೆದ ತಿಂಗಳ ಅಧ್ಯಕ್ಷೀಯ ಚುನಾವಣೆಯಲ್ಲಿ ದಿಸ್ಸನಾಯಕೆ ವಿರುದ್ಧ ಸೋತಿದ್ದ ರಾನಿಲ್ ವಿಕ್ರಮಸಿಂಘೆ ಅವರು ಇದೇ ಮೊದಲ ಬಾರಿಗೆ ಸಂಸತ್ತಿನ ಚುನಾವಣೆಯಲ್ಲಿ ಸ್ಪರ್ಧಿಸುತ್ತಿಲ್ಲ. ರಾಜಪಕ್ಸೆ ಸಹೋದರರಾದ ಮಹಿಂದಾ, ಗೊಟಬಯ, ಚಮಲ್ ಮತ್ತು ಬೆಸಿಲ್ ಸಹ ಈ ಚುನಾವಣೆಯಲ್ಲಿ ಸ್ಪರ್ಧಿಸುತ್ತಿಲ್ಲ .

ಅಲ್ಲದೇ ಹಿಂದಿನ ಸರ್ಕಾರದ ಹಲವು ಸಚಿವರು ಹಾಗೂ ಸಂಸದರೂ ಚುನಾವಣಾ ಕಣದಿಂದ ಹೊರಗುಳಿದಿದ್ದಾರೆ.

ರಾಷ್ಟ್ರದಲ್ಲಿ 2022ರಲ್ಲಿ ಆರ್ಥಿಕ ಬಿಕ್ಕಟ್ಟು ಎದುರಾದ ಬಳಿಕ ನಡೆಯುತ್ತಿರುವ ಮೊದಲ ಚುನಾವಣೆ ಇದಾಗಿದೆ.

# ಸಂವಿಧಾನದಿಂದ ಜಾತ್ಯತೀತ ಪದ ಕೈಬಿಡಲು ಬಾಂಗ್ಲಾ ಮುಸ್ಲಿಮರ ಆಗ್ರಹ



**ಢಾಕ,ನ14:** ಬಾಂಗ್ಲಾ ದೇಶದ ಅಟಾರ್ನಿ ಜನರಲ್ ಮುಹಮ್ಮದ್ ಅಸಾದುಝಮಾನ್, ದೇಶದ ಜನಸಂಖ್ಯೆಯ 90 ಪ್ರತಿಶತದಷ್ಟು ಮುಸ್ಲಿಮರು ಎಂದು ಪರಿಗಣಿಸಿ ಜಾತ್ಯತೀತ ಪದವನ್ನು ತೆಗೆದುಹಾಕುವುದು ಸೇರಿದಂತೆ ದೇಶದ ಸಂವಿಧಾನದಲ್ಲಿ ಮಹತ್ವದ ತಿದ್ದುಪಡಿಗಳಿಗೆ ಕರೆ ನೀಡಿದ್ದಾರೆ.

ನ್ಯಾಯಮೂರ್ತಿಗಳಾದ ಫರಾಹ್ ಮೆಹಬೂಬ್ ಮತ್ತು ದೇಬಶಿಶ್ ರಾಯ್ ಚೌಧರಿ ಅವರ ಮುಂದೆ 15ನೇ ತಿದ್ದುಪಡಿಯ ಕಾನೂನು ಬದ್ಧತೆಯ ಬಗ್ಗೆ ನ್ಯಾಯಾಲಯದ ವಿಚಾರಣೆಯ ಸಮಯದಲ್ಲಿ ಅಸಾದುಝಮಾನ್ ತಮ್ಮ ವಾದಗಳನ್ನು ಮಂಡಿಸಿದರು. ಈ ಬದಲಾವಣೆಗಳು ಸಂವಿಧಾನವನ್ನು ದೇಶದ ಪ್ರಜಾಪ್ರಭುತ್ವ ಮತ್ತು ಐತಿಹಾಸಿಕ ನೀತಿಗಳೊಂದಿಗೆ ಹೊಂದಿಸುತ್ತವೆ ಎಂದು ಅಟಾರ್ನಿ ಜನರಲ್ ಹೇಳಿದರು.

'ಮೊದಲಿನಂತೆಯೇ ಅದನ್ನು ಬಯಸುತ್ತೇನೆ' ಈ ಹಿಂದೆ, ಅಲ್ಲಾಹನಲ್ಲಿ ನಿರಂತರ ನಂಬಿಕೆ ಇತ್ತು. ಮೊದಲಿನಂತೆಯೇ ನಾನು ಅದನ್ನು ಬಯಸುತ್ತೇನೆ ಎಂದು ಅಸಾದುಝಮಾನ್ ಹೇಳಿದರು.

"ಎಲ್ಲಾ ಧರ್ಮಗಳ ಆಚರಣೆಯಲ್ಲಿ ರಾಜ್ಯವು ಸಮಾನ ಹಕ್ಕುಗಳು ಮತ್ತು ಸಮಾನತೆಯನ್ನು ಖಚಿತಪಡಿಸುತ್ತದೆ ಎಂದು ಅನುಚ್ಛೇದ 2 ಎ ನಲ್ಲಿ ಹೇಳಲಾಗಿದೆ. ಅನುಚ್ಛೇದ 9 'ಬಂಗಾಳಿ ರಾಷ್ಟ್ರೀಯತೆ' ಬಗ್ಗೆ ಮಾತನಾಡುತ್ತದೆ. ಇದು ವಿರೋಧಾಭಾಸವಾಗಿದೆ" ಎಂದು ಅವರು ಹೇಳಿದರು.

# ಅಮೆರಿಕದಲ್ಲಿ ದೀಪಾವಳಿ ಆಚರಣೆ

**ವಾಷಿಂಗ್ಟನ್,ನ.14:** ಅಮೆರಿಕದ ವಾಷಿಂಗ್ಟನ್‌ನಲ್ಲಿ 25ಕ್ಕೂ ಅಧಿಕ ಸಂಸದರು ಮತ್ತು ಭಾರತೀಯ ಮೂಲದ ಪ್ರಮುಖ ಅಮೆರಿಕನ್ನರು ಸಂಸತ್ ಭವನದಲ್ಲಿ ದೀಪಾವಳಿ ಹಬ್ಬವನ್ನು ಆಚರಿಸಿದರು.

ಅಧ್ಯಕ್ಷೀಯ ಚುನಾವಣೆ ನಂತರ ಅಮೆರಿಕ ಸರ್ಕಾರ ಆಚರಿಸಿದ ಮೊಟ್ಟ ಮೊದಲ ಪ್ರಮುಖ ಹಬ್ಬ ಇದಾಗಿದೆ.

ಬಿಎಪಿಎಸ್ ಸ್ವಾಮಿನಾರಾಯಣ ಮಂದಿರ ಮತ್ತು ಹಿಂದೂ ಅಮೆರಿಕನ್ ಫೌಂಡೇಷನ್, ಸಿಖ್ಸ್ ಫಾರ್ ಅಮೆರಿಕ, ಜೈನ್ ಅಸೋಸಿಯೇಷನ್ ಆಫ್ ನಾರ್ತ್ ಅಮೆರಿಕ, ಆರ್ಟ್ ಆಫ್ ಲಿವಿಂಗ್ ಸೇರಿದಂತೆ ಹಲವು ಭಾರತೀಯ ಅಮೆರಿಕನ್ ಸಂಘಟನೆಗಳ ಸಹಭಾಗಿತ್ವದಲ್ಲಿ ಇತ್ತೀಚೆಗೆ ದೀಪಾವಳಿ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಸೆನೆಟರ್ ರ್‍ಯಾಂಡ್ ಪೌಲ್ ಅವರು, 'ಅಮೆರಿಕವು ವಲಸಿಗರ ಭೂಮಿ. ವಿಶ್ವದ ಅತ್ಯುತ್ತಮ ಸಂಗತಿಗಳನ್ನು ಅದು ಆಕರ್ಷಿಸುತ್ತದೆ' ಎಂದು ಹೇಳಿದರು. ಮಿಸಿಸಿಪ್ಪಿ ಸೆನೆಟರ್ ಸಿಂಡಿ ಹೈದೆ–ಸ್ಮಿತ್ ಅವರು, 'ಈ ದೇಶದ ಸಮೃದ್ಧಿಯನ್ನು ನಾವು ಬಯಸುತ್ತೇವೆ. ಹೊಸದನ್ನು ಬಯಸುವವರು ಹೊಸದನ್ನು ಮಾಡಬೇಕು. ನಮಗೆ ಸ್ಥಿರ ವಾತಾವರಣ, ಅತ್ಯುತ್ತಮ ಆರ್ಥಿಕತೆ ಬೇಕಿದೆ' ಎಂದು ಹೇಳಿದರು.




# ವೆಸ್ಟ್ ಇಂಡೀಸ್, ಐರ್ಲೆಂಡ್ ವಿರುದ್ಧ ಏಕದಿನ ಟಿ20 ಸರಣಿ: ಬಿಸಿಸಿಐನಿಂದ ವೇಳಾಪಟ್ಟಿ ಪ್ರಕಟ

ಭಾರತೀಯ ಮಹಿಳಾ ಕ್ರಿಕೆಟ್ ತಂಡವು 2024–25ರಲ್ಲಿ ವೆಸ್ಟ್ ಇಂಡೀಸ್ ಮತ್ತು ಐರ್ಲೆಂಡ್ ವಿರುದ್ಧ ಏಕದಿನ ಮತ್ತು ಟಿ20 ಸರಣಿಗಳನ್ನು ಆಡಲಿದೆ. ವೆಸ್ಟ್ ಇಂಡೀಸ್ ವಿರುದ್ಧ ಡಿಸೆಂಬರ್‌ನಲ್ಲಿ ಮೂರು ಟಿ20 ಮತ್ತು ಮೂರು ಏಕದಿನ ಪಂದ್ಯಗಳು ನಡೆಯಲಿವೆ.

ಜನವರಿ 2025ರಲ್ಲಿ ಐರ್ಲೆಂಡ್ ವಿರುದ್ಧ ಮೂರು ಏಕದಿನ ಪಂದ್ಯಗಳ ಸರಣಿ ನಡೆಯಲಿದೆ. ಈ ಎಲ್ಲಾ ಪಂದ್ಯಗಳ ವೇಳಾಪಟ್ಟಿಯನ್ನು ಬಿಸಿಸಿಐ ಬಿಡುಗಡೆ ಮಾಡಿದೆ.

ಇತ್ತೀಚೆಗಷ್ಟೆ ಮುಕ್ತಾಯಗೊಂಡ ಮೂರು ಪಂದ್ಯಗಳ ಏಕದಿನ ಸರಣಿಯಲ್ಲಿ ಹಾಲಿ ಟಿ20 ಚಾಂಪಿಯನ್ ನ್ಯೂಜಿಲೆಂಡ್ ತಂಡವನ್ನು ಮಣಿಸಿದ್ದ ಭಾರತ ವನಿತಾ ಪಡೆ, ಇದೀಗ ವೆಸ್ಟ್ ಇಂಡೀಸ್ ಮತ್ತು ಐರ್ಲೆಂಡ್ ವಿರುದ್ಧ ಕಣಕ್ಕಿಳಿಯಲು ಸಜ್ಜಾಗಿದೆ. ಉಭಯ ತಂಡಗಳ ವಿರುದ್ಧ ಏಕದಿನ ಮತ್ತು ಟಿ20 ಸರಣಿಗಳನ್ನು ಆಡಲಿರುವ ಭಾರತ ವನಿತಾ ಪಡೆ, ಶೀಘ್ರದಲ್ಲೇ ವೆಸ್ಟ್ ಇಂಡೀಸ್ ಮತ್ತು ಐರ್ಲೆಂಡ್ ಮಹಿಳಾ ಕ್ರಿಕೆಟ್ ತಂಡಗಳಿಗೆ ಆತಿಥ್ಯವಹಿಸಲು ಸಜ್ಜಾಗಿದೆ. ಮೊದಲು ಟೀಂ ಇಂಡಿಯಾ, ವೆಸ್ಟ್ ಇಂಡೀಸ್ ವಿರುದ್ಧ ಸರಣಿ ಆಡಲಿದ್ದು, ಬಳಿಕ ಐರ್ಲೆಂಡ್ ತಂಡವನ್ನು ಎದುರಿಸಲಿದೆ. ಈ ಎರಡೂ ಸರಣಿಗಳ ವೇಳಾಪಟ್ಟಿಯನ್ನು ಬಿಸಿಸಿಐ ಪ್ರಕಟಿಸಿದೆ.



### ವೆಸ್ಟ್ ಇಂಡೀಸ್ ವಿರುದ್ಧ ಸರಣಿ

ಮೊದಲನೆಯದಾಗಿ ವೆಸ್ಟ್ ಇಂಡೀಸ್ ತಂಡ ಡಿಸೆಂಬರ್‌ನಲ್ಲಿ ಭಾರತ ಪ್ರವಾಸ ಕೈಗೊಳ್ಳಲಿದೆ. ಮುಂಬೈನ ಡಿವೈ ಪಾಟೀಲ್ ಸ್ಟೇಡಿಯಂನಲ್ಲಿ ಭಾರತ ಮತ್ತು ವೆಸ್ಟ್ ಇಂಡೀಸ್ ನಡುವೆ ಮೂರು ಪಂದ್ಯಗಳ ಟಿ20 ಸರಣಿ ನಡೆಯಲಿದೆ. ಟಿ20 ಸರಣಿಯ ಎಲ್ಲಾ ಪಂದ್ಯಗಳು ಭಾರತೀಯ ಕಾಲಮಾನ ರಾತ್ರಿ 7:30 ರಿಂದ ಆರಂಭವಾಗಲಿವೆ. ಇದಾದ ಬಳಿಕ ಬರೋಡಾದಲ್ಲಿ ಮೂರು ಪಂದ್ಯಗಳ ಏಕದಿನ ಸರಣಿ ನಡೆಯಲಿದೆ. ಏಕದಿನ ಸರಣಿಯ ಮೊದಲ ಎರಡು ಪಂದ್ಯಗಳು ಮಧ್ಯಾಹ್ನ 1:30ಕ್ಕೆ ಮತ್ತು ಮೂರನೇ ಪಂದ್ಯ ಬೆಳಗ್ಗೆ 9:30ಕ್ಕೆ ಆರಂಭವಾಗಲಿದೆ.

### ಟಿ20 ಸರಣಿ ವೇಳಾಪಟ್ಟಿ

**ಭಾರತ vs ವೆಸ್ಟ್ ಇಂಡೀಸ್, ಮೊದಲನೇ ಟಿ20– 15 ಡಿಸೆಂಬರ್**

**ಭಾರತ vs ವೆಸ್ಟ್ ಇಂಡೀಸ್, 2ನೇ ಟಿ20 – 17 ಡಿಸೆಂಬರ್**

**ಭಾರತ vs ವೆಸ್ಟ್ ಇಂಡೀಸ್, 3ನೇ ಟಿ20 – 19 ಡಿಸೆಂಬರ್**

### ಏಕದಿನ ಸರಣಿ ವೇಳಾಪಟ್ಟಿ

**ಭಾರತ vs ವೆಸ್ಟ್ ಇಂಡೀಸ್, ಮೊದಲನೇ ಏಕದಿನ ಪಂದ್ಯ – 22 ಡಿಸೆಂಬರ್**

**ಭಾರತ vs ವೆಸ್ಟ್ ಇಂಡೀಸ್, 2ನೇ ಏಕದಿನ ಪಂದ್ಯ – 24 ಡಿಸೆಂಬರ್**

**ಭಾರತ vs ವೆಸ್ಟ್ ಇಂಡೀಸ್, ಮೂರನೇ ಏಕದಿನ ಪಂದ್ಯ – 27 ಡಿಸೆಂಬರ್**

## ಐರ್ಲೆಂಡ್ ವಿರುದ್ಧದ ಸರಣಿಯ ವಿವರ

ವೆಸ್ಟ್ ಇಂಡೀಸ್ ನಂತರ, ಐರ್ಲೆಂಡ್ ಮಹಿಳಾ ಕ್ರಿಕೆಟ್ ತಂಡವು ಜನವರಿ 2025 ರಲ್ಲಿ ಭಾರತ ಪ್ರವಾಸ ಮಾಡಲಿದೆ.

ರಾಜ್ಕೋಟ್‌ನಲ್ಲಿ ಐರ್ಲೆಂಡ್ ವಿರುದ್ಧ ಟೀಂ ಇಂಡಿಯಾ ಮೂರು ಪಂದ್ಯಗಳ ಏಕದಿನ ಸರಣಿಯನ್ನು ಆಡಲಿದೆ. ವೆಸ್ಟ್ ಇಂಡೀಸ್ ಮತ್ತು ಐರ್ಲೆಂಡ್ ವಿರುದ್ಧದ ಏಕದಿನ ಸರಣಿಯು ಐಸಿಸಿ ಮಹಿಳಾ ಚಾಂಪಿಯನ್‌ಶಿಪ್‌ನ ಭಾಗವಾಗಿದೆ.

### ಏಕದಿನ ಸರಣಿ ವೇಳಾಪಟ್ಟಿ

ಭಾರತ vs ಐರ್ಲೆಂಡ್ ಮೊದಲನೇ ಏಕದಿನ – ಜ.10

ಭಾರತ vs ಐರ್ಲೆಂಡ್ 2ನೇ ಏಕದಿನ ಜ.12

ಭಾರತ vs ಐರ್ಲೆಂಡ್ 3ನೇ ಏಕದಿನ ಜ.15

# ಜಪಾನ್ ಮಾಸ್ಟರ್ಸ್ ಸಿಂಧು ನಿರ್ಗಮನ ಭಾರತದ ಸವಾಲು ಅಂತ್ಯ



**ಜಪಾನ್,ನ.14:** ಎರಡು ಬಾರಿಯ ಒಲಿಂಪಿಕ್ ಪದಕ ವಿಜೇತೆ ಪಿ.ವಿ.ಸಿಂಧು, ಕುಮಾಮೊಟೊ ಮಾಸ್ಟರ್ಸ್ ಜಪಾನ್ ಸೂಪರ್ 500 ಬ್ಯಾಡ್ಮಿಂಟನ್ ಟೂರ್ನಿಯ ಪ್ರಿಕ್ವಾರ್ಟರ್ ಫೈನಲ್‌ನಲ್ಲಿ ಸೋಲನುಭವಿಸಿದರು.

ಇದರೊಂದಿಗೆ ಈ ಟೂರ್ನಿಯಲ್ಲಿ ಭಾರತದ ಸವಾಲು ಅಂತ್ಯಗೊಂಡಿತು.

ವಿಶ್ವಕ್ರಮಾಂಕದಲ್ಲಿ 20ನೇ ಸ್ಥಾನದಲ್ಲಿರುವ ಸಿಂಧು ಗುರುವಾರ ನಡೆದ ಮಹಿಳಾ ಸಿಂಗಲ್ಸ್ ಎರಡನೇ ಸುತ್ತಿನ ಪಂದ್ಯದಲ್ಲಿ 21–17, 16–21, 17–21 ರಲ್ಲಿ ಕೆನಡಾದ ಮಿಚೆಲ್ ಲಿ ಎದುರು ಸೋಲನುಭವಿಸಿದರು.

ಕ್ರಮಾಂಕಪಟ್ಟಿಯಲ್ಲಿ 23ನೇ ಸ್ಥಾನದಲ್ಲಿರುವ ಕೆನಡಾದ ಆಟಗಾರ್ತಿ ಒಂದು ಗಂಟೆ 15 ನಿಮಿಷಗಳಲ್ಲಿ ಪಂದ್ಯ ಗೆದ್ದರು.

ಮುಂದಿನ ಸುತ್ತಿನಲ್ಲಿ ಲಿ ಅವರು ದಕ್ಷಿಣ ಕೊರಿಯಾದ ಯು ಜಿನ್ ಸಿಮ್ ವಿರುದ್ಧ ಆಡಲಿದ್ದಾರೆ. ಭಾರತದ ಲಕ್ಷ್ಯ ಸೇನ್ ಪುರುಷರ ಸಿಂಗಲ್ಸ್ ಮೊದಲ ಸುತ್ತಿನಲ್ಲೇ ಹೊರಬಿದ್ದಿದ್ದರು. ಮಹಿಳಾ ಡಬಲ್ಸ್‌ನಲ್ಲಿ ಟ್ರಿಸಾ ಜೋಳಿ ಮತ್ತು ಗಾಯತ್ರಿ ಗೋಪಿಚಂದ್ ಸಹ ಕೂಡ ಮೊದಲ ಸುತ್ತಿನಲ್ಲಿ ನಿರ್ಗಮಿಸಿದ್ದರು.

# ಸೋಲಿನ ಕೊಂಡಿ ಕಳಚಿದ ಜೈಂಟ್ಸ್

**ನೊಯ್ಡಾ,ನ.14:** ನಾಯಕ ಗುಮಾನ್ ಸಿಂಗ್ ಅವರ ಅಮೋಘ ಆಟದ ಬಲದಿಂದ ಗುಜರಾತ್ ಜೈಂಟ್ಸ್ ತಂಡ ಪ್ರೊ ಕಬಡ್ಡಿ ಲೀಗ್ ಪಂದ್ಯದಲ್ಲಿ ಬೆಂಗಾಲ್ ವಾರಿಯರ್ಸ್ ತಂಡವನ್ನು 47–28 ರಲ್ಲಿ 19 ಅಂಕಗಳಿಂದ ಮಣಿಸಿತು.

ಇದರೊಂದಿಗೆ ಸರಣಿ ಸೋಲುಗಳ ನಂತರ ಟೂರ್ನಿಯಲ್ಲಿಎರಡನೇ ಜಯ ದಾಖಲಿಸುವಲ್ಲಿ ಜೈಂಟ್ಸ್

ಯಶಸ್ವಿಯಾಯಿತು. ಹಿಂದಿನ ಪಂದ್ಯದಲ್ಲಿ ಬೆಂಗಳೂರು ಬುಲ್ಸ್ ವಿರುದ್ಧ ಗೆಲುವಿನ ಲಯಕ್ಕೆ ಮರಳಿದ್ದ ಬೆಂಗಾಲ್, ಸ್ಥಿರತೆ ಕಾಯ್ದುಕೊಳ್ಳಲು ವಿಫಲವಾಯಿತು.

ನೊಯ್ಡಾ ಒಳಾಂಗಣ ಕ್ರೀಡಾಂಗಣ

ದಲ್ಲಿ ಬುಧವಾರ ನಡೆದ ಮೊದಲ ಪಂದ್ಯದ ಉಭಯ ಅವಧಿಗಳಲ್ಲಿ ಜೈಂಟ್ಸ್ ತಂಡ ರೇಡಿಂಗ್ ಮತ್ತು ಟ್ಯಾಕಲ್‌ಗಳಲ್ಲಿ ಮಿಂಚಿತು. ಗುಮಾನ್ ಸಿಂಗ್ 17 ಅಂಕ ಕಲೆಹಾಕಿ ಪಂದ್ಯದ ಗೆಲುವಿನ ರೂವಾರಿಯೆನಿಸಿರು. ಪ್ರತೀಕ್ ದಹಿಯಾ, ಹಿಮಾಂಶು ಮತ್ತು ಜಿತೇಂದರ್ ಯಾದವ್ ತಲಾ 6 ಅಂಕಗಳನ್ನು ಕಲೆಹಾಕಿದರು.



ಬೆಂಗಾಲ್ ತಂಡದ ಪರ ನಿತಿನ್ ಕುಮಾರ್ 11 ಅಂಕ ಗಳಿಸಿದರೆ, ಸುಶೀಲ್ ಕಂಬ್ರೇಕರ್ 5 ಅಂಕ ತಂದರು. ಆದರೆ ಸ್ಟಾರ್ ರೇಡರ್ ಮಣಿಂದರ್ ಸಿಂಗ್ ಮತ್ತು ಫಜಲ್ ಅತ್ರಾಚಲಿ ನಿರೀಕ್ಷಿತ ಪ್ರದರ್ಶನ ನೀಡಲು ವಿಫಲರಾಗಿದ್ದು ಬೆಂಗಾಲ್ ದುಬಾರಿಯಾಯಿತು.

ಅಗ್ರಸ್ಥಾನದಲ್ಲಿರುವ ಹರಿಯಾಣ ಸ್ಟೀಲರ್ಸ್ ತಂಡ ಇನ್ನೊಂದು ಪಂದ್ಯದಲ್ಲಿ 37–32 ಪಾಯಿಂಟ್‌ಗಳಿಂದ ಪಟ್ನಾ ಪೈರೇಟ್ಸ್ ತಂಡವನ್ನು ಮಣಿಸಿತು.

**ಗುರುವಾರದ ಪಂದ್ಯಗಳು:** ಯು.ಪಿ. ಯೋಧಾಸ್– ತೆಲುಗು ಟೈಟನ್ಸ್ (ರಾತ್ರಿ 8.00); ತಮಿಳ್ ತಲೈವಾಸ್ –ಯು ಮುಂಬಾ (ರಾತ್ರಿ 9.00)

# ತೆಲುಗು ಟೈಟಾನ್ಸ್ ಕಟ್ಟಿಹಾಕಿದ ಯುಪಿ ಯೋಧಾಸ್

11ನೇ ಆವೃತ್ತಿಯ ಪ್ರೋ ಕಬಡ್ಡಿ ಟೂರ್ನಿಯ 53ನೇ ಪಂದ್ಯದಲ್ಲಿ ತೆಲುಗು ಟೈಟಾನ್ಸ್ ತಂಡವನ್ನು ಯುಪಿ ಯೋಧಾಸ್ ಕಟ್ಟಿಹಾಕಿದೆ.

ಯುಪಿ ಯೋಧಾಸ್ 40–34 ಅಂಕಗಳಿಂದ ತೆಲುಗು ಟೈಟಾನ್ಸ್ ತಂಡವನ್ನು ಸೋಲಿಸಿದೆ. ಇದರೊಂದಿಗೆ ಯುಪಿ ಯೋಧಾಸ್ ಆಡಿದ 9 ಪಂದ್ಯಗಳಲ್ಲಿ 4ರಲ್ಲಿ ಗೆದ್ದರೆ, 5ರಲ್ಲಿ ಸೋಲು ಕಂಡಿದ್ದು 25 ಅಂಕಗಳನ್ನು ಗಳಿಸಿ 8 ಸ್ಥಾನದಲ್ಲಿದೆ.

ಮತ್ತೊಂದೆಡೆ ತೆಲುಗು ಟೈಟಾನ್ಸ್ ಆಡಿದ 9 ಪಂದ್ಯಗಳಲ್ಲಿ 5 ಜಯ, 4 ಸೋಲಿನೊಂದಿಗೆ 27 ಅಂಕಗಳ ಕಲೆ ಹಾಕಿದ್ದು, 6ನೇ ಸ್ಥಾನದಲ್ಲಿದೆ.

